ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 112, ಪುಟಗಳು: 8, ಗುರುವಾರ, 1 ಫೆಬ್ರವರಿ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಗುರುವಾರ 1, ಫೆಬ್ರವರಿ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಕೃಷ್ಣ ಪಕ್ಷ,
- ತಿಥಿ: ಷಷ್ಠಿ
- ನಕ್ಷತ್ರ: ಹಸ್ತ
- ರಾಹುಕಾಲ: 12.36 ರಿಂದ 2.03
- ಗುಳಿಕಕಾಲ: 11.09 ರಿಂದ 12.36
- ಯಮಗಂಡಕಾಲ: 8.15 ರಿಂದ 9.42

## ಸಂಕ್ಷಿಪ್ತ ಸುದ್ದಿ

### ಬಿಟ್ ಕಾಯಿನ್ ಕೇಸ್: ಇಬ್ಬರು ಆರೋಪಿಗಳಿಗೆ ನ್ಯಾಯಾಂಗ ಬಂಧನ



**ಬೆಂಗಳೂರು:** ಬಿಟ್ ಕಾಯಿನ್ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳಿಗೆ 1ನೇ ಎಸಿಎಂಎಂ ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿದೆ. 6 ದಿನಗಳ ಕಾಲ ಪೊಲೀಸ್ ಕಸ್ಟಡಿಯಲ್ಲಿದ್ದ ಇನ್ಸ್‌ಪೆಕ್ಟರ್ ಪ್ರಶಾಂತ್ ಬಾಬು ಮತ್ತು ಟೆಕ್ನಿಕಲ್ ಎಕ್ಸ್‌ಪರ್ಟ್ ಸಂತೋಷ್ 14 ದಿನ ನ್ಯಾಯಾಂಗ ಬಂಧನಕ್ಕೆ ಹೋಗಿದ್ದಾರೆ. ಪುಟ 2

### ಕರ್ನಾಟಕ ಹೈಕೋರ್ಟ್ ಸಿಜೆಯಾಗಿ ದಿನೇಶ್ ಕುಮಾರ್ ನೇಮಕ



**ಬೆಂಗಳೂರು:** ನ್ಯಾಯಮೂರ್ತಿ ಪಿ.ಎಸ್. ದಿನೇಶ್ ಕುಮಾರ್ ಅವರನ್ನು ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ನೇಮಕ ಮಾಡಲಾಗಿದೆ. ನ್ಯಾಯಮೂರ್ತಿ ಕುಮಾರ್ ಅವರು ಈಗ ಕರ್ನಾಟಕ ಹೈಕೋರ್ಟ್‌ನ ಹಂಗಾಮಿ ಮುಖ್ಯ ನ್ಯಾಯಮೂರ್ತಿ ಯಾಗಿದ್ದಾರೆ. ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಆಗಿದ್ದ ಪ್ರಸನ್ನ ಬಿ. ವರಾಳೆ ಅವರು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಯಾಗಿ ಪದೋನ್ನತಿ ಹೊಂದಿದ ಹಿನ್ನೆಲೆಯಲ್ಲಿ ಹಂಗಾಮಿ ಸಿಜೆಯಾಗಿ ನೇಮಕಗೊಂಡಿದ್ದರು. ಪುಟ 2

### ಇಡೀ ಮನೆಯನ್ನೇ ಸುಟ್ಟ ದೇವರ ಮುಂದೆ ಹಚ್ಚಿಟ್ಟಿದ್ದ ದೀಪ

**ದಾವಣಗೆರೆ:** ದೇವರ ಮುಂದೆ ಹಚ್ಚಿಟ್ಟಿದ್ದ ದೀಪ ಇಡೀ ಮನೆಯನ್ನೇ ಸುಟ್ಟು ಹಾಕಿದೆ. ದಾವಣಗೆರೆ ಜಿಲ್ಲೆಯ ಜಗಳೂರು ತಾಲೂಕಿನ ತೋರಣಗಟ್ಟೆ ಗ್ರಾಮದ ಮನೆಯೊಂದರಲ್ಲಿ ಈ ಘಟನೆ ನಡೆದಿದೆ. ನಿನ್ನೆ ರಾತ್ರಿ ಒಂಬತ್ತು ಗಂಟೆ ಸುಮಾರಿಗೆ ದೇವರ ಮುಂದೆ ಹಚ್ಚಿಟ್ಟಿದ್ದ ದೀಪದಿಂದ ಬೆಂಕಿ ತಗುಲಿ ಮನೆಯಲ್ಲಿದ್ದ ವಸ್ತು, ಧಾನ್ಯ, ಹಣ ಭಸ್ಮವಾಗಿದೆ. ಪುಟ 2

## ಕರ್ನಾಟಕದ ಇಳಕಲ್ ನೀಲಿ ಸೀರೆಯಲ್ಲಿ ಮಿಂಚಿದ ನಿರ್ಮಲಾ ಸೀತಾರಾಮನ್

# ಕುತೂಹಲ ಮೂಡಿಸಿದ ಬಜೆಟ್

**ನವದೆಹಲಿ:** ನಿರ್ಮಲಾ ಸೀತಾರಾಮನ್ 2019ರಿಂದ ಬಜೆಟ್ ಮಂಡಿಸುತ್ತಿದ್ದಾರೆ. ಪ್ರತೀ ವರ್ಷ ಅವರು ಯಾವ್ಯಾವುದಕ್ಕೆ ಎಷ್ಟೆಷ್ಟು ಅನುದಾನ ಕೊಡುತ್ತಾರೆ ಎನ್ನುವ ಕುತೂಹಲದ ಜೊತೆಗೆ ಅವರು ಯಾವ ರೂಢಿ ಅಥವಾ ಸಂಪ್ರದಾಯಕ್ಕೆ ತಿಲಾಂಜಲಿ ಹಾಡುತ್ತಾರೆ ಎಂಬುದೂ ಕುತೂಹಲ ಮೂಡಿಸುತ್ತದೆ. ಜೊತೆಗೆ ಅವರು ಯಾವ ಬಣ್ಣದ ಸೀರೆ ತೊಡುತ್ತಾರೆ ಎಂಬ ಕುತೂಹಲವೂ ಹಲವರಲ್ಲಿ ಇದೆ. 2019ರಿಂದ ಅವರು ಪ್ರತೀ ಬಜೆಟ್ ನಲ್ಲಿ ಬೇರೆ ಬೇರೆ ಬಣ್ಣದ ಸೀರೆ ತೊಟ್ಟಿದ್ದಾರೆ. ಕಳೆದ ವರ್ಷದ ಬಜೆಟ್ ನಲ್ಲಿ (2023ರದ್ದು) ಅವರು ಕೆಂಪು ಬಣ್ಣದ ಇಳಕಲ್ ಸೀರೆ ತೊಟ್ಟು ಮಿಂಚಿದ್ದರು. ಈ ಬಾರಿಯ ಮಧ್ಯಂತರ ಬಜೆಟ್ ನಲ್ಲಿ ಅವರು ನೀಲಿ ಮತ್ತು ಕ್ರೀಮ್ ಬಣ್ಣದ ಛಾಯೆ ಇರುವ ಸೀರೆ ತೊಟ್ಟಿದ್ದಾರೆ.

ನಿರ್ಮಲಾ ಸೀತಾರಾಮನ್ ಈ ಬಾರಿ ತೊಟ್ಟಿರುವ ನೀಲಿ ಬಣ್ಣದ ಸೀತೆ ತುಸ್ಸಾರ್ ರೇಷ್ಮೆಯದ್ದು. ಪಶ್ಚಿಮ ಬಂಗಾಳ, ಬಿಹಾರ, ಝಾರ್ಖಂಡ್, ಒಡಿಶಾ ಪ್ರದೇಶಗಳಲ್ಲಿ ಸಿಗುವ ರೇಷ್ಮೆಯಿಂದ ಈ ಸೀರೆ ನೇಯಲಾಗುತ್ತದೆ.

**ಪ್ರಹ್ಲಾದ್ ಜೋಷಿ ಗಿಫ್ಟ್ ಕೊಟ್ಟಿದ್ದ ಸೀರೆ:** ಕಳೆದ ವರ್ಷ ನಿರ್ಮಲಾ ಸೀತಾರಾಮನ್ ತೊಟ್ಟಿದ್ದ ಇಳಕಲ್ ಸೀರೆ ಉತ್ತರ ಕರ್ನಾಟಕದಲ್ಲಿ ಬಹಳ ಪ್ರಸಿದ್ಧವಾಗಿರುವ ಸೀರೆ. ಕೆಂಪು ಬಣ್ಣದ ಇಳಕಲ್ ಸೀರೆಯಲ್ಲಿ ಸಾಕಷ್ಟು ಕಸೂತಿ ಕಲೆ ಮೇಳೈಸಿತ್ತು. ಪ್ರಹ್ಲಾದ್ ಜೋಷಿ ಈ ಸೀರೆಯನ್ನು ನಿರ್ಮಲಾ ಸೀತಾರಾಮನ್ ಅವರಿಗೆ ಉಡುಗೊರೆಯಾಗಿ ನೀಡಿದ್ದರು. ಅದನ್ನೇ ಬಜೆಟ್ ಮಂಡನೆ ದಿನ ಹಣಕಾಸು ಸಚಿವರು ತೊಟ್ಟು ಹೋಗಿದ್ದರು. ಪುಟ 2



## ಎಲ್‌ಪಿಜಿ ಸಿಲಿಂಡರ್ ಬೆಲೆ ಏರಿಕೆ

**ನವದೆಹಲಿ:** ಕೇಂದ್ರ ಬಜೆಟ್ ಮಂಡನೆಗೂ ಮುನ್ನವೇ ವಾಣಿಜ್ಯ ಬಳಕೆಯ ಎಲ್ ಪಿಜಿ ಸಿಲಿಂಡರ್ ಗ್ರಾಹಕರಿಗೆ ಸರ್ಕಾರ ಶಾಕ್ ನೀಡಿದೆ. ವಾಣಿಜ್ಯ ಬಳಕೆಯ 19 ಕೆಜಿ ಸಿಲಿಂಡರ್ ದರ 14 ರೂಪಾಯಿ ಏರಿಕೆ ಮಾಡಲಾಗಿದೆ. ಗೃಹಬಳಕೆಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ವಾಣಿಜ್ಯ ಬಳಕೆಯ ಸಿಲಿಂಡರ್‌ಗಳ ಪರಿಷ್ಕೃತ ಬೆಲೆ ಇಂದಿನಿಂದ (ಫೆಬ್ರವರಿ 1) ಅನ್ವಯವಾಗಲಿದೆ. ಕಳೆದ ತಿಂಗಳು ಕೂಡ ತೈಲ ಕಂಪನಿಗಳು ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್ ಬೆಲೆಯನ್ನು ತುಸು ಹೆಚ್ಚಳ ಮಾಡಿದ್ದವು.



**ಯಾವ ನಗರದಲ್ಲಿ ಎಷ್ಟು ದರ:** ಬೆಲೆ ಹೆಚ್ಚಳದ ಬಳಿಕ ದೆಹಲಿಯಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ 1769.50 ರೂ. ತಲುಪಿದೆ. ಕೋಲ್ಕತ್ತಾದಲ್ಲಿ 19 ಕೆಜಿಯ ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ 1887.00 ರೂ.ಗೆ ತಲುಪಿದೆ. ಮುಂಬೈನಲ್ಲಿ 1723.50 ರೂ., ಚೆನ್ನೈನಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ 1937 ರೂ.ಗೆ ತಲುಪಿದೆ.

ಕಳೆದ ಮೂರು ವರ್ಷಗಳಲ್ಲಿ ಗೃಹಬಳಕೆಯ ಸಿಲಿಂಡರ್ ಗಳ ದರ 17 ಬಾರಿ ಬದಲಾಗಿದ್ದು, ವಾಣಿಜ್ಯ ಸಿಲಿಂಡರ್ ಗಳ ದರ ಬಹುತೇಕ ಪ್ರತಿ ತಿಂಗಳು ಬದಲಾಗುತ್ತಿದೆ. ಈ ಬದಲಾವಣೆಗಳಿಂದಾಗಿ, ಕೆಲವೊಮ್ಮೆ ಗ್ರಾಹಕರಿಗೆ ಪ್ರಯೋಜನವಾದರೆ ಇನ್ನು ಕೆಲವೊಮ್ಮೆ ಸಮಸ್ಯೆಗಳನ್ನು ಎದುರಿಸಬೇಕಾಗಿದೆ. ಐಒಸಿ ಅಂಕಿಅಂಶಗಳ ಪ್ರಕಾರ, ಪುಟ 2

## ನಿರ್ಮಲಾ ಅವರ ಮೊದಲ ಬಜೆಟ್ ಹೇಗಿತ್ತು?

**ನವದೆಹಲಿ:** ನಿರ್ಮಲಾ ಸೀತಾರಾಮನ್ ಅವರಿಗೆ ಇಂದಿನದ್ದು ಸತತ ಆರನೇ ಬಜೆಟ್ ಮಂಡನೆ ಆಗಿದೆ. ಕರ್ನಾಟಕದಿಂದ ರಾಜ್ಯಸಭೆಗೆ ಆಯ್ಕೆ ಆಗಿರುವ ನಿರ್ಮಲಾ ಸೀತಾರಾಮನ್ ತಮಿಳುನಾಡು ಮೂಲದವರು. ರಾಜಕೀಯಕ್ಕೆ ಬಹಳ ತಡವಾಗಿ ಬಂದವರಾದರೂ ಉನ್ನತ ಹುದ್ದೆಗಳನ್ನು ಬಹಳ ಬೇಗ ಗಳಿಸಿ ತಮ್ಮ ಕ್ಷಮತೆಯನ್ನೂ ನಿರೂಪಿಸಿದ್ದಾರೆ. ರಕ್ಷಣಾ ಖಾತೆ, ಹಣಕಾಸು ಖಾತೆ, ಕಾರ್ಪೊರೇಟ್ ವ್ಯವಹಾರಗಳ ಖಾತೆ, ವಾಣಿಜ್ಯ ಮತ್ತು ಉದ್ಯಮ ಖಾತೆಗಳನ್ನು ಅವರು ನಿಭಾಯಿಸಿದ್ದಾರೆ. ಇಂದಿರಾ ಗಾಂಧಿ ನಂತರ ರಕ್ಷಣಾ ಖಾತೆ ನಿಭಾಯಿಸಿದ ಮೊದಲ ಮಹಿಳೆ ನಿರ್ಮಲಾ ಸೀತಾರಾಮನ್.

2019ರಲ್ಲಿ ಪಾಕಿಸ್ತಾನದ ಬಾಲಾಕೋಟ್ ಮೇಲೆ ಭಾರತೀಯ ಸೇನೆ ವಾಯುದಾಳಿ ಮಾಡಿದಾಗ ರಕ್ಷಣಾ ಖಾತೆಯಲ್ಲಿ ಇದ್ದದ್ದು ನಿರ್ಮಲಾ ಸೀತಾರಾಮನ್ ಅವರೆಯೇ.

ನಿರ್ಮಲಾ ಸೀತಾರಾಮನ್ ಅವರ ಹುಟ್ಟೂರು ತಮಿಳುನಾಡಿನ ಮದುರೈ. ಅಯ್ಯಂಗಾರಿ ಕುಟುಂಬಕ್ಕೆ ಸೇರಿದವರು. ವಿಲಿಪ್ಪುರಂ, ತಿರುಚ್ಚಿಯಲ್ಲಿ ಇವರು ಬಿಎವರೆಗೆ ಓದಿ ಬಳಿಕ ದೆಹಲಿಯ ಜೆಎನ್ ಯುನಲ್ಲಿ ಎಂಎ ಮಾಡಿದರು. ಬಳಿಕ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ನಲ್ಲಿ ಉನ್ನತ ವ್ಯಾಸಂಗ ಮಾಡಿದರು.

2008ರಲ್ಲಿ ಬಿಜೆಪಿ ಸೇರಿದ ಅವರು 2014ರವರೆಗೂ ಪಕ್ಷದ ರಾಷ್ಟ್ರೀಯ ವಕ್ತಾರೆಯಾಗಿದ್ದರು. 2014ರಲ್ಲಿ ನರೇಂದ್ರ ಮೋದಿ ಪ್ರಧಾನಿಯಾದಾಗ ಇವರು ಕಿರಿಯ ಸಚಿವೆಯಾದರು. ಲೋಕಸಭಾ ಚುನಾವಣೆ ಬದಲು ಇವರು ರಾಜ್ಯಸಭೆಯಿಂದ ಸಂಸತ್ತಿಗೆ ಆಯ್ಕೆಯಾಗುತ್ತಾ ಬರುತ್ತಿದ್ದಾರೆ. 2016ರಿಂದ ಇವರು ಕರ್ನಾಟಕದಿಂದಲೇ ರಾಜ್ಯಸಭೆಗೆ ಆಯ್ಕೆ ಆಗುತ್ತಿದ್ದಾರೆ. ಅದಕ್ಕೂ ಮುನ್ನ 2014ರಿಂದ 2016ರವರೆಗೆ ಇವರು ಆಂಧ್ರಪ್ರದೇಶದಿಂದ ರಾಜ್ಯಸಭೆಗೆ ಆಯ್ಕೆ ಆಗಿದ್ದರು.

ನಿರ್ಮಲಾ ಸೀತಾರಾಮನ್ ಅವರ ಚೊಚ್ಚಲ ಬಜೆಟ್: 2019ರಲ್ಲಿ ನರೇಂದ್ರ ಮೋದಿ ನೇತೃತ್ವದ ಎನ್ ಡಿಎ ಎರಡನೇ ಅವಧಿಗೆ ಸರ್ಕಾರ ರಚಿಸಿತ್ತು. ಪುಟ 2

## ನೆಹರೂರಿಂದ ತೊಡಗಿ ರಾಜೀವ್ ಗಾಂಧಿವರೆಗೆ ಬಜೆಟ್ ಮಂಡಿಸಿದ ಪ್ರಧಾನಿಗಳ ವಿವರ



**ನವದೆಹಲಿ:** ಇಂದು (ಫೆಬ್ರವರಿ 1) ಕೇಂದ್ರ ಬಜೆಟ್ ಮಂಡನೆಯಾಗುತ್ತಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ತಮ್ಮ ಮೊದಲ ಮಧ್ಯಂತರ ಬಜೆಟ್ ಮಂಡಿಸುತ್ತಿದ್ದಾರೆ. ಆದರೆ ದೇಶದಲ್ಲಿ ಹಣಕಾಸು ಸಚಿವರಿಗೆ ಬಜೆಟ್ ಮಂಡನೆ ಸಾಧ್ಯವಾಗದೇ ಹಲವು ಬಾರಿ ಪ್ರಧಾನಿಯೇ ಬಜೆಟ್ ಮಂಡಿಸಿದ ಸಂದರ್ಭಗಳೂ ಇವೆ. ಅವುಗಳ ವಿವರ ಇಲ್ಲಿದೆ.



ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ತಮ್ಮ ಮೊದಲ ಮಧ್ಯಂತರ ಬಜೆಟ್ ಅನ್ನು ರಂದು ಮಂಡಿಸುತ್ತಿದ್ದಾರೆ. ಆದಾಗ್ಯೂ, ಭಾರತದ ಇತಿಹಾಸದಲ್ಲಿ, ಬಜೆಟ್ ಮಂಡಿಸಲು ಸಾಧ್ಯವಾಗದ ಅನೇಕ ಹಣಕಾಸು ಮಂತ್ರಿಗಳು ಇದ್ದಾರೆ. ಆವಾಗಲೆಲ್ಲ ಪ್ರಧಾನ ಮಂತ್ರಿಗಳು ಬಜೆಟ್ ಮಂಡಿಸಿದ್ದಾರೆ.

ಜವಾಹರಲಾಲ್ ನೆಹರು ಅವರು ದೇಶದ ಮೊದಲ ಪ್ರಧಾನಿ ಮಾತ್ರವಲ್ಲ, ದೇಶದ ಬಜೆಟ್ ಮಂಡಿಸಿದ ಮೊದಲ ಪ್ರಧಾನಿಯೂ ಹೌದು. ಜಸ್ಟಿಸ್ ಚಾಗ್ಲಾ ಆಯೋಗವು ಟಿ.ಟಿ.ಕೃಷ್ಣಮಾಚಾರಿ ಅವರನ್ನು ಭ್ರಷ್ಟಾಚಾರದಲ್ಲಿ ತಪ್ಪಿತಸ್ಥರೆಂದು ಘೋಷಿಸಿದಾಗ, ಅವರು ಹಣಕಾಸು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದರು ಮತ್ತು ಪಂಡಿತ್ ನೆಹರು 1958-59 ರ ಬಜೆಟ್ ಮಂಡಿಸಿದರು.

ನೆಹರೂ ನಂತರ ಅವರ ಪುತ್ರಿ ಇಂದಿರಾ ಗಾಂಧಿ ಕೂಡ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ದೇಶದ ಬಜೆಟ್ ಮಂಡಿಸಿದ್ದರು. ಮೊರಾರ್ಜಿ ದೇಸಾಯಿ ಅವರು ಹಣಕಾಸು ಸಚಿವಾಲಯಕ್ಕೆ ರಾಜೀನಾಮೆ ನೀಡಿದ ನಂತರ ಇಂದಿರಾ ಗಾಂಧಿಯವರು 1970 ರಲ್ಲಿ ಬಜೆಟ್ ಮಂಡಿಸಿದರು. ದೇಶದ ಮೊದಲ ಮಹಿಳಾ ಹಣಕಾಸು ಸಚಿವೆಯೂ ಆದರು. ಅವರ ನಂತರ ನಿರ್ಮಲಾ ಸೀತಾರಾಮನ್ ದೇಶದ ಮೊದಲ ಪೂರ್ಣಾವಧಿ ಮಹಿಳಾ ಹಣಕಾಸು ಸಚಿವರಾದರು.

ಇಂದಿರಾ ಗಾಂಧಿಯವರ ನಂತರ ರಾಜೀವ್ ಗಾಂಧಿ ಅವರು ಪ್ರಧಾನಿ ಹುದ್ದೆಯಲ್ಲಿದ್ದಾಗ ದೇಶದ ಬಜೆಟ್ ಮಂಡಿಸಿದರು. 1987-88ರಲ್ಲಿ ವಿ.ಪಿ. ಸಿಂಗ್ ಅವರು ಹಣಕಾಸು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದರು ಮತ್ತು ನಂತರ ರಾಜೀವ್ ಗಾಂಧಿ ಈ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕಾಯಿತು. ಅವರ ನಂತರ ನಾರಾಯಣ ದತ್ ತಿವಾರಿ ದೇಶದ ಹಣಕಾಸು ಸಚಿವರಾದರು.

ಅಧಿಕಾರದಲ್ಲಿದ್ದಾಗ ದೇಶದ ಬಜೆಟ್ ಮಂಡಿಸಲು ಸಾಧ್ಯವಾಗದ ದೇಶದ ಹಣಕಾಸು ಸಚಿವರಲ್ಲಿ ನಾರಾಯಣ್ ದತ್ ತಿವಾರಿ ಕೂಡ ಒಬ್ಬರು. ಅವರು ಉತ್ತರ ಪ್ರದೇಶ ಮತ್ತು ಉತ್ತರಾಖಂಡದಂತಹ ರಾಜ್ಯಗಳ ಮುಖ್ಯಮಂತ್ರಿಯಾಗಿದ್ದರು. ನಂತರ ಅವರನ್ನು ಆಂಧ್ರಪ್ರದೇಶದ ರಾಜ್ಯಪಾಲರನ್ನಾಗಿಯೂ ಮಾಡಲಾಯಿತು.

ಹೇಮಾವತಿ ನಂದನ್ ಬಹುಗುಣ ಅವರು ಇಂದಿರಾಗಾಂಧಿ ಅವರ ಸರ್ಕಾರ ದಲ್ಲಿ ಸುಮಾರು ಐದೂವರೆ ತಿಂಗಳ ಕಾಲ ಹಣಕಾಸು ಸಚಿವರಾಗಿದ್ದರು. ಪುಟ 2

# ಹೇಮಂತ್ ಸೋರೆನ್ ಅರೆಸ್ಟ್

## ಚಂಪಾಯಿ ಸೋರೆನ್ ಮುಂದಿನ ಜಾರ್ಖಂಡ್ ಸಿಎಂ

**ರಾಂಚಿ:** ಜಾರ್ಖಂಡ್ ಸಿಎಂ ಹೇಮಂತ್ ಸೋರೆನ್ ಬಂಧಿಸವುದು ಖಚಿತವಾಗುತ್ತಲೇ ಆಡಳಿತ ಪಕ್ಷದ ಶಾಸಕರು ಸಭೆ ನಡೆಸಿ, ಹೇಮಂತ್ ಸೋರೆನ್ ಆಪ್ತ, ಸಚಿವ ಚಂಪಾಯಿ ಸೋರೆನ್‌ರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಿದ್ದಾರೆ.

ರಾಜ್ಯಪಾಲರನ್ನು ಭೇಟಿ ಮಾಡಿರುವ ಆಡಳಿತ ಪಕ್ಷದ ಶಾಸಕರು, ಚಂಪಾಯಿ ಸೋರೆನ್‌ರನ್ನು ಮುಖ್ಯಮಂತ್ರಿ ಮಾಡುವಂತೆ ಮನವಿ ಮಾಡಿದ್ದಾರೆ. ಗುರುವಾರ ಚಂಪಾಯಿ ಸೋರೇನ್ ಸಿಎಂ ಆಗಿ ಅಧಿಕಾರ ಸ್ವೀಕರಿಸುವ ಸಂಭವ ಇದೆ.

**ಸೋರೆನ್ ಅರೆಸ್ಟ್:** ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹೇಮಂತ್ ಸೋರೆನ್ ಅವರನ್ನು ಬುಧವಾರ ಸಂಜೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಬಂಧಿಸಿದ್ದಾರೆ. ಭಾರೀ ಭದ್ರತೆ ನಡುವೆ ರಾಂಚಿಯ ಸಿಎಂ ನಿವಾಸಕ್ಕೆ ಮಧ್ಯಾಹ್ನ ಬಂದ ಇ.ಡಿ ಅಧಿಕಾರಿಗಳು ಸತತ 8 ಗಂಟೆ ವಿಚಾರಣೆ ನಡೆಸಿ ಬಂಧನ ಮಾಡಿದರು.

ಇತ್ತ ಸೋರೆನ್ ಬಂಧನಕ್ಕೆ ಜೆಎಂಎಂ ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ಸಿಎಂ ನಿವಾಸ, ರಾಜಭವನ, ಇಡಿ ಕಚೇರಿ ಬಳಿ ನಿಷೇಧಾಜ್ಞೆ ವಿಧಿಸಲಾಗಿದೆ. ರಾಂಚಿ ಭದ್ರತೆಗೆ 7 ಸಾವಿರ ಪೊಲೀಸರನ್ನು ನಿಯೋಜಿಸಲಾಗಿದೆ. ಇಡಿ ಅಧಿಕಾರಿಗಳ ವಿರುದ್ಧ ಹೇಮಂತ್ ಸೋರೆನ್ ಅಟ್ರಾಸಿಟಿ ಕೇಸ್ ದಾಖಲಿಸಿದ್ದಾರೆ.



## ಸೆಲ್ಫಿ ವೀಡಿಯೊ ಮಾಡಿ ಮಗನ ಕಣ್ಮುಂದೆ ಆತ್ಮಹತ್ಯೆಯತ್ನ

**ಬೆಂಗಳೂರು:** ಅದು ರಾಜಧಾನಿ ಬೆಂಗಳೂರಿನ ಪಕ್ಕದಲ್ಲೆ ಇರುವ ಪ್ರಕೃತಿ ಸೊಬಗಿನ ಸುಂದರ ತಾಣ, ಆ ತಾಣದಲ್ಲೊಂದು ಸೂಸೈಡ್ ಸ್ಪಾಟ್ ಇದೆ. ಅಲ್ಲಿ ಯಾರೂ ಆತ್ಮಹತ್ಯೆ ಮಾಡಿಕೊಳ್ಳಬಾರದು ಅಂತ ಸರ್ಕಾರ ಹತ್ತು ಅಡಿ ಎತ್ತರದ ಗೋಡೆ ನಿರ್ಮಿಸಿದೆ. ಆದ್ರೂ ಬೆಂಗಳೂರಿನ ಮಹಿಳೆಯೊಬ್ಬರು ತಮ್ಮ ಮಗನ ಜೊತೆ ಅಲ್ಲಿಗೆ ಹೋಗಿ ಮಗನ ಕೈಲ್ಲಿ ಮೊಬೈಲ್, ಚಿನ್ನಾಭರಣಗಳನ್ನು ನೀಡಿ ಸೆಲ್ಫಿ ವೀಡಿಯೊವನ್ನು ಮಾಡಿ ಇನ್ನೇನು ನಾಲ್ಕು ಸಾವಿರ ಅಡಿಗಳಿಂದ ಧುಮುಕ ಬೇಕಿತ್ತು ಅಷ್ಟರಲ್ಲಿ ಆಗಿದ್ದೇ ಬೇರೆ. ಅಷ್ಟಕ್ಕೂ ಅಲ್ಲಿ ಆಗಿದ್ದಾದ್ರೂ ಏನ್ ಅಂತೀರಾ ಈ ವರದಿ ನೋಡಿ!!

ನನ್ನ ಗಂಡ, ಅತ್ತೆ, ಅವರ ಸಂಬಂಧಿಕರು ಸೇರಿ ನನಗೆ ಮಾನಸಿಕ ಕಿರುಕುಳ ನೀಡಿದ್ದಾರೆ. ನನ್ನ ಸಾವಿಗೆ ನನ್ನ ಗಂಡ ನವೀನ್ ಕಾರಣ ಅಂತ ಸೆಲ್ಫಿ ವೀಡಿಯೊ ಮಾಡಿ ಮಗನ ಕಣ್ಮುಂದೆ ಆತ್ಮಹತ್ಯೆ ಮಾಡಿಕೊಳ್ಳಲು ಯತ್ನಿಸಿದ್ದ ಈ ಮಹಿಳೆಯ ಹೆಸರು ಕಾವ್ಯಾ, ಬೆಂಗಳೂರಿನ ಕೆ.ಆರ್. ಪುರಂ ಮೂಲದ ಗೃಹಿಣಿ.

ಚಿಕ್ಕಬಳ್ಳಾಪುರ ತಾಲೂಕಿನ ನಂದಿಗಿರಿಧಾಮಕ್ಕೆ ತನ್ನ ಮಗನ ಜೊತೆ ಆಗಮಿಸಿ ಮೈಮೇಲಿದ್ದ



ಚಿನ್ನಾಭರಣಗಳು ಮೊಬೈಲ್ ಪರ್ಸ್ ನ್ನು ಮಗನ ಕೈಯಲ್ಲಿ ಕೊಟ್ಟು ಇನ್ನೇನು ನಂದಿಗಿರಿಧಾಮದ ಟಿಪ್ಪು ಡ್ರಾಪ್ ನಿಂದ ಕೆಳಗೆ ಜಿಗಿಯಬೇಕಿತ್ತು ಅಷ್ಟರಲ್ಲಿ ಆಕೆಯ ಮಗ ಜೋರಾಗಿ ಕಿರುಚಿಕೊಂಡಿದ್ದಾನೆ. ಆಗ ಅಲ್ಲೆ ಇದ್ದ ಪ್ರವಾಸಿ ಮಿತ್ರ ಸಿಬ್ಬಂದಿ ನಳಿನಿ ಅನ್ನೊ ಮಹಿಳೆ ತಕ್ಷಣ ಸಾರ್ವಜನಿಕರ ಸಹಾಯದಿಂದ ಕಾವ್ಯಾರನ್ನು ರಕ್ಷಿಸಿ ಮನವೊಲಿಸಿದ್ದಾರೆ.

ನಂದಿಗಿರಿಧಾಮದ ಟಿಪ್ಪು ಡ್ರಾಪ್ ಹಾಗೂ ಅಕ್ಕಪಕ್ಕದಲ್ಲಿ ಯಾರೂ ಆತ್ಮಹತ್ಯೆ ಮಾಡಿಕೊಳ್ಳಬಾರದು, ಪುಟ 2

## ಧರ್ಮರಾಯ ದೇಗುಲದಲ್ಲಿ ಮೂರ್ತಿ ಕಳವು

# ಪೋತರಾಜ ಮೂರ್ತಿ ತಮಿಳುನಾಡಿಗೆ ಶಿಫ್ಟ್!

**ಬೆಂಗಳೂರು:** ರಾಜಧಾನಿ ಬೆಂಗಳೂರಿನ ದ್ರೌಪದಮ್ಮನ ಕರಗ ಅಂದರೆ ಭಾರೀ ಪ್ರಖ್ಯಾತಿಯಿದೆ. ಕರಗ ಹೊರುವ ವಿಚಾರದಲ್ಲಿ ವಿವಾದ ರೂಪ ಪಡೆಯುತ್ತಿದ್ದ ಧರ್ಮರಾಯಸ್ವಾಮಿ ದೇವಸ್ಥಾನ, ಈ ಬಾರಿ ಕಳವು ಆರೋಪದಲ್ಲಿ ಸುದ್ದಿಯಾಗ್ತಿದೆ. ಸ್ವತಃ ಕರಗ ಹೊರುವ ಅರ್ಚಕರೇ ಕಳವು ಮಾಡಿದ್ದಾರೆ ಎನ್ನಲಾಗ್ತಿದೆ.

**ತಮಿಳುನಾಡಿನಲ್ಲಿ ವಿಗ್ರಹ ಕರಗಿಸಿರುವ ಬಗ್ಗೆ ಮಾಹಿತಿ:** ಕೆಲವು ವರ್ಷಗಳ ಹಿಂದೆ ವೀರ ಕುಮಾರರೊಬ್ಬರು ಪೋತರಾಜ ವಿಗ್ರಹವನ್ನು ದಾನವಾಗಿ ನೀಡಿದರು. ಆ ವಿಗ್ರಹ ಈಗ ಕಾಣೆಯಾಗಿದೆ. ವಿಗ್ರಹವನ್ನು ತಮಿಳುನಾಡಿನಲ್ಲಿ ಕರಗಿಸಿರುವ ಬಗ್ಗೆ ಮಾಹಿತಿ ಹೊರಬಿದ್ದಿದೆ. ಈ ಬಗ್ಗೆ ಧರ್ಮರಾಯ ಸ್ವಾಮಿ ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಸತೀಶ್ ಮುಜರಾಯಿ ಇಲಾಖೆಗೆ ದೂರು ಕೊಟ್ಟಿದ್ದಾರೆ. ಪುಟ 2



## ಕಾಶಿ ವಿಶ್ವನಾಥನನ್ನ ಬಿಜೆಪಿ ವಿಶ್ವನಾಥ ಎನ್ನಬೇಡಿ

**ರಾಯಚೂರು:** ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಮಂದಿರ ಒಡೆದು ಮಸೀದಿ ಕಟ್ಟಿದ್ದರು ವಾರಣಾಸಿ ನ್ಯಾಯಾಲಯದ ತೀರ್ಪು ಸಂತೋಷ ತಂದಿದೆ. ಬಿಜೆಪಿ ರಾಮ ಅಂತ ಕೆಲ ಕಾಂಗ್ರೆಸ್ ನವರು ಕರೆಯುತ್ತಿದ್ದರು. ಈ ತೀರ್ಪಿನ ಮೂಲಕ ಬಿಜೆಪಿ ಕಾಶಿ ವಿಶ್ವನಾಥ ಎಂದು ಕರೆಯಬೇಡಿ. ಇಲ್ಲಿನ ಮುಸ್ಲಿಮರು ನಾವು ಅಣ್ಣ-ತಮ್ಮಂದಿರು. ಕಾಂಗ್ರೆಸ್‌ನವರು ಒಡೆದಾಳುವ ನೀತಿ ಮಾಡುತ್ತಿದ್ದಾರೆ, ನಮ್ಮನ್ನ ಒಡೆಯಬೇಡಿ ಅಂತ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಹೇಳಿದರು.



ರಾಯಚೂರಿನಲ್ಲಿ ಮಾತನಾಡಿದ ಅವರು, ಔರಂಗಜೇಬನ ಕಾಲದಲ್ಲಿ ದೇವಾಲಯ ಒಡೆದು ಮಸೀದಿ ಕಟ್ಟಿದ್ದರು. ನೆಲಮಾಳಿಗೆಯಲ್ಲಿ ಹಿಂದೂಗಳ 10 ಮೂರ್ತಿ ಸಿಕ್ಕಿದೆ. ಪುಟ 2

## ಬಿಜೆಪಿಯಲ್ಲಿ ವಿಲೀನವಾಗುತ್ತಾ ಪುತ್ತಿಲ ಪರಿವಾರ

# ಪುತ್ತೂರು ರಾಜಕೀಯದಲ್ಲಿ ಸಂಚಲನ

**ಮಂಗಳೂರು:** ಪಕ್ಷ ಬಿಟ್ಟು ಹೋದವರನ್ನು ವಾಪಸ್ ಕರೆತರುವ ಕೆಲಸವನ್ನು ರಾಜ್ಯ ಬಿಜೆಪಿ ಘಟಕ ಮುಂದಾಗಿದೆ. ಮೊದಲ ಹಂತವಾಗಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರನ್ನು ಹಿಂದಿರುಗಿ ತರುವಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಯಶಸ್ಸು ಕಂಡಿದ್ದಾರೆ. ಈಗ ಮುಂದಿನ ಭಾಗವಾಗಿ ಪುತ್ತೂರು ಭಾಗದ ಹಿಂದೂ ಮುಖಂಡ ಮತ್ತು ಪುತ್ತಿಲ ಪರಿವಾರದ ಮುಖ್ಯಸ್ಥರಾಗಿರೋ ಅರುಣ್ ಕುಮಾರ್ ಘರ್ ವಾಪ್ಸಿ ಮೂಲಕ ಕಮಲ ಮನೆಗೆ ಕರೆ ತರುವ ಪ್ರಯತ್ನಗಳು ನಡೆದಿರೋ ಮಾಹಿತಿ ಲಭ್ಯವಾಗಿದೆ.

ವಿಧಾನಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಅರುಣ್ ಕುಮಾರ್ ಪುತ್ತಿಲ ಸ್ಪರ್ಧೆಯಿಂದಾಗಿ ಬಿಜೆಪಿ ಮೂರನೇ ಸ್ಥಾನಕ್ಕೆ ಕುಸಿದಿತ್ತು. ನಂತರ ಪುತ್ತೂರು ನಗರಸಭೆ ಮತ್ತು ಪಂಚಾಯ್ತಿ ಚುನಾವಣೆಗಳಲ್ಲಿಯೂ ಪುತ್ತಿಲ ಪರಿವಾರದಿಂದ ಅಭ್ಯರ್ಥಿಗಳು ಸ್ಪರ್ಧಿಸುವ ಮೂಲಕ ಬಿಜೆಪಿಗೆ ಟಕ್ಕರ್ ನೀಡಲಾಗಿತ್ತು.

ಇದರ ಜೊತೆಗೆ ಪುತ್ತೂರು ಭಾಗದಲ್ಲಿ ಬಿಜೆಪಿ ಮತ್ತು ಪುತ್ತಿಲ ಪರಿವಾರದ ನಡುವೆ ರಾಜಕೀಯ ಗುದ್ದಾಟ ಶುರುವಾಗಿದೆ. ಇತ್ತೀಚೆಗೆ ಬಿಜೆಪಿ ಕಾರ್ಯಕರ್ತನ ಮೇಲಿನ ಹಲ್ಲೆಗೆ ಪುತ್ತಿಲ ಪರಿವಾರದ ಸದಸ್ಯರು ಕಾರಣ ಎಂಬ



ಗಂಭೀರ ಆರೋಪ ಸಹ ಕೇಳಿ ಬಂದಿತ್ತು.

**ಬಿಜೆಪಿಯಲ್ಲಿ ವಿಲೀನ :** ಹೌದು, ಅರುಣ್ ಕುಮಾರ್ ಪುತ್ತಿಲ ಅವರನ್ನು ಮರಳಿ ಕರೆದುಕೊಂಡು ಬರಲು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಮುಖಂಡರು ಮಾತುಕತೆ ನಡೆಸಿದ್ದಾರಂತೆ. ಈಗಾಗಲೇ ಒಂದು ಸುತ್ತಿನ ಮಾತುಕತೆಯೂ ನಡೆದಿದೆ ಎನ್ನಲಾಗಿದೆ. ಕಳೆದ ವರ್ಷ ದೆಹಲಿಯಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿಎಲ್ ಸಂತೋಷ್ ಅವರನ್ನು ದೆಹಲಿಯಲ್ಲಿ ಅರುಣ್ ಕುಮಾರ್ ಪುತ್ತಿಲ ಭೇಟಿಯಾಗಿ ಮಾತುಕತೆ ನಡೆಸಿದ್ದರು.

**ಷರತ್ತು ಹಾಕಿದ್ರಾ ಪುತ್ತಿಲ :** ಇದೀಗ ಮತ್ತೊಮ್ಮೆ ಸ್ಥಳೀಯ ಬಿಜೆಪಿ ಮುಖಂಡರು ಮತ್ತು ಆರ್‌ಎಸ್‌ಎಸ್ ಪ್ರಮುಖರು ಅರುಣ್ ಕುಮಾರ್ ಪುತ್ತಿಲ ಜೊತೆ ಘರ್ ವಾಪ್ಸಿ ಬಗ್ಗೆ ಚರ್ಚೆ ನಡೆಸಿದ್ದಾರೆ. ಪುಟ 2

# ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡಿದ್ದಲ್ಲಿ ತೆರವುಗೊಳಿಸಿ

**ಮಂಡ್ಯ:** ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡಿರುವ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳು ತೆರವುಗೊಳಿಸಲು ಕ್ರಮಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.



ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದವರ ಕುಂದು ಕೊರತೆ ಸಭೆ ನಡೆಸಿ ಮಾತನಾಡಿದರು.ಹೊನ್ನಗಳ್ಳಿ ಮಠದ ಗ್ರಮದಲ್ಲಿ ಸರ್ವೆ ನಂ 19 ರಲ್ಲಿ 4 ಎಕರೆ ಜಮೀನು ಆರ್.ಟಿ.ಸಿ ಯಲ್ಲಿ ಸರ್ಕಾರಿ ಜಮೀನು ಎಂದು ನಮೂದಾಗಿದ್ದರೆ ಸ್ಮಶಾನಕ್ಕೆ ಕಾಯ್ದಿರಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಉಪವಿಭಾಗಾಧಿಕಾರಿ, ತಹಶೀಲ್ದಾರ್ ಕೋರ್ಟ್ಗಳಲ್ಲಿರುವ ಪ್ರಕರಣಗಳ ವಿಲೇವಾರಿ ಕುರಿತಂತೆ ಪರಿಶೀಲನೆ ನಡೆಸಲಾಗುತ್ತಿದೆ. 10 ವರ್ಷಕ್ಕಿಂತ ಹಳೆಯ ಪ್ರಕರಣಗಳು ಬಾಕಿ ಇದ್ದಲ್ಲಿ ಪರಿಶೀಲಿಸಲಾಗುವುದು. ಪಿ.ಟಿ.ಸಿ.ಎಲ್ ಪ್ರಕರಣಗಳಿದ್ದಲ್ಲಿ ಆದ್ಯತೆ ಮೇಲೆ ವಿಲೇವಾರಿ ಮಾಡಿ ಎಂದು ಮನವಿ ಮಾಡಿದರು.

ಸರ್ಕಾರದ ವತಿಯಿಂದ ಗ್ರಾಮ ಮಟ್ಟದಲ್ಲಿ ಅಂಬೇಡ್ಕರ್ ಭವನ ಅಪೂರ್ಣ ಕಾಮಗಾರಿಗಳಿದ್ದಲ್ಲಿ ಸರ್ಕಾರಕ್ಕೆ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿ. ಪೂರ್ಣಗೊಂಡಿರುವ ಅಂಬೇಡ್ಕರ್ ಭವನಗಳನ್ನು ಗ್ರಾಮ ಪಂಚಾಯಿತಿಗೆ ಹಸ್ತಾಂತರ ಮಾಡಿ, ಇದರಿಂದ ಭವನ ಬಳಕೆ ಬರಲಿದೆ ಎಂದರು.

ಶ್ರೀರಂಗಪಟ್ಟಣ ತಾಲ್ಲೂಕಿನ ಕೆ.ಆರ್. ಎಸ್ ಅಣೆಕಟ್ಟು ಪಕ್ಕದ ಪೆಂಚಲಾ ಭೋವಿ ಫೈಲ್ ಗ್ರಾಮದಲ್ಲಿ ವಾಸವಿರುವ ಕುಟುಂಬಗಳಿಗೆ ಹಕ್ಕು ಪತ್ರ ನೀಡುವ ಸಂಬಂಧ ಸಭೆಯಲ್ಲಿ ಚರ್ಚಿಸಿದಾಗ ಜಿಲ್ಲಾಧಿಕಾರಿಗಳು ಮಾತನಾಡಿ ಕಾರ್ಯನಿರ್ವಾಹಕ ಅಧಿಕಾರಿ, ತಹಶೀಲ್ದಾರ್ ಹಾಗೂ ಡಿ.ಡಿ.ಎಲ್. ಆರ್ ಅವರು ಸ್ಥಳ ಪರಿಶೀಲನೆ ನಡೆಸಿ ಸದರಿ ಸ್ಥಳದ ಬಗ್ಗೆ ವರದಿ ನೀಡಬೇಕು ಎಂದರು.

ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ, ಪುರಸಭೆ ಮತ್ತು ನಗರಸಭೆ ವ್ಯಾಪ್ತಿಯಲ್ಲಿ ಎಸ್.ಸಿ, ಎಸ್.ಟಿ ಸಮುದಾಯದವರು ನಿವೇಶನ ಹಾಗೂ ವಸತಿಗಾಗಿ ಅರ್ಜಿ ಸಲ್ಲಿಸಿರುವವರು, ಸೌಲಭ್ಯ ಪಡೆದವರು, ಸೌಲಭ್ಯ ಪಡೆದುಕೊಳ್ಳದಿರುವ ವಿವರ ಸಿದ್ದಪಡಿಸಿ ಇದರಿಂದ ಕಾರ್ಯಕ್ರಮ ರೂಪಿಸಲು ಸಾಧ್ಯ ಎಂದರು.

ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕೊಳವೆ ಬಾವಿ ಘಟಕ ನಿರ್ಮಾಣ ಕಾಮಗಾರಿಗಳು ಸರಿಯಾಗಿ ನಡೆದಿಲ್ಲ ಎಂದು ಸಭೆಯಲ್ಲಿ ದೂರು ಸಲ್ಲಿಸಿದಾಗ ಜಿಲ್ಲಾಧಿಕಾರಿಗಳು ಆರ್.ಡಿ.ಪಿ.ಆರ್ ಕಾರ್ಯಪಾಲಕ ಅಭಿಯಂತರರು 20 ದಿನದೊಳಗಾಗಿ ಪರಿಶೀಲಿಸಿ ವರದಿ ನೀಡುವಂತೆ ತಿಳಿಸಿದರು.

ಲೋಕೋಪಯೋಗಿ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅನುದಾನದಡಿ ಕಳೆದ 3 ವರ್ಷಗಳಿಂದ ಕೈಗೊಂಡಿರುವ ಕಾಮಗಾರಿಗಳ ವರದಿಯನ್ನು ಮುಂದಿನ ಸಭೆಗೆ ಒದಗಿಸುವಂತೆ ತಿಳಿಸಿದರು.

ಮುಜರಾಯಿ ಇಲಾಖೆ ವ್ಯಾಪ್ತಿಯ ದೇವಸ್ಥಾನಗಳಲ್ಲಿ ಯಾವುದೇ ಜಾತಿ ಬೇಧವಿಲ್ಲದೇ ಎಲ್ಲರಿಗೂ ಮುಕ್ತ ಅವಕಾಶವಿದೆ. ಈ ಬಗ್ಗೆ ಫಲಕ ಅನಾಚರಣಗೊಳಿಸಲು ಜಿಲ್ಲಾಡಳಿತದಿಂದ ಪತ್ರ ಬರೆಯಲಾಗುವುದು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸೀಫ್ ಅವರು ಮಾತನಾಡಿ ನರೇಗಾ ಯೋಜನೆಯಡಿ ಜಿಲ್ಲೆಯ 267 ಸ್ಮಶಾನ ಅಭಿವೃದ್ಧಿ ಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಅಂಗನವಾಡಿ ನಿರ್ಮಾಣ ಮಾಡಲು ಸ್ಥಳವಿಲ್ಲದ ಗ್ರಾಮಗಳಲ್ಲಿ ಶಾಲೆಗಳಲ್ಲಿ ಸ್ಥಳಾವಕಾಶ ಇದ್ದರೆ ನಿರ್ಮಾಣ ಮಾಡಿ. ಶಾಲೆಯಲ್ಲೂ ಸ್ಥಳ ಇಲ್ಲದಿದ್ದಲ್ಲಿ ಸರ್ಕಾರಕ್ಕೆ ಕ್ರಮ ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸಿ ಎಂದರು.

ವಿವಿಧ ಸಂಘಟನೆಗಳ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿ ಸಭೆಯಲ್ಲಿ ಪರುಶಿಷ್ಟ ಜಾತಿ ಹಾಗೂ ವರ್ಗದವರಿಗೆ ಸಂಬಂಧಿಸಿದ ಕುಂದುಕೊರತೆಗಳ ಬಗ್ಗೆ ಚರ್ಚಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್, ಉಪವಿಭಾಗಾಧಿಕಾರಿ ನಂದೀಶ್, ಶಿವಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸಿದ್ದಲಿಂಗೇಶ್ ಉಪಸ್ಥಿತರಿದ್ದರು.

## ಮೈಸೂರಿನ ಇಬ್ಬರು ಪತ್ರಕರ್ತರಿಗೆ ಕೆಯುಡಬ್ಲ್ಯುಜೆ ವಾರ್ಷಿಕ ಪ್ರಶಸ್ತಿ

**ಮೈಸೂರು:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) 2022-23 ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು, ಮೈಸೂರಿನ ಇಬ್ಬರು ಪತ್ರಕರ್ತರು ಕೆಯುಡಬ್ಲ್ಯೂ ಜೆ ವಾರ್ಷಿಕ ಪ್ರಶಸ್ತಿಗೆ ಬಾಜನರಾಗಿದ್ದಾರೆ. ರವಿ ಬೆಳಗೆರೆ ಪ್ರಶಸ್ತಿಗೆ ಹಲೋ ಮೈಸೂರ್ ಪತ್ರಿಕೆಯ ಟಿ.ಗುರುರಾಜ್ ಮತ್ತು ಅತ್ಯುತ್ತಮ ಪೋಟೋಗ್ರಫಿ ಪ್ರಶಸ್ತಿಗೆ ಅನುರಾಗ್ ಬಸವರಾಜು ಆಯ್ಕೆಯಾಗಿದ್ದಾರೆ. ದಾವಣಗೆರೆಯಲ್ಲಿ ಇದೇ ಫೆ. 3 ಮತ್ತು 4 ರಂದು ನಡೆಯುವ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.



## ನವ ಜೀವನಕ್ಕೆ ಕಾಲಿಟ್ಟ ಜೋಡಿ



**ಮೈಸೂರು:** ಶ್ರೀ ಶ್ರೀಕಂಠೇಶ್ವರ ಸನ್ನಿಧಿಯಲ್ಲಿ ಸರಳ ಸಾಮೂಹಿಕ ವಿವಾಹದ ಸದುಪಯೋಗ ಪಡೆದು ಎಂಟು ನವ ಜೋಡಿಗಳು ನವ ಜೀವನಕ್ಕೆ ಕಾಲಿಡುತ್ತಿದ್ದಾರೆ. ಈ ನವ ಜೋಡಿಗಳಿಗೆ ಶುಭವಾಗಲಿ ಎಂದು ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ದ್ರುವನಾರಾಯಣ್ ಅವರು ಶುಭ ಹಾರೈಸಿದರು.

ಹಿಂದೂ ಧಾರ್ಮಿಕ ಸಂಸ್ಥೆಗಳು, ಧರ್ಮದಾಯ ದತ್ತಿಗಳ ಇಲಾಖೆ ಮತ್ತು ಜಿಲ್ಲಾಡಳಿತದ ವತಿಯಿಂದ ನಂಜನಗೂಡಿನ ಶ್ರೀ ಶ್ರೀಕಂಠೇಶ್ವರ ಸ್ವಾಮಿ ದೇವಾಲಯದಲ್ಲಿ ಆಯೋಜಿಸಿದ್ದ ?ಮಾಂಗಲ್ಯ ಭಾಗ್ಯ ಸರಳ ಸಾಮೂಹಿಕ ವಿವಾಹ? ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬಡವರಿಗೆ ಇದು ಉತ್ತಮವಾದ ಕಾರ್ಯಕ್ರಮ. ಸಾಮೂಹಿಕ ವಿವಾಹ ಆಗುವವರಿಗೆ ಸರ್ಕಾರದಿಂದಲೂ ಪ್ರೋತ್ಸಾಹಧನ ದೊರೆಯುತ್ತದೆ ಎಂದು ತಿಳಿಸಿದರು. ಅಪರ ಜಿಲ್ಲಾಧಿಕಾರಿಗಳು ಹಾಗೂ ಶ್ರೀಕಂಠೇಶ್ವರಸ್ವಾಮಿ ದೇವಸ್ಥಾನದ ಆಡಳಿತಾಧಿಕಾರಿಗಳಾದ ಆರ್. ಲೋಕನಾಥ್ ಅವರು ಮಾತನಾಡಿ ಮಾಂಗಲ್ಯ ಭಾಗ್ಯ ಕಾರ್ಯಕ್ರಮವು 2020 ರಲ್ಲಿ ಮೊದಲ ಬಾರಿಗೆ ಪ್ರಾರಂಭವಾಯಿತು. ಆದರೆ ಕರೋನಾ ಕಾರಣದಿಂದ 2022 ರಲ್ಲಿ ಮೊದಲ ಬಾರಿಗೆ ಮೈಸರು ಜಿಲ್ಲೆಯಲ್ಲಿ ನಡೆಯಿತು. ಇಂದು ಎರಡನೆ ಬಾರಿಗೆ ಜರುಗುತ್ತಿದೆ. ಈ ಕಾರ್ಯಕ್ರಮವನ್ನು ಆಯೋಜಿಸಲು ನವೆಂಬರ್ ತಿಂಗಳಿನಿಂದ ವ್ಯಾಪಕ ಪ್ರಚಾರ ಮಾಡಲಾಗಿದ್ದು, ಅರ್ಜಿ ಸಲ್ಲಿಸಿದಂತಹ ಜೋಡಿಗಳಲ್ಲಿ ನಮ್ಮ ಮಾರ್ಗಸೂಚಿಗೆ ಅರ್ಹರಿರುವವರಿಗೆ ಮಾಂಗಲ್ಯ ಭಾಗ್ಯ ಕಾರ್ಯಕ್ರಮದಲ್ಲಿ ಅವಕಾಶ ಮಾಡಿಕೊಡಲಾಗಿದೆ. ಇದರ ಸದುಪಯೋಗ ಪಡಿಸಿಕೊಂಡ ಹೊಸ ವಧು- ವರರಿಗೆ ಶಭವಾಗಲಿ ಎಂದರು.

### ಪಿಎಚ್.ಡಿ. ಪ್ರವೇಶ ಪರೀಕ್ಷೆಗೆ ಏಕೀಕೃತ ವ್ಯವಸ್ಥೆ

## ಮೈಸೂರು ವಿವಿಯಲ್ಲಿ ವಿರೋಧ

**ಮೈಸೂರು:** ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಪಿಎಚ್.ಡಿ ಪ್ರವೇಶಕ್ಕೆ ಏಕೀಕೃತ ವ್ಯವಸ್ಥೆಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ (ಅರ್ಹತಾ ಪರೀಕ್ಷೆ) ನಡೆಸಲು ನಿರ್ಧರಿಸಿರುವ ಉನ್ನತ ಶಿಕ್ಷಣ ಇಲಾಖೆಯ ಕ್ರಮಕ್ಕೆ ಮೈಸೂರು ವಿಶ್ವವಿದ್ಯಾಲಯದ ಶಿಕ್ಷಣ ಮಂಡಳಿಯ 2ನೇ ಸಾಮಾನ್ಯ ಸಭೆಯಲ್ಲಿ ತೀವ್ರ ವಿರೋಧ ವ್ಯಕ್ತವಾಯಿತು.

ಸರ್ಕಾರದ ಈ ಕ್ರಮದಿಂದ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಸ್ವಾಯತ್ತತೆಗೆ ಧಕ್ಕೆಯಾಗುತ್ತದೆ. ಸರ್ಕಾರ ಈ ವಿಷಯಗಳಲ್ಲಿ ಹಸ್ತಕ್ಷೇಪ ಮಾಡಬಾರದು. ಅಲ್ಲದೇ, ಇದು ವಿದ್ಯಾರ್ಥಿಗಳಿಗೆ ಪೂರಕವೂ ಆಗುವುದಿಲ್ಲ? ಎಂದು ಸದಸ್ಯರೂ ಆಗಿರುವ ಬಿಐಎಂಎಸ್ ಪ್ರಾಧ್ಯಾಪಕ ಡಿ.ಆನಂದ್ ಪ್ರಸ್ತಾಪಿಸಿದರು. ಇದಕ್ಕೆ ಸದಸ್ಯರು ದನಿಗೂಡಿಸಿದರು.



ಎಲ್ಲವನ್ನೂ ಕೇಂದ್ರೀಕೃತ ಹಾಗೂ ಏಕೀಕೃತ ವ್ಯವಸ್ಥೆಯಲ್ಲಿ ನಿರ್ವಹಿಸಿದರೆ ವಿಶ್ವವಿದ್ಯಾಲಯಗಳಿಗೆ ಇರುವ ಪಾತ್ರವೇನು? ಅಧಿಕಾರವೇ ಇಲ್ಲದಂತಾಗುತ್ತದೆ. ಈಗಿನ ವ್ಯವಸ್ಥೆಯಲ್ಲಿ ಅಗತ್ಯವಿದ್ದಾಗ ಪರೀಕ್ಷೆ ನಡೆಸಿ ಪ್ರವೇಶ ಕೊಡಲಾಗುತ್ತಿದೆ. ಸರ್ಕಾರದಿಂದಲೇ ವರ್ಷಕ್ಕೊಮ್ಮೆ ನಡೆಸಿದರೆ ವಿದ್ಯಾರ್ಥಿಗಳ ಸಮಯ ಹಾಳಾಗುತ್ತದೆ. ಪಾದದ ಅಳತೆಗೆ ಶೂ ತೆಗೆದುಕೊಳ್ಳಬೇಕೇ ಹೊರತು, ಶೂಗೆ ತಕ್ಕಂತೆ ಪಾದವನ್ನು ಕತ್ತರಿಸುವ ವ್ಯವಸ್ಥೆ ಸರಿಯಲ್ಲ ಎಂಬ ಅಭಿಪ್ರಾಯ ಸದಸ್ಯರಿಂದ ವ್ಯಕ್ತವಾಯಿತು.

ಪ್ರತಿಕ್ರಿಯಿಸಿದ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಸಭೆಯಲ್ಲಿ ನಾನೇ ಮೊದಲು ವಿರೋಧ ವ್ಯಕ್ತಪಡಿಸಿದೆ. ಆದರೆ,ಎಲ್ಲ ಭಾಗದವರೂ ಹೆಚ್ಚಿನ ಸಂಖ್ಯೆಯಲ್ಲಿ ಪಿಎಚ್.ಡಿಗೆ ಬರಬೇಕು ಎಂಬುದು ಹೊಸ ವ್ಯವಸ್ಥೆಯ ಉದ್ದೇಶ ಎಂದು ಸರ್ಕಾರದ ಪ್ರತಿನಿಧಿಗಳು ತಿಳಿಸಿದರು. ಅದಕ್ಕೆ ತಕ್ಕಂತೆ ಬೋಧಕರ ಸಂಖ್ಯೆಯನ್ನೂ ಹೆಚ್ಚಿಸಬೇಕು ಎಂದು ಕೇಳಿಕೊಂಡೆ? ಎಂದು ಹೇಳಿದರು.

ಸರ್ಕಾರಕ್ಕೆ ಪತ್ರ: ಉದ್ದೇಶಿತ ವ್ಯವಸ್ಥೆಯಿಂದಾಗುವ ಬಾಧಕಗಳ ಕುರಿತು ಮನವರಿಕೆ ಮಾಡಿಕೊಡುವುದು ಹಾಗೂ ವಿರೋಧ ದಾಖಲಿಸಿ ಸರ್ಕಾರಕ್ಕೆ ಪತ್ರ ಬರೆಯಬೇಕು ಎಂದು ನಿರ್ಧರಿಸಲಾಯಿತು.

ಬಿ.ಇಡಿ. ಫಲಿತಾಂಶವನ್ನು ಬಹಳಷ್ಟು ವೇಗವಾಗಿ ಕೊಡಲಾಗುತ್ತಿದೆ. ಆದರೆ, ಅಂಕಪಟ್ಟಿ ನೀಡಿಲ್ಲ. ಇದರಿಂದಾಗಿ, ವಿದ್ಯಾರ್ಥಿಗಳು ಮೆರಿಟ್ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಸಾಧ್ಯವಾಗುತ್ತಿಲ್ಲ, ವಿ.ವಿಯಿಂದ ಕೊಡುವ ಸ್ಕೋರ್ ಶೀಟ್‌ಗಳನ್ನು ಸಂಬಂಧಿಸಿದ ಇಲಾಖೆಗಳವರು ಮಾನ್ಯ ಮಾಡುತ್ತಿಲ್ಲ, ಈ ಸಮಸ್ಯೆ ಬಗೆಹರಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಛಾಯಾದೇವಿ ಬಿ.ಇಡಿ. ಕಾಲೇಜು ಪ್ರಾಂಶುಪಾಲ ಸಿ.ಆಯಂಟನಿ ಕೋರಿದರು.

ಪ್ರತಿಕ್ರಿಯಿಸಿದ ಕುಲಪತಿ ಲೋಕನಾಥ್, ?ಇದು ಯುಯುಸಿಎಂಎಸ್ (ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ)ಯ ತಾಂತ್ರಿಕ ಲೋಪದಿಂದ ಆಗುತ್ತಿರುವ ಸಮಸ್ಯೆಯಾಗಿದೆ. ನಾವೇ ಅಂಕಪಟ್ಟಿ ಮುದ್ರಿಸಿಕೊಡುತ್ತೇವೆ ಎಂದು ಸರ್ಕಾರ ಹೇಳಿದೆ. ನಾವೇ ಮುದ್ರಿಸಿ ವಿತರಿಸಲು ಈಗ ಅವಕಾಶವಿಲ್ಲ. ಇದರಿಂದ ಬಿ.ಇಡಿ. ಜೊತೆಗೆ ಇತರ ಪದವಿ ವಿದ್ಯಾರ್ಥಿಗಳಿಗೂ ತೊಡಕಾಗಿದೆ. ?ವೀಸಾ? ಅವಧಿ ಮುಗಿಯುತ್ತಿರುವ ವಿದೇಶಿ ವಿದ್ಯಾರ್ಥಿಗಳಿಗೆ ತೀವ್ರ ತೊಂದರೆ ಆಗುತ್ತಿದೆ? ಎಂದು ಅಸಹಾಯಕತೆ ವ್ಯಕ್ತಪಡಿಸಿದರು.

ಪಠ್ಯಕ್ರಮ ಮಾಡೋಣ: ವಿದ್ಯಾರ್ಥಿಗಳಿಗೆ ಇಂಟನ್‌ಶಿಪ್‌ಗೆ ಸಮಯಾವಕಾಶ ಸಿಗುತ್ತಿಲ್ಲ. ಈಗ ನಾವು ರಜೆಯಲ್ಲಿ ಪರೀಕ್ಷೆ ನಡೆಸುತ್ತಿದ್ದೇವೆ. ಅಲ್ಲದೇ, ದೊಡ್ಡ ಸಂಖ್ಯೆಯಲ್ಲಿರುವ ಎಲ್ಲರಿಗೂ ಇಂಟರ್ನ್‌ಶಿಪ್ ನೀಡಲು ಕಂಪನಿ ಅಥವಾ ಕಾರ್ಖಾನೆಗಳಿಂದ ಸಾಧ್ಯವಾಗುವುದಿಲ್ಲ. ಆದ್ದರಿಂದ ಇಂಟರ್ನ್‌ಶಿಪ್ ಮಹತ್ವವೇನು, ಹೇಗಿರುತ್ತದೆ ಎಂಬಿತ್ಯಾದಿ ಸಾಮಾನ್ಯ ಮಾಹಿತಿ ಒಳಗೊಂಡ ಪಠ್ಯಕ್ರಮವನ್ನು ಮಾಡೋಣ ಎಂದು ಸಲಹೆ ನೀಡಿದರು. ಇದಕ್ಕೆ ಸಭೆ ಸಮ್ಮತಿಸಿತು. ಪಠ್ಯಕ್ರಮ ತಯಾರಿಸಲು ಸಮಿತಿ ರಚನೆಗೆ ತೀರ್ಮಾನಿಸಲಾಯಿತು.

ಬಿಬಿಎ ಹಾಗೂ ಬಿಸಿಎ ಕೋರ್ಸ್ ನಡೆಸಲು ಅನುಮೋದನೆ ಪಡೆದುಕೊಳ್ಳಬೇಕು ಎಂದು ಎಐಸಿಟಿಇ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ತು (ಎಐಸಿಟಿಇ) ಈಚೆಗೆ ಆದೇಶಿಸಿದೆ. ಅನುಮೋದನೆ ಇಲ್ಲದೇ ನಡೆಸುವುದು ತಾರತಮ್ಯಕ್ಕೆ ಕಾರಣವಾಗಬಹುದು. ಖಾಸಗಿ ಕಾಲೇಜುಗಳವರು ಅನುಮತಿ ಪಡೆದಿರುವುದನ್ನೇ ಹೈಲೈಟ್ ಮಾಡಿಕೊಂಡು ಪ್ರವೇಶಾತಿ ಹೆಚ್ಚಿಸಿಕೊಳ್ಳಬಹುದು. ಪಡೆದುಕೊಳ್ಳದ ಕಾಲೇಜುಗಳನ್ನು ಕಪ್ಪುಪಟ್ಟಿಗೆ ಸೇರಿಸುವ ಸಾಧ್ಯತೆಯೂ ಇರುತ್ತದೆ. ಸರ್ಕಾರಿ ಕಾಲೇಜುಗಳಿಗೂ ಅಗತ್ಯವೇ ಎಂಬಿತ್ಯಾದಿ ಪ್ರಶ್ನೆಗಳಿವೆ. ಈ ವಿಷಯದಲ್ಲಿ ಸ್ಪಷ್ಟತೆ ಬೇಕಾಗಿದೆ ಎಂದು ಹಲವರು ಪ್ರಸ್ತಾಪಿಸಿದರು.

ಪ್ರತಿಕ್ರಿಯಿಸಿದ ಕುಲಪತಿ, ಸರ್ಕಾರದ ಗಮನಕ್ಕೆ ತಂದು ಅಲ್ಲಿಂದ ಬರುವ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುವುದು? ಎಂದು ತಿಳಿಸಿದರು.

ಬಿಸಿಎಗೆ ಪ್ರವೇಶಾತಿ ಹೆಚ್ಚುತ್ತಿದೆ. ಆದರೆ, ಬಿಎಗೆ ಶೇ 50ರಿಂದ ಶೇ 60ರಷ್ಟು, ಬಿಎಸ್‌ಸಿ ಹಾಗೂ ಬಿಕಾಂಗೆ ಶೇ 20ರಷ್ಟು ಪ್ರವೇಶಾತಿ ಕಡಿಮೆಯಾಗಿದೆ. ವಿ.ವಿಯಲ್ಲಿ 2007ರ ನಂತರ ನೇಮಕಾತಿ ನಡೆದಿಲ್ಲ. ಕಾಯಂ ಬೋಧಕರ ಹುದ್ದೆ ಶೇ 46ರಷ್ಟು ಕೊರತೆ ಇದೆ. ಯುವಜನರ ಭವಿಷ್ಯ ರೂಪಿಸುವ ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವ ಕೆಲಸ ಆಗಬೇಕಿದೆ ಎಂದು ಹೇಳಿದರು.

ಕುಲಸಚಿವ ಪ್ರೊ.ಕೆ.ಎಂ. ಮಹದೇವನ್ ಹಾಗೂ ಹಣಕಾಸು ಅಧಿಕಾರಿ ರೇಖಾ ಕೆ.ಎಸ್. ಪಾಲ್ಗೊಂಡಿದ್ದರು.

### ಯುಯುಸಿಎಂಎಸ್ ವ್ಯವಸ್ಥೆಯಿಂದ ತೊಡಕು

**ಕುಲಸಚಿವೆ ವಿ.ಆರ್. ಶೈಲಜಾ ಮಾತನಾಡಿ, ಕಂದಾಯ ಇಲಾಖೆಯಲ್ಲಿ ಭೂಮಿ ತಂತ್ರಾಂಶದ ಮೂಲಕ ಲಕ್ಷಾಂತರ ಮಂದಿಗೆ ದಾಖಲೆಗಳನ್ನು ಒದಗಿಸಲಾಗುತ್ತಿದೆ. ವಿಶ್ವವಿದ್ಯಾಲಯದಲ್ಲಿ ಮೂರು ವರ್ಷಗಳಿಂದಲೂ ಅಂಕಪಟ್ಟಿ ನೀಡಲು ಸಾಧ್ಯವಾಗುತ್ತಿಲ್ಲ ಎಂದರೆ ಅಚ್ಚರಿಯೇ. ಸುಧಾರಿತ ತಂತ್ರಜ್ಞಾನ ಬಳಸಿದರೆ ತ್ವರಿತವಾಗಿ ಒದಗಿಸಲು ಅವಕಾಶವಿದೆ. ಇದನ್ನು ವಿವಿಯಲ್ಲೇ ಬಳಸಿ ನಿರ್ವಹಿಸಬಹುದಾಗಿದೆ ಎಂದು ಹೇಳಿದರು. ಯುಯುಸಿಎಂಎಸ್ ವ್ಯವಸ್ಥೆ ತಾಂತ್ರಿಕವಾಗಿ ಬಲವಾಗಿಲ್ಲ. ಕುಂದುಕೊರತೆ ಪರಿಹರಿಸುವ ವ್ಯವಸ್ಥೆ ಸಮರ್ಪಕವಾಗಿಲ್ಲ. ಅದು ಸಮರ್ಪಕವಾಗಿ ಕಾರ್ಯನಿರ್ವಹಿಸಿದರೆ ಬಹಳ ಸಮಸ್ಯೆ ಬಗೆಹರಿಯುತ್ತದೆ. ಇಲ್ಲಿ ಪ್ರಸ್ತಾಪವಾದ ಪ್ರಮುಖ ವಿಷಯಗಳನ್ನು ಫೆ.8ರಂದು ನಡೆಯಲಿರುವ ಉನ್ನತ ಶಿಕ್ಷಣ ಪರಿಷತ್ತಿನ ಸಭೆಯಲ್ಲಿ ಮಂಡಿಸಲಾಗುವುದು ಎಂದು ಕುಲಪತಿ ತಿಳಿಸಿದರು. 6ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಇಂಟನ್‌ಶಿಪ್ ವಿಷಯದಲ್ಲಿ ತೊಡಕು ಉಂಟಾಗಿರುವುದನ್ನು ಸದಸ್ಯರು ಪ್ರಸ್ತಾಪಿಸಿದರು. ಎನ್‌ಇಪಿ-2020 ಜಾರಿಯಾದ ನಂತರ ಇಂಟರ್ನ್‌ಶಿಪ್ ವಿಷಯದಲ್ಲಿ ಇನ್ನೂ ಸ್ಪಷ್ಟತೆ ದೊರೆತಿಲ್ಲ. ಅದಕ್ಕಾಗಿ ನಾವೇ ಪಠ್ಯಕ್ರಮ ಸಿದ್ಧಪಡಿಸಬೇಕು ಅಥವಾ ಉನ್ನತ ಶಿಕ್ಷಣ ಇಲಾಖೆಯಿಂದ ಪಠ್ಯಕ್ರಮ ಕೊಡುವವರೆಗೆ ಕಾಯಬೇಕು? ಎಂದು ಕುಲಪತಿ ಲೋಕನಾಥ್ ಹೇಳಿದರು.**

## ಬಿಜಿಎಸ್ ಬಿ.ಇಡಿ ಕಾಲೇಜಿನ ಪ್ರಶಿಕ್ಷಣಾರ್ಥಿಗಳ ಪ್ರತಿಭಾನ್ವೇಷಣೆ ಕಾರ್ಯಕ್ರಮ

**ಮೈಸೂರು:** ಕುವೆಂಪು ನಗರ ಬಿಜಿಎಸ್ ಬಿ.ಇಡಿ ಕಾಲೇಜಿನ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳ ಪ್ರತಿಭಾನ್ವೇಷಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಇನ್ಸ್ಟಿಟ್ಯೂಟ್ ಆಫ್ ಎಜುಕೇಶನ್ ನ ವಿಶ್ರಾಂತ ಪ್ರಾಂಶುಪಾಲರಾದ ಪ್ರೊಫೆಸರ್ ಎಚ್.ಎಸ್ ಮಲ್ಲಿಕಾರ್ಜುನ ಶಾಸ್ತ್ರಿ, ದೇಶದ ಸರ್ವಾಂಗೀಣ ಪ್ರಗತಿಗೆ ಶ್ರಮಿಸುವ ಶಿಕ್ಷಕ ಸಮೂಹ ನಾವಿನ್ಯತೆಯಿಂದ ಕೂಡಿರುವ ವೈವಿಧ್ಯಮಯ ಪ್ರತಿಭೆಗಳ ಆಗರವಾಗಬೇಕು. ಪ್ರತಿಭೆಯುಳ್ಳ ಶಿಕ್ಷಕನು ಭವಿಷ್ಯತ್ತಿನ ಶಿಕ್ಷಣದ ದಿಕ್ಸೂಚಿಯಾಗಬಲ್ಲನು ಆದ್ದರಿಂದ ಪ್ರಶಿಕ್ಷಣಾರ್ಥಿಗಳು ಪಾಠ ಬೋಧನೆ ತರಬೇತಿ ಜೊತೆಗೆ ನಾಟಕ, ಸಂಗೀತ, ಹಾಡುಗಾರಿಕೆ, ನೃತ್ಯ ಹಾಗೂ ವಿವಿಧ ಪ್ರದರ್ಶಕ ಕಲೆಗಳ ಹೂರಣವಾಗಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ನಾಗರಾಜು ಅಧ್ಯಕ್ಷತೆಯನ್ನು ವಹಿಸಿದ್ದರು. ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳು ತಮ್ಮಲ್ಲಿ ಅಡಗಿರುವ ಪ್ರತಿಭೆಗಳನ್ನು ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ ಪ್ರದರ್ಶಿಸಿದರು ಕಾಲೇಜಿನ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಕಾರ್ಯಕ್ರಮವನ್ನು ಸಾಕ್ಷಿಕರಿಸಿದರು.



## ಮೈಸೂರಿನಲ್ಲಿ ಇಬ್ಬರು ಅಧಿಕಾರಿಗಳ ಮನೆ ಮೇಲೆ ಲೋಕಾಯುಕ್ತ ದಾಳಿ

**ಮೈಸೂರು:** ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಸಿದ ಆರೋಪದ ಮೇಲೆ ನಗರದಲ್ಲಿ ಎರಡು ಕಡೆ ಲೋಕಾಯುಕ್ತ ಅಧಿಕಾರಿಗಳು ಬುಧವಾರ ದಾಳಿ ಮಾಡಿದ್ದು, ಪರಿಶೀಲನೆ ನಡೆಸಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ (ಎಇಇ) ಯಜ್ಞೇಂದ್ರ, ಅವರ ಜೆ.ಪಿ.ನಗರದಲ್ಲಿನ ನಿವಾಸ ಹಾಗೂ ಚಾಮರಾಜನಗರದ ಗ್ರಾಮೀಣ ನೀರು ಪೂರೈಕೆ ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿ ಪಿ. ರವಿ ಅವರ ಕೆ.ಸಿ.ಬಡಾವಣೆ ನಿವಾಸಗಳ ಮೇಲೆ ಮುಂಜಾನೆ ದಾಳಿ ನಡೆಸಿದ್ದಾರೆ. ಯಜ್ಞೇಂದ್ರ, ಅವರ ಜೆ.ಪಿ.ನಗರ ನಿವಾಸದ ಜೊತೆಗೆ ಕೆ.ಆರ್.ನಗರದ ಮಿರ್ಲೆಯಲ್ಲಿರುವ ಸಹೋದರನ ಮನೆ ಹಾಗೂ ಮುಡಾ ಕಚೇರಿಯಲ್ಲೂ ಪರಿಶೀಲನೆ ನಡೆಸಲಾಗಿದೆ. ರವಿ ಅವರ ಮೈಸೂರು ಹಾಗೂ ಚಾಮರಾಜನಗರ ನಿವಾಸದ ಜೊತೆಗೆ ಕೊಳ್ಳೇಗಾಲದ ಫಾರ್ಮ್ ಹೌಸ್‌ನಲ್ಲೂ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ? ಎಂದು ಲೋಕಾಯುಕ್ತ ಎಸ್.ಪಿ.ಸುರೇಶ್ ಬಾಬು ತಿಳಿಸಿದ್ದಾರೆ.



## ಕರಾಮುವಿ: 2023-24ನೇ ಶೈಕ್ಷಣಿಕ ಸಾಲಿನ ಜನವರಿ ಆವೃತ್ತಿ ಪ್ರವೇಶಾತಿಗೆ ಅರ್ಜಿ ಆಹ್ವಾನ

ತುಮಕೂರು: ತುಮಕೂರಿನ ಕರಾಮುವಿ ಪ್ರಾದೇಶಿಕ ಕೇಂದ್ರದಲ್ಲಿ 2023-24ನೇ ಶೈಕ್ಷಣಿಕ ಸಾಲಿನ ಜನವರಿ ಆವೃತ್ತಿ ಪ್ರವೇಶಾತಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಸ್ನಾತಕ/ ಸ್ನಾತಕೋತ್ತರ ಕೋರ್ಸ್ ಗಳಾದ ಬಿ.ಎ, ಬಿ.ಕಾಂ, ಬಿ.ಬಿ.ಎ, ಬಿ.ಸಿ.ಎ, ಬಿ.ಲಿಬ್.ಐ.ಎಸ್ಸಿ., ಬಿ.ಎಸ್ಸಿ., ಬಿ.ಎಸ್.ಡಬ್ಲ್ಯೂ., ಎಂ.ಎ., ಎಂ.ಸಿ.ಜೆ., ಎಂ.ಕಾಂ., ಎಂ.ಎಸ್ಸಿ., ಎಂ.ಲಿಬ್.ಐ.ಎಸ್ಸಿ., ಎಂ.ಬಿ.ಎ., ಎಂ.ಸಿ.ಎ., ಎಂ.ಎಸ್. ಡಬ್ಲ್ಯೂ ಮತ್ತು ಪಿ.ಜಿ ಸರ್ಟಿಫಿಕೇಟ್., ಡಿಪ್ಲೊಮಾ., ಸರ್ಟಿಫಿಕೇಟ್ ಕೋರ್ಸ್ ಗಳಿಗೆ ಪ್ರವೇಶಾತಿ ಮಾಡಿಕೊಳ್ಳಲಾಗುತ್ತಿದೆ. ಪ್ರಥಮ ವರ್ಷದ ಈ ಮೇಲ್ಕಂಡ ಕೋರ್ಸ್ ಗಳ ಪ್ರವೇಶಾತಿಗೆ2024ರ ಮಾರ್ಚ್ 31 ಕಡೆಯ ದಿನಾಂಕವಾಗಿರುತ್ತದೆ. (ಬಿ.ಇಡಿ ಕೋರ್ಸ್ ಗೆ ಸಿ.ಇ.ಟಿ ಮುಖಾಂತರ ಪ್ರವೇಶಾತಿ ಇದ್ದು (ವಿದ್ಯಾರ್ಹತೆ: ಪದವಿ ವಿದ್ಯಾರ್ಹತೆ ಜೊತೆಗೆ ಶಿಕ್ಷಕ ವೃತ್ತಿಯಲ್ಲಿರಬೇಕು ಮತ್ತು TCH/D.ED/D.El.Ed/B.El.Ed and Equivalent ಶಿಕ್ಷಣ ಪಡೆದಿರಬೇಕು.) ಸಿ.ಇ.ಟಿ ಅರ್ಜಿ ಸಲ್ಲಿಸಲು ಕೊನೆಯ ಮಾ.3 ಮತ್ತು ಸಿ.ಇ.ಟಿ ಪರೀಕ್ಷಾ ದಿನಾಂಕ:10/03/2024). ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮಾತ್ರ ರಾಜ್ಯದಲ್ಲಿ ದೂರ ಶಿಕ್ಷಣ ನೀಡುವ ಏಕ ಮಾತ್ರ ವಿಶ್ವವಿದ್ಯಾನಿಲಯವಾಗಿರುತ್ತದೆ. ಪ್ರಥಮ ವರ್ಷದ ಪ್ರವೇಶಾತಿ ಶುಲ್ಕದ ವಿವರ:- ಬಿ.ಎ-ರೂ.7,700/-., ಬಿ.ಬಿ.ಎ/ಬಿ.ಎಲ್.ಐ.ಎಸ್ಸಿ-11,500/-., ಬಿ.ಕಾಂ.-ರೂ.8,200/-., ಬಿ.ಸಿ.ಎ/ಬಿ.ಎಸ್ಸಿ-ರೂ.22,500/-., ಬಿ.ಎಸ್. ಡಬ್ಲ್ಯೂ-ರೂ.12,000/-., ಎಂ.ಎ-ರೂ.9,800/-., ಎಂ.ಎಸ್ಸಿ/ ಎಂ.ಬಿ.ಎ/ಎಂ.ಸಿ.ಎ-ರೂ.28,000/-., ಎಂ.ಕಾಂ-ರೂ.11,500/-. ಎಂ.ಸಿ.ಜೆ-ರೂ.15,100/-., ಎಂ.ಎಸ್.ಡಬ್ಲ್ಯೂ-ರೂ.20,000/-., ಎಂ.ಎಲ್ .ಐ.ಎಸ್ಸಿ-ರೂ.17,000/-ಗಳಾಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ: ಪ್ರಾದೇಶಿಕ ನಿರ್ದೇಶಕರು, ಕರಾಮುವಿ ತುಮಕೂರು ಪ್ರಾದೇಶಿಕ ಕೇಂದ್ರ, ರಾಜೀವ್‌ಗಾಂಧಿ ನಗರ, ಗಂಗಸಂದ್ರ ಮುಖ್ಯರಸ್ತೆ, ಮೆಳೆಕೋಟೆ, ತುಮಕೂರು-572105 ದೂರವಾಣಿ ಸಂಖ್ಯೆ- 0816-2955580, 9844506629, 9886112434, 7349474339 ಅನ್ನು ಸಂಪರ್ಕಿಸಬಹುದೆಂದು ಪ್ರಾದೇಶಿಕ ನಿರ್ದೇಶಕರಾದ ಡಾ. ಲೋಕೇಶ ತಿಳಿಸಿದ್ದಾರೆ.

## ಅಂಬಿಗರ ಚೌಡಯ್ಯ ಜಯಂತಿ

**ಮಂಡ್ಯ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ 2023-24ನೇ ಸಾಲಿನ ಅಂಬಿಗರ ಚೌಡಯ್ಯ ಜಯಂತಿಯನ್ನು ಫೆಬ್ರವರಿ 3 ರಂದು ಬೆಳಿಗ್ಗೆ 11 ಗಂಟೆಗೆ ಗಾಂಧಿಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಜಯಂತಿಯನ್ನು ಉದ್ಘಾಟಿಸಲಿದ್ದು, ಶಾಸಕರಾದ ಪಿ. ರವಿಕುಮಾರ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದೆ ಸುಮಲತಾ ಅಂಬರೀಶ್, ಶಾಸಕ ಮರಿತಿಬ್ಬೇಗೌಡ, ಮಧು ಜಿ. ಮಾದೇಗೌಡ, ದಿನೇಶ್ ಗೂಳಿಗೌಡ, ಪಿ.ಎಂ ನರೇಂದ್ರಸ್ವಾಮಿ, ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಎಚ್.ಟಿ. ಮಂಜು, ಕೆ.ಎಂ, ಉದಯ್‌ರವರು ಭಾಗವಹಿಸಲಿದ್ದಾರೆ.

## ಸಂವಿಧಾನ ಜಾಗೃತಿ ಜಾಥಾ

**ಮಂಡ್ಯ:** 233 ಗ್ರಾಮ ಪಂಚಾಯಿತಿಗಳಲ್ಲಿ ಸಂಚರಿಸಿ ಸಂವಿಧಾನದ ಬಗ್ಗೆ ಜಾಗೃತಿ ಜಾಥಾ ಮಂಗಳವಾರ ಮಂಡ್ಯ ತಾಲ್ಲೂಕಿನ ಮಂಗಲ, ಸಂತೆಕಸಲಗೆರೆ, ಬೇವಿನಹಳ್ಳಿ, ಇಂಡುವಾಳು, ಯಲಿಯೂರು, ತೂಬಿನಕೆರೆ ಮತ್ತು ಮಂಡ್ಯ ಗ್ರಾಮಾಂತರ (ಚಿಕ್ಕ ಮಂಡ್ಯ) ಪಂಚಾಯಿತಿಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಿತು. ಬೇವಿನಹಳ್ಳಿ ಸರ್ಕಾರಿ ಶಾಲೆಯಲ್ಲಿ ಸಾಮೂಹಿಕ ಸಂವಿಧಾನ ಪೀಠಿಕೆ ವಾಚನ ಮಾಡಲಾಯಿತು.

ಸಾರ್ವಜನಿಕರಿಗೆ ಸಂವಿಧಾನ ನೀಡಿರುವ ಹಕ್ಕುಗಳು ಹಾಗೂ ಜವಾಬ್ದಾರಿಗಳ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅರಿವು ಮೂಡಿಸಲಾಯಿತು.

ಜಾಥಾ ಸಾಗುವ ದಾರಿಯುದ್ದಕ್ಕೂ ಕಲಾ ತಂಡ ಮತ್ತು ಪೂರ್ಣಕುಂಭ ಹೊತ್ತ ಮಹಿಳೆಯರು ಭಾಗವಹಿಸಿ ಜಾಥಾಕ್ಕೆ ಮೆರುಗು ತಂದವು. ಇದೇ ಸಂದರ್ಭದಲ್ಲಿ 'ಸಹಿ ಅಭಿಯಾನ'ವನ್ನು ಏರ್ಪಡಿಸಲಾಯಿತು.

### ಹುಣಸೂರು ಉಪವಿಭಾಗಾಧಿಕಾರಿ ಮೊಹಮ್ಮದ್ ಹಾರಿಸ್ ಸುಮ್ಮೈರ್ ಮನವಿ

## ಸಿಡಿಲು ಮಲ್ಲಿಕಾರ್ಜುನ ಜಾತ್ರೆಗೆ ಸಹಕರಿಸಿ

**ಪಿರಿಯಾಪಟ್ಟಣ:** ಈ ಬಾರಿ ನಡೆಯುವ ಶ್ರೀ ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ಬ್ರಹ್ಮರಥೋತ್ಸವ ಹಾಗೂ ಜಾತ್ರಾ ಮಹೋತ್ಸವ ಸುವ್ಯವಸ್ಥೆತವಾಗಿ ನಡೆಯಬೇಕು. ಅದಕ್ಕಾಗಿ ನಿಮ್ಮೆಲ್ಲರ ಸಹಕಾರ ಬೇಕು ಎಂದು ಸಾರ್ವಜನಿಕರು, ಅಧಿಕಾರಿಗಳಿಗೆ ಹುಣಸೂರು ಉಪವಿಭಾಗಾಧಿಕಾರಿ ಮೊಹಮ್ಮದ್ ಹಾರಿಸ್ ಸುಮ್ಮೈರ್ ಮನವಿ ಮಾಡಿದರು.



ತಾಲೂಕಿನ ಬೆಟ್ಟದ ಪುರದ ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನದ ಆವರಣದಲ್ಲಿ ನಡೆದ ಜಾತ್ರಾ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಗ್ರಾಪಂ ವತಿಯಿಂದ ನೈರ್ಮಲ್ಯ ಕಾಪಾಡಲು ರಸ್ತೆಗಳನ್ನು ಸ್ವಚ್ಛತೆ ಮಾಡದಲ್ಲಿ ಡಸ್ಟ್ ಬಿನ್ ಗಳನ್ನು ಇಡಬೇಕು. ಜಾತ್ರೆಗೆ ಬಂದಂತಹ ಜಾನುವಾರುಗಳು ಹಾಗೂ ರಥೋತ್ಸವಕ್ಕೆ ಬಂದಂತಹ ಜನರಿಗೆ ಟ್ಯಾಂಕರ್ ಮೂಲಕ ಕುಡಿ ಯುವ ನೀರು ವ್ಯವಸ್ಥೆಯಾಗಬೇಕು,'' ಎಂದು ಗ್ರಾಪಂ ಸಿಬ್ಬಂದಿಗೆ ಸೂಚಿಸಿದರು.

ತಹಸೀಲ್ದಾರ್ ಕುಂಜಿ ಅಹಮ್ಮದ್ ಮಾತನಾಡಿ ಜಾನುವಾರು ಜಾತ್ರೆ ಫೆ.12ರಿಂದ ನಡೆಯುವುದರಿಂದ ರಾತ್ರಿ ಮತ್ತು ಹಗಲು ಪಶು ಆಸ್ಪತ್ರೆಯನ್ನು ತೆರೆಯಲು ಪಶು ಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಸೋಮಯ್ಯ ಅವರಿಗೆ ಸೂಚಿಸಿದ ಅವರು ರಾತ್ರಿ ಯಾರಿಗೂ ತೊಂದರೆಯಾಗ ದಂತೆ ಜಾತ್ರೆ ಸಮಯದಲ್ಲಿ ಸರಿಯಾದ ಲೈಟಿಂಗ್ಸ್ ವ್ಯವಸ್ಥೆಯಾಗಬೇಕು ಎಂದು ಬೆಟ್ಟದಪುರ ಸೆಸ್ಕ್ ಎಇಇ ಪ್ರಶಾಂತ್ ಗೆ ಸೂಚಿಸಿದರೆ, ತಾತ್ಕಾಲಿಕ ಆರೋಗ್ಯ ಘಟಕ ತೆರೆಯಲು ಸಂಬಂಧಪಟ್ಟ ಅಧಿಕಾರಿ ಗಳಿಗೆ ತಿಳಿಸಿದರು. ಪೊಲೀಸ್ ಬಂದೋ ಬಸ್ತ್ ಕೂಡ ಇರಬೇಕು ಎಂದರು.

ಉಪ ತಹಸೀಲ್ದಾರ್ ಶಶಿಧರ್ ಮಾತನಾಡಿ, 'ಫೆ.9ರಂದು ಜಾತ್ರೆ ಹರಾಜು ಇದೆ. ಸಾರ್ವಜನಿಕರು ಹರಾಜಿನಲ್ಲಿ ಭಾಗವಹಿಸಿ, ಫೆ.12ರಂದು ಜಾನುವಾರುಗಳ ಜಾತ್ರೆ ನಡೆಯುತ್ತದೆ. ಹರಾಜಿನ ಅವದಿ ಫೆ.12 ರಿಂದ ಮಾ.3 ರವರೆಗೆ ಇರುತ್ತದೆ. ಫೆ.23ಕ್ಕೆ ಗಿರಿಜಕಲ್ಯಾಣ ಫೆ.24 ರಂದು ಮೊಹೋತ್ಸವ, ಸಿಡಿಲು ಮಲ್ಲಿಕಾರ್ಜುನಸ್ವಾಮಿ ಬ್ರಹ್ಮರಥೋತ್ಸವ ನಡೆಯುತ್ತದೆ ಎಂದರು. ದೇವಸ್ಥಾನದ ಪ್ರಧಾನ ಅರ್ಚಕ

ಸತೀಶ್ ಕಶ್ಯಪ್ ಮಾತನಾಡಿ ತಮಗೆ ಕೇವಲ ತಿಂಗಳಿಗೆ 500 ರೂ. ಸಂಬಳ ಇದೆ. ಇದನ್ನು ಹೆಚ್ಚು ಮಾಡಬೇಕು. ಆದರಿಂದ ಇಲಾಖೆಗೆ ಪ್ರಸ್ತಾವನೆ ಕಳುಹಿಸುವಂತೆ ಮನವಿ ಮಾಡಿದರು.

ಸಭೆಯಲ್ಲಿ ಗ್ರಾಪಂ ಅಧ್ಯಕ್ಷ ಅಯ್ಯರ್ ಗಿರೀಶ್. ಗ್ರಾಮದ ಮುಖಂಡರಾದ ನೀಲಯ್ಯ, ಅನಿತಾ ತೋಂಟಪ್ಪಶೆಟ್ಟಿ ರಾಜಶೇಖರ್, ಪುಟ್ಟರಾಜು, ಬಿ.ಜೆ. ದೇವರಾಜು, ಪಶುಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಸೋಮಯ್ಯ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಪೂಜಾ, ಪೊಲೀಸ್ ವೃತ್ತನಿರೀಕ್ಷಕ ದೀಪಕ್, ಪಿಎಸ್ಐ ಪ್ರಕಾಶ್ ಎಂ.ಎತ್ತಿನಮನಿ, ಕಂದಾಯ ನಿರೀಕ್ಷಕ ಅಜ್ಜಲ್ ಷರೀಫ್, ಗ್ರಾಮ ಲೆಕ್ಕಾಧಿಕಾರಿಗಳು, ಸಾರ್ವಜನಿಕರು, ಮುಖಂಡರು ಹಾಜರಿದ್ದರು.


**ಆನೇಕಲ್ ಯೋಜನಾ ಪ್ರಾಧಿಕಾರ**

'ಅಣ್ಣ', ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು - 560 099.
www.anekal.tpa.gov.in, www.e-vinyasa.kar.nic.in

ಸಂಖ್ಯೆ : ಆಯೋಪ್ರಾ/ಭೂ.ಬ/52/2023-24 **ಪ್ರಕಟಣೆ** ದಿನಾಂಕ: 30.01.2024

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಸೆಕ್ಷನ್ 14(ಎ) ಪ್ರಕಾರ ಅರ್ಜಿದಾರರು ಭೂ ಉಪಯೋಗ ಬದಲಾವಣೆಗೆ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿಯನ್ನು ಪರಿಶೀಲಿಸಲಾಗಿ, ಅಡಕದಲ್ಲಿನ ಮಾಹಿತಿಯನ್ನು ಆಧರಿಸಿ ಕೆಳಕಂಡಂತೆ ವಿವರಗಳನ್ನು ಕೋಷ್ಟಕದಲ್ಲಿ ಅಳವಡಿಸಿದೆ. ಕಾಯ್ದೆಯಲ್ಲಿನ ಅಂಶಗಳನ್ವಯ ಪ್ರಸ್ತುತ ಪ್ರಕರಣಕ್ಕೆ ಸಂಬಂಧಿಸಿದಂತೆ, ಭೂ ಉಪಯೋಗ ಬದಲಾವಣೆಗೆ ಯಾರಿಂದಲಾದರು ಆಕ್ಷೇಪಣೆಗಳಿದ್ದರೆ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್ ಕಛೇರಿಗೆ ಸಲ್ಲಿಸಲು ಕೋರಲಾಗಿದೆ. ನಿಗದಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ. | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮ | ಸರ್ವೆ ನಂ. | ವಿಸ್ತೀರ್ಣ ಎ-ಗುಂ | ಅನುಮೋದಿತ ಮಹಾ ಯೋಜನೆ ಯಂತೆ ಭೂಉಪಯೋಗ | ಬದಲಾವಣೆ ಕೋರಿರುವ ಭೂಉಪಯೋಗ |
|---|---|---|---|---|---|---|---|---|
| 1. | ಶ್ರೀ ಮುನಿಯಪ್ಪ, ಶ್ರೀ ವೆಂಕಟರಮಣಪ್ಪ ಮತ್ತು ಗಣೇಶ್ | ಆನೇಕಲ್ | ಸರ್ಜಾಪುರ | ಚಂಬೇನಹಳ್ಳಿ | 63/1 | 0-35 | ವಸತಿ | ವಾಣಿಜ್ಯ |
| 2. | ಶ್ರೀ ಕೆ. ಶಶಿ ಬಿನ್ ಎಂ. ಕೃಷ್ಣಪ್ಪ | ಆನೇಕಲ್ | ಸರ್ಜಾಪುರ | ಚಂಬೇನಹಳ್ಳಿ | 63/2 | 0-36 | ವಸತಿ | ವಾಣಿಜ್ಯ |
| 3. | ಶ್ರೀ ಶ್ರೀಧರ | ಆನೇಕಲ್ | ಸರ್ಜಾಪುರ | ಚಂಬೇನಹಳ್ಳಿ | 72/3ಎ | 1-20 | ವಸತಿ | ವಾಣಿಜ್ಯ |
| 4. | ಶ್ರೀಮತಿ ಸುಧಾ, ತೇಜಸ್ವಿನಿ ಮತ್ತು ಉಮಾದೇವಿ | ಆನೇಕಲ್ | ಸರ್ಜಾಪುರ | ಚಂಬೇನಹಳ್ಳಿ | 72/4 | 1-05 | ವಸತಿ | ವಾಣಿಜ್ಯ |

ಪ್ರಸ್ತಾವನೆಯಲ್ಲಿನ ಪ್ರಶ್ನಿತ ಜಮೀನನ್ನು ವಾಣಿಜ್ಯ ಉದ್ದೇಶಕ್ಕೆ ಅಭಿವೃದ್ಧಿಪಡಿಸುವುದರಿಂದ ಸ್ಥಳೀಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಸೃಷ್ಟಿಯಾಗುತ್ತದೆ. ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಿದಂತಾಗುತ್ತದೆ. ಇದರಿಂದ ನಗರ ಪ್ರದೇಶದ ಸಮಗ್ರ ಅಭಿವೃದ್ಧಿ ಹೊಂದತ್ತದೆ ಎಂಬ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ, ಸದರಿ ಪ್ರದೇಶವನ್ನು **ವಸತಿ** ವಲಯದಿಂದ **ವಾಣಿಜ್ಯ** ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/-
ಸದಸ್ಯ-ಕಾರ್ಯದರ್ಶಿ ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್.

ವಾಸಾಸಂಇ/ವಾಪ್ರ/ಜೆಎ/3316/2023-24

# ಶ್ರೀ ಮಡಿವಾಳ ಮಾಚಿದೇವರ ಜಯಂತಿ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯಕ್ತಾಶ್ರಯದಲ್ಲಿ ''ಶ್ರೀ ಮಡಿವಾಳ ಮಾಚಿದೇವರ ಜಯಂತಿ''ಯನ್ನು ಫೆಬ್ರವರಿ 01 ರಂದು ಮಧ್ಯಾಹ್ನ 12:00 ಗಂಟೆಗೆ ನಗರದ ಡಾ|| ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಮಾನ್ಯ ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಸಿ.ಸುಧಾಕರ್ ರವರು ನೆರವೇರಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಪ್ರದೀಪ್ ಈಶ್ವರ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರಾದ ಶಿವರಾಜ ಎಸ್. ತಂಗಡಗಿ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಬಿ.ಎನ್. ಬಚ್ಚೇಗೌಡ, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಸ್. ಮುನಿಸ್ವಾಮಿ, ವಿಧಾನಸಭಾ ಕ್ಷೇತ್ರದ ಶಾಸಕರುಗಳಾದ ಎಸ್.ಎನ್. ಸುಬ್ಬಾರೆಡ್ಡಿ, ಪ್ರದೀಪ್ ಈಶ್ವರ್, ಬಿ.ಎನ್. ರವಿಕುಮಾರ್, ಕೆ.ಹೆಚ್.ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತು ಶಾಕರುಗಳಾದ ವೈ ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಎಂ.ಎಲ್. ಅನಿಲ್ ಕುಮಾರ್ ಭಾಗವಹಿಸಲಿದ್ದಾರೆ. ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ|| ಎನ್. ಮಂಜುಳ ರವರು ಭಾಗವಹಿಸವರು. ಶ್ರೀ ಮಡಿವಾಳ ಮಾಚಿದೇವರ ಕುರಿತು ಉಪನ್ಯಾಸವನ್ನು ಸರ್ ಎಂ.ವಿ ಪದವಿ ಪೂರ್ಣ ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕರಾದ ಆರ್. ರಾಜಶೇಖರ್ ರವರು ನೀಡಲಿದ್ದಾರೆ. ಜಿಲ್ಲಾ ಮತ್ತು ತಾಲ್ಲೂಕು ಮಡಿವಾಳ ಮಾಚಿದೇವರ ಸಂಘದ ಎಲ್ಲಾ ಪದಾಧಿಕಾರಿಗಳು ಮತ್ತು ಎಲ್ಲಾ ಸಮುದಾಯಗಳ/ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು ಹಾಗೂ ಸಮಸ್ತ ನಾಗರೀಕರು ಭಾಗವಹಿಸಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಎನ್.ಮನಿಷಾ ತಿಳಿಸಿದ್ದಾರೆ.

# ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಗೆ ಹೆಸರು ನೊಂದಾಯಿಸಿಕೊಳ್ಳಿ

**ಮಂಡ್ಯ:** 2023-24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ಹೊಸ ಸದಸ್ಯರನ್ನು ನೋಂದಾಯಿಸಲು ಮತ್ತು ನವೀಕರಣಗೊಳಿಸುವ ಪ್ರಕ್ರಿಯೆ ಪ್ರಾರಂಭವಾಗಿದೆ. ಸದಸ್ಯರನ್ನು ನೊಂದಾಯಿಸಲು ನೋಂದಣಿ ಶುಲ್ಕ ಗ್ರಾಮೀಣ ಸಹಕಾರ ಸಂಘಗಳಲ್ಲಿ ನೋಂದಣಿಯಾದ ಸದಸ್ಯರ ಕುಟುಂಬದ ಒಟ್ಟು 04 ಜನರಿಗೆ ರೂ.500/- ಗಳು, ನಾಲ್ಕಕ್ಕಿಂತ ಹೆಚ್ಚಾದಲ್ಲಿ ಒಬ್ಬ ಸದಸ್ಯರಿಗೆ ರೂ.100/- ಗಳನ್ನು ಹೆಚ್ಚಿಗೆ ನೋಂದಣಿ ಶುಲ್ಕ ಪಾವತಿಸಬೇಕಾಗಿರುತ್ತದೆ ಹಾಗೂ ನಗರ ಸಹಕಾರ ಸಂಘಗಳಲ್ಲಿ ನೋಂದಣಿಯಾದ ಸದಸ್ಯರ ಕುಟುಂಬದ ಒಟ್ಟು 04 ಜನರಿಗೆ ರೂ.1000/- ಗಳು, ನಾಲ್ಕಕ್ಕಿಂತ ಹೆಚ್ಚಾದಲ್ಲಿ ಒಬ್ಬ ಸದಸ್ಯರಿಗೆ ರೂ.200/- ಗಳನ್ನು ಹೆಚ್ಚಿಗೆ ನೋಂದಣಿ ಶುಲ್ಕ ಪಾವತಿಸಬೇಕಾಗಿರುತ್ತದೆ. ಪ.ಜಾ./ಪ.ಪಂ. ಸದಸ್ಯರ ನೋಂದಣಿ ಶುಲ್ಕವನ್ನು ಸರ್ಕಾರವೇ ಭರಿಸುತ್ತದೆ ಮತ್ತು ಸಮುದಾಯದ ವಿವರಗಳನ್ನು ಕಡ್ಡಾಯವಾಗಿ ಜಾತಿ ಪ್ರಮಾಣ ಪತ್ರದಲ್ಲಿರುವಂತೆ ಆರ್ ಡಿ ಸಂಖ್ಯೆಯನ್ನು ಕಡ್ಡಾಯವಾಗಿ ತಪ್ಪದೆ ನಮೂದಿಸಿಕೊಂಡು. ಈ ಸಮುದಾಯದ ಸದಸ್ಯರನ್ನು ಒಂದೇ ಬಾರಿ ಮೂರು ವರ್ಷಗಳ ಅವಧಿಗೆ ನೋಂದಾಯಿಸಿಕೊಂಡು ಸದರಿ ಅವಧಿಗೆ ಕಾರ್ಡ್ಗಳನ್ನು ವಿತರಿಸಲಾಗುವುದು. ಯಶಸ್ವಿನಿ ಯೋಜನೆಯ ವಂತಿಕೆ ಪಾವತಿಸಲು ಪೆಬ್ರವರಿ 2 ಕೊನೆಯ ದಿನಾಂಕ ವಾಗಿರುತ್ತದೆ. ಫಲಾನುಭವಿ ಕುಟುಂಬಕ್ಕೆ ವಾರ್ಷಿಕ ವೈದ್ಯಕೀಯ ಚಿಕಿತ್ಸಾ ವೆಚ್ಚದ ಗರಿಷ್ಠ ಮಿತಿ ರೂ.5.00 ಲಕ್ಷಕ್ಕೆ ನಿಗಧಿಪಡಿಸಲಾಗಿದೆ. ಈ ಯೋಜನೆಯಡಿ ಒಟ್ಟು 1650 ಕಾಯಿಲೆಗಳಿಗೆ ಮತ್ತು 478 (ಐಸಿಯು) ಚಿಕಿತ್ಸೆಗಳು ಸೇರಿ ಒಟ್ಟು 2128 ಚಿಕಿತ್ಸೆಗಳನ್ನು ಯಶಸ್ವಿನಿ ಯೋಜನೆಗೆ ಅಳವಡಿಸಿಕೊಂಡು ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಇದರ ಪ್ರಯೋಜನೆ ಪಡೆಯಬಹುದಾಗಿದೆ. ಈ ಯೋಜನೆಯಡಿಯಲ್ಲಿ ಸದಸ್ಯರಾಗಲು ಯಾವುದೇ ಸಹಕಾರ ಸಂಘ/ಸೌಹಾರ್ದ ಸಹಕಾರಿಯಲ್ಲಿ ಅಥವಾ ಸ್ವ ಸಹಾಯ ಗುಂಪುಗಳಲ್ಲಿ ಸದಸ್ಯರಾಗಿ ಯಶಸ್ವಿನಿ ಸಹಕಾರ ರೈತರ ಆರೋಗ್ಯ ರಕ್ಷಣಾ ಯೋಜನೆಯಡಿ ನೊಂದಾಯಿಸುವ ದಿನಾಂಕಕ್ಕೆ 3 ತಿಂಗಳು ಕಳೆದಿರಬೇಕು. ಈ ಯೋಜನೆಯಡಿಯಲ್ಲಿ ನೊಂದಣಿಯಾಗಲು ವಯೋಮಿತಿ ನಿರ್ಬಂಧವಿರುವುದಿಲ್ಲ ಎಂದು ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ್ದಾರೆ.

# 4 ರಿಂದ ಮಾರಾಟ ಮೇಳ

**ಮಂಡ್ಯ:** ಲಿಡ್‌ಕರ್ ಉತ್ಪನ್ನಗಳಾದ ಚರ್ಮದ ಚಪ್ಪಲಿ, ಶೂ, ಬೆಲ್ಟ್, ಸೋಫಾ, ಬ್ಯಾಗ್ ಸೇರಿದಂತೆ ವಿವಿಧ ವಸ್ತುಗಳನ್ನು ರಿಯಾಯಿತಿ ದರದಲ್ಲಿ ಮಂಡ್ಯ ನಗರದ ಗುರುಭವನದಲ್ಲಿ ಫೆಬ್ರವರಿ 4 ರಿಂದ 11 ರವರೆಗೆ ಮಾರಾಟ ಏರ್ಪಡಿಸಿದೆ. ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿದ ವತಿಯಿಂದ ಆಯೋಜಿಸಿರುವ ಮಾರಾಟವನ್ನು ನಗರದ ಜನತೆ ಸದುಪಯೋಗಪಡಿಸಿಕೊಳ್ಳಬೇಕು. ಅಪ್ಪಟ ಚರ್ಮ ವಸ್ತುಗಳಿಂದ, ಚರ್ಮ ಕುಶಲಕರ್ಮಿಗಳಿಂದ ತಯಾರಿಸಲ್ಪಟ್ಟ ಪಾದರಕ್ಷೆ, ಶೂ, ಬೆಲ್ಟ್, ವ್ಯಾಲೆಟ್, ವ್ಯಾನಿಟಿ ಬ್ಯಾಗ್ ಮುಂತಾದ ಚರ್ಮ ವಸ್ತುಗಳನ್ನು ರಿಯಾಯಿತಿಯಲ್ಲಿ ಮಾರಾಟಕ್ಕೆ ಇಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ. 9480886258 ಅನ್ನು ಸಂಪರ್ಕಿಸಬಹುದು ಎಂದು ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಾನುಪಾತದ ಕುಸಿತ ಸಮಾಜದ ಅವನತಿಯ ಸೂಚಕ

**ಚಿಕ್ಕಬಳ್ಳಾಪುರ:** ಜನವರಿ-31:ಲಿಂಗಾನುಪಾತವು ಕುಸಿಯುತ್ತಾ ಸಾಗುವುದು ಒಂದು ಸಮಾಜವು ಅವನತಿಯೆಡೆಗೆ ಸಾಗುತ್ತಿರುವ ಸೂಚಕವಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್ .ತಿಪ್ಪೇಸ್ವಾಮಿ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್. ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ''ಬೇಟಿ ಬಚಾವೋ ಬೇಟಿ ಪಡಾವೋ'' ಕಾರ್ಯಕ್ರಮದ ಅಂಗವಾಗಿ ಬುಧವಾರ ನೆಡೆದ ಒಂದು ದಿನದ ಕಾರ್ಯಗಾರದ ತರಬೇತಿಯನ್ನು. ಗಿಡ ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು

ಒಂದು ಆರೋಗ್ಯಕರ ಸ್ವಾಸ್ಥ್ಯ ಸಮಾಜ ಎಂದರೆ ಗಂಡು ಮತ್ತು ಹೆಣ್ಣನ್ನು ತಾರತಮ್ಯದಿಂದ ನೋಡದೆ,ಎಲ್ಲ ಅವಕಾಶಗಳನ್ನು ಸಮವಾಗಿ ನೀಡಬಲ್ಲ ಸಮ ಸಮಾಜವಾಗಿದೆ. ಲಿಂಗಾನುಪಾತ, ಹೆಣ್ಣು ಮಗುವಿನ ರಕ್ಷಣೆ, ಪೋಷಣೆ ಇನ್ನೂ ಮುಂತಾದ ಸೂಚ್ಯಾಂಕಗಳಲ್ಲಿ ಜಿಲ್ಲೆಯು 17ನೇ ಸ್ಥಾನದಲ್ಲಿದೆ ಆದ್ದರಿಂದ ' ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯ ಚಟುವಟಿಕೆಗಳಲ್ಲಿ ಪರಿಣಾಮಕಾರಿ ಅನುಷ್ಠಾನವನ್ನು ಮಾಡುವ ಜವಾಬ್ದಾರಿ ಜಿಲ್ಲಾಡಳಿತದ ಅಧಿಕಾರಿಗಳು, ಸಿಬ್ಬಂದಿ ಮತ್ತು ಸಾರ್ವಜನಿಕರ ಮೇಲಿದೆ. ಇಲ್ಲವಾದಲ್ಲಿ ಮನುಷ್ಯರು ಕಾಡು ಮೃಗಗಳಂತೆ ಕಚ್ಚಾಡಿಕೊಂಡು ಸಂಘರ್ಷಿಸುವುದನ್ನು ನೋಡಬೇಕಾಗುತ್ತದೆ ಎಂದು ಬಹಳ ಸೂಕ್ಷ್ಮವಾಗಿ ತಿಳಿಸಿದರು. 2001ರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಲಿಂಗಾನುಪಾತದ ಪ್ರಮಾಣ 952 ಇತ್ತು 2011 ರಲ್ಲಿ 953ಕ್ಕೆ ಹೆಚ್ಚಳವಾಗಿದೆ ಆದರೂ ಪುರುಷ ಮತ್ತು ಸ್ತ್ರೀಯರ ಪ್ರಮಾಣ ಸಮಾಜದಲ್ಲಿ ಸಮವಾಗುವ ನಿಟ್ಟಿನಲ್ಲಿ ಹೆಣ್ಣು ಮಕ್ಕಳಿಗೆ ಪೂರಕವಾಗಿ ಸರ್ಕಾರ ಜಾರಿಗೆ ತಂದಿರುವ ಎಲ್ಲ ಯೋಜನೆಗಳನ್ನು ಸಮರ್ಪಕವಾಗಿ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸೋಣ.ಹೆಣ್ಣು ಮಗುವಿನ ರಕ್ಷಣೆಗೆ ಬೇಕಾದ ಅಗತ್ಯ ಯುಕ್ತ ಕ್ರಮಗಳನ್ನು ತೆಗೆದುಕೊಳ್ಳೋಣ. ಜಿಲ್ಲೆಯಲ್ಲಿ 1000 ಪುರುಷ ಮತದಾರರಿಗೆ 1027 ಮಹಿಳಾ ಮತದಾರರು ಇರುವುದು ಶುಭ ಸೂಚನೆಯಾಗಿದ್ದು ಹೆಣ್ಣು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ ಎಲ್ಲರೂ ಶ್ರಮಿಸುವುದು ಸಾಮಾಜಿಕ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಡಾ.ಎನ್ ಭಾಸ್ಕರ್ ಅವರು ಮಾತನಾಡಿ ಬಾಲ್ಯ ವಿವಾಹ, ಹೆಣ್ಣು ಭ್ರೂಣ ಹತ್ಯೆಗಳು ಸಾಮಾಜಿಕ ಪಿಡುಗಳಾಗಿದ್ದು, ಇಂತಹ ಪಿಡುಗುಗಳನ್ನು ಸಂಪೂರ್ಣವಾಗಿ ನಿಯಂತ್ರಿಸಲು ಈ ಕಾರ್ಯಗಾರ ಸಹಕಾರಿಯಾಗಲಿದೆ. ಇಲ್ಲಿ ತಿಳಿಸಿ ಕೊಡುವ ಪಿಸಿಪಿಎನ್ ಡಿಟಿ ಕಾಯ್ದೆ, ಲಿಂಗ ಸಮಾನತೆ, ಪೋಕ್ಸೋ ಕಾಯ್ದೆ ಮತ್ತು ಬಾಲ್ಯ ವಿವಾಹ ನಿಷೇಧ ಕಾಯ್ದೆಗಳ ಬಗ್ಗೆ ತಿಳಿದುಕೊಂಡು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು. ''ಡಿಜಿಟಲ್ ಟಾಕ್ಸಿಡಿಟಿ ಬಗ್ಗೆ ಎಚ್ಚರ'' : ಇತ್ತಿಚ್ಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳ ಬಳಕೆ, ಮೊಬೈಲ್ ಸೇರಿದಂತೆ ಇತರ ಡಿಜಿಟಲ್ ಉಪಕರಣಗಳ ಅನಗತ್ಯ ಬಳಕೆಯಿಂದ ದಿನ ನಿತ್ಯ ರೇಡಿಯೇಷನ್ ಕಿರಣಗಳ ಮೂಲಕ ವಿಷವನ್ನು ನಮ್ಮ ಮನಸ್ಸಿನೊಳಗೆ ನಾವೇ ಸೇರಿಸುತ್ತಾ ಇದ್ದೇವೆ. ಇದರಿಂದ ನಿದ್ರಾಹೀನತೆ, ಹೃದಯಾಘಾತ, ಆತ್ಮಹತ್ಯೆಗೆ ಪ್ರಚೋದನೆಗೆ ಕಾರಣವಾಗಲಿದೆ. ಮೊಬೈಲ್ ನ್ನು ದೂರ ಸಂಪರ್ಕಕ್ಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ಚಟುವಟಿಕೆಗಳನ್ನು ಅಳವಡಿಸಿಕೊಳ್ಳಲು ಮಾತ್ರ ಬಳಸಬೇಕು. ರಾತ್ರಿ 8 ರ ನಂತರ ಮೊಬೈಲ್ ಬಳಸದಿರುವುದು ಉತ್ತಮ ಇಲ್ಲವಾದಲ್ಲಿ ಅದು ನಮ್ಮ ದೈನಂದಿನ ದಿನಚರಿಯನ್ನೇ ಹಾಳುಮಾಡುತ್ತದೆ. ಕಾರ್ಯಕ್ಷತೆಯನ್ನು ಕುಂಠಿತ ಮಾಡುತ್ತದೆ ಈ ಬಗ್ಗೆ ವಿದ್ಯಾರ್ಥಿಗಳು ಹೆಚ್ಚಿನ ಎಚ್ಚರವಹಿಸಬೇಕು. ಪಾಲಕರಾದ ಹಿರಿಯರು ಈ ಬಗ್ಗೆ ನಿಗಾ ವಹಿಸಬೇಕು ಎಂದು ತಿಳಿಸಿದರು.

ಪೊಲೀಸ್ ಉಪಾಧೀಕ್ಷಕ ಶಿವಕುಮಾರ್ ಮಾತನಾಡಿ, ಇತ್ತೀಚಿಗೆ ಪೋಕ್ಸೋ ಪ್ರಕರಣಗಳು ಹೆಚ್ಚುತ್ತಲೇ ಸಾಗಿವೆ. ಡಿಜಿಟಲ್ ಯುಗ ಮತ್ತು ಸಾಮಾಜಿಕ ಮಾಧ್ಯಮಗಳ ಕೆಲವು ದೃಶ್ಯಾವಳಿ ಮತ್ತು ಚಿತ್ರಾವಳಿಗಳ ಪ್ರಭಾವದಿಂದ ಹದಿಹರೆಯದ ಮಕ್ಕಳಲ್ಲಿ ಪ್ರೇಮಾಂಕುರ, ಬಾಲ್ಯವಿವಾಹ ಹೀಗೆ ಇನ್ನಿತರ ಸಾಮಾಜಿಕ ಸಮಸ್ಯೆಗಳಿಗೆ ಕಾರಣವಾಗುತ್ತಿದೆ, ಇದನ್ನು ತಪ್ಪಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಾಗೂ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತಳಮಟ್ಟದಲ್ಲಿ ಕ್ಷೇತ್ರ ಕಾರ್ಯವನ್ನು ಸಮರ್ಪಕವಾಗಿ ಮಾಡಬೇಕು. ಅದರಲ್ಲೂ ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹೆಚ್ಚಿನ ನಿಗಾವಹಿಸಿ ಮೇಲಿನ ಅಧಿಕಾರಿಗಳಿಗೆ ತಿಳಿಸಬೇಕು. ಸ್ಥಳೀಯವಾಗಿ ಯಾವುದೇ ಒತ್ತಡ, ಭಯಗಳಿಗೆ ಒಳಗಾಗಬಾರದು, ಅಂತಹವರ ರಕ್ಷಣೆಗೆ ಪೊಲೀಸ್ ಇಲಾಖೆ ಸದಾಸಿದ್ಧವಾಗಿರುತ್ತದೆ. ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳ ಬಗ್ಗೆ ಮಾಹಿತಿ ನೀಡುವವರ ವಿವರ ಗೌಪತ್ಯೆ ಕಾಪಾಡಲಾಗುವುದು, ಇಂತಹ ಘಟನೆಗಳು ಕಂಡು ಬಂದರೆ 1098, 112 ಸಹಯವಾಣಿ ಕರೆ ಮಾಡಿ ತಿಳಿಸಿ ಸಾರ್ವಜನಿಕರು ಜವಾಬ್ದಾರಿ ಮೆರೆಯುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ,ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬೈಲಾಂಜಿನಪ್ಪ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮರಿಸ್ವಾಮಿ, ನಿರೂಪಣಾಧಿಕಾರಿ ರಮೇಶ್, ಜಿಲ್ಲಾ ಪಿಸಿಪಿಎನ್ ಡಿಟಿ ಕಾಯ್ದೆಯ ಸಲಹಾ ಸಮಿತಿಯ ಸದಸ್ಯರು ಹಾಗೂ ಕಾನೂನು ಸಲಹೆಗಾರ ಎ.ಜಿ.ಸುಧಾಕರ್, ದಾರವಾಡ ಜಿಲ್ಲೆಯ ಮಹಿಳಾ ಸಮಾಖ್ಯಾ ಜಿಲ್ಲಾ ಸಂಯೋಜಕಿ ಡಾ.ಆರತಿ ಸಬರದ್, ಬೆಳಗಾವಿ ಜಿಲ್ಲೆಯ ಮಹಿಳಾ ಸಮಾಖ್ಯಾ ಜಿಲ್ಲಾ ಸಂಯೋಜಕಿ ನಾಗರತ್ನ, ಕೆಂಪೇಗೌಡ ಕಾನೂನು ಕಾಲೇಜಿನ ವಿದ್ಯಾರ್ಥಿಗಳು, ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

### ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಸಲಹೆ

# ಬಾಲ್ಯ ವಿವಾಹ ತಡೆಗಟ್ಟಿ



**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ಎಲ್ಲ ಯುಕ್ತ ಕ್ರಮಗಳನ್ನು ಅಧಿಕಾರಿಗಳು ತೆಗೆದುಕೊಳ್ಳಬೇಕು. ಈ ಕಾರ್ಯಕ್ಕೆ ಎಲ್ಲ ಸರ್ಕಾರೇತರ ಸಂಸ್ಥೆಗಳು, ಸಾರ್ವಜನಿಕರು ಕೈ ಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಬಾಲ್ಯ ವಿವಾಹ ತಡೆಗಟ್ಟುವ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಲ್ಯಾಣ ಮಂಟಪಗಳು, ದೇವಸ್ಥಾನಗಳು ಸೇರಿದಂತೆ ವಿವಾಹ ಕಾರ್ಯಕ್ರಮಗಳು ನಡೆಯುವ ಸ್ಥಳಗಳ ಮೇಲೆ ನಿರಂತರವಾಗಿ ನಿಗಾ ಇಡಬೇಕು. ಅಲ್ಲಿನ ಮುಖ್ಯಸ್ಥರು, ಮಾಲೀಕರು ಮತ್ತು ಪುರೋಹಿತರುಗಳಿಗೆ ಬಾಲ್ಯ ವಿವಾಹಗಳು ಜರುಗಲು ಅವಕಾಶ ನೀಡದಂತೆ ತಿಳಿಸಬೇಕು. ಉಲ್ಲಂಘಿತರಿಗೆ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಬೇಕು. ಜಿಲ್ಲಾಡಳಿತ ಎಷ್ಟೆಲ್ಲ ಯುಕ್ತ ಕ್ರಮಗಳನ್ನು ತೆಗೆದುಕೊಂಡರೂ ಈ ವರ್ಷ 10 ಬಾಲ್ಯ ವಿವಾಹ ಪ್ರಕರಣಗಳು ದಾಖಲಾಗಿವೆ. ಈ ಪ್ರಕರಣಗಳಲ್ಲಿ ನಿಯಮಾವಳಿ ರೀತ್ಯ ನ್ಯಾಯ ಒದಗಿಸಬೇಕು. ಮುಖ್ಯವಾಗಿ ಬಾಲ್ಯ ವಿವಾಹಗಳನ್ನು ತಡೆಯಲು ಶಾಲಾ ಕಾಲೇಜುಗಳ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಲು ಆಪ್ತ ಸಮಾಲೋಚನೆ, ಸಂವಾದ ಏರ್ಪಡಿಸಬೇಕು. ಗ್ರಾಮ ಮತ್ತು ವಾರ್ಡ್ ಗಳ ಮಟ್ಟದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರಿಗೆ ಬಾಲ್ಯ ವಿವಾಹದ ಸುಳಿವು ಸಿಕ್ಕಲ್ಲಿ ಕೂಡಲೆ ಮೇಲಿನ ಅಧಿಕಾರಿಗಳಿಗೆ ತಿಳಿಸಿ ತುರ್ತು ಕ್ರಮಕ್ಕೆ ಸಹಕರಿಸಬೇಕು. ಮೇಲಿನ ಅಧಿಕಾರಿಗಳು ತುರ್ತು ಸಂಪರ್ಕಕ್ಕೆ ಬಾರದಿದ್ದಾಗ ಸಹಾಯವಾಣಿ ಸಂಖ್ಯೆಗಳಾದ 1098, 112 ಗೆ ಕರೆ ಮಾಡಿ ತಿಳಿಸಬೇಕು, ಸಾರ್ವಜನಿಕರು ಸಹ ಈ ವಿಚಾರದಲ್ಲಿ ಸಾಮಾಜಿಕ ಜವಾಬ್ದಾರಿ ತೋರಬೇಕು. ಬಾಲ್ಯ ವಿವಾಹದ ಪಿಡುಗನ್ನು ಸಂಪೂರ್ಣವಾಗಿ ತಡೆಗಟ್ಟಲು ಜಿಲ್ಲಾಡಳಿತದೊಂದಿಗೆ ಸಮಸ್ತ ನಾಗರಿಕರು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

2023ರ ಏಪ್ರಿಲ್ 2023 ರಿಂದ ಡಿಸೆಂಬರ್ ವರೆಗೆ ಜಿಲ್ಲೆಯಲ್ಲಿ 84 ಬಾಲ್ಯ ವಿವಾಹ ಪ್ರಕರಣಗಳನ್ನು ದಾಖಲಿಸಲಾಗಿವೆ. ಈ ಪೈಕಿ 74 ಪ್ರಕರಣಗಳಲ್ಲಿ ಬಾಲ್ಯ ವಿವಾಹಗಳನ್ನು ತಡೆಯಲಾಗಿದೆ. 10 ಬಾಲ್ಯ ವಿವಾಹಗಳು ನಡೆದಿದ್ದು ತಪ್ಪಿತಸ್ಥರ ವಿರುದ್ಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಪ್ರಧಾನ ಮಂತ್ರಿ ಮಾತೃ ವಂದನ ಯೋಜನೆಯಡಿ ಗರ್ಭಿಣಿ ಸ್ತ್ರೀಯರಿಗೆ ನೀಡುವ ಧನಸಹಾಯ ಯೋಜನೆಗೆ ಶೇ. 100 ರಷ್ಟು ಅರ್ಹ ಫಲಾನುಭವಿಗಳನ್ನು ನೋಂದಣಿ ಮಾಡಲಾಗಿದೆ ಎಂದು ತಿಳಿಸುತ್ತಾ, ಸಖಿ ಒನ್ ಸ್ಟಾಪ್ ಮತ್ತು ಸ್ವಧಾರ ಸಂಸ್ಥೆಗಳ ಕಾರ್ಯವೈಖರಿಗಳ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಬಾಲ ನ್ಯಾಯ ಮಂಡಳಿಯಲ್ಲಿ ಈವರೆಗೆ 67 ಪ್ರಕರಣಗಳು ದಾಖಲಾಗಿದ್ದು, 21 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ. ಉಳಿದ ಬಾಕಿ ಪ್ರಕರಣಗಳ ವಿಲೆ ಪ್ರಗತಿಯಲ್ಲಿದೆ. ಮಕ್ಕಳ ಕಲ್ಯಾಣ ಸಮಿತಿಗೆ ಈವರೆಗೆ 327 ಪ್ರಕರಣಗಳು ದಾಖಲಾಗಿದ್ದು, ಎಲ್ಲ ಪ್ರಕರಣಗಳನ್ನು ಕಾನೂನು ರೀತಿಯ ವಿಲೇವಾರಿ ಮಾಡಲಾಗಿದೆ. 2023ರ ಏಪ್ರಿಲ್ ನಿಂದ ಡಿಸೆಂಬರ್ ವರೆಗೆ 118 ಪೋಕ್ಸೋ ಪ್ರಕರಣಗಳು ದಾಖಲಾಗಿದ್ದು, ಈ ಪ್ರಕರಣಗಳಲ್ಲಿ ನೊಂದ ಮಕ್ಕಳಿಗೆ ಕಾನೂನು ರೀತಿಯ ಸೂಕ್ತ ನ್ಯಾಯ ಒದಗಿಸುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಜಿಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ಮಹೇಶ್ ಕುಮಾರ್ ಪೊಲೀಸ್ ಉಪಾಧೀಕ್ಷಕ ಶಿವಕುಮಾರ್, ನಿರೂಪಣಾಧಿಕಾರಿ ರಮೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

# ಪ್ರಗತಿ ಮೊಬೈಲ್ ಅಪ್ಲಿಕೇಶನ್‌ಗೆ ಚಾಲನೆ ನೀಡಿದ ಮುಖ್ಯಮಂತ್ರಿ

**ಬೆಂಗಳೂರು:** ಜಿಲ್ಲಾ ಮಟ್ಟದ ಎಲ್ಲಾ ಇಲಾಖೆಗಳಲ್ಲಿ ಅನುಷ್ಠಾನವಾಗುವ ಯೋಜನೆಗಳ ಕ್ಷೇತ್ರ ಮಟ್ಟದ ಪ್ರಗತಿ ವೀಕ್ಷಣೆಗೆ ಪೂರಕವಾಗಿ ಅಭಿವೃದ್ಧಿ ಪಡಿಸಿರುವ ಪ್ರಗತಿ ಮೊಬೈಲ್ ಅಪ್ಲಿಕೇಶನ್ ತಂತ್ರಾಂಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಚಾಲನೆ ನೀಡಿದರು.

ಪ್ರಗತಿ ಮೊಬೈಲ್ ಅಪ್ಲಿಕೇಶನ್ ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನಗಳ ಪರಿಣಾಮಕಾರಿ ಮೇಲ್ವಿಚಾರಣೆಗೆ ಸಹಾಯ ಮಾಡುತ್ತದೆ ಮತ್ತು ಅಧಿಕಾರಿಗಳು ವೇಳಾಪಟ್ಟಿಯ ಪ್ರಕಾರ ಸಂಸ್ಥೆಗಳಿಗೆ ಭೇಟಿ ನೀಡುವುದರಿಂದ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಮತ್ತು ಅವುಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಅಪ್ಲಿಕೇಶನ್ ಅಗತ್ಯತೆಗಳನ್ನು ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತದೆ ಹಾಗೂ ಸರಿಯಾದ ಯೋಜನೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುವುದು ಮತ್ತು ನಿಧಿಯ ಪರಿಣಾಮಕಾರಿ ಬಳಕೆಗೆ ಸಹಾಯ ಮಾಡುತ್ತದೆ.

ಪ್ರಗತಿ ಮೊಬೈಲ್ ಅಪ್ಲಿಕೇಶನ್ ತಂತ್ರಾಂಶಕ್ಕೆ ಚಾಲನೆ ನೀಡುವ ವೇಳೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಅತೀಕ್ ಅಹಮದ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ತ್ರಿಲೋಕ್ ಚಂದ್ರ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.




# ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸಿ

## ಸಚಿವರು, ಸಂಸದರಿಂದ ಕೇಂದ್ರ ಸಚಿವರಿಗೆ ಪತ್ರ

**ಬೆಂಗಳೂರು:** ರಾಯಚೂರು ನಗರದಲ್ಲಿ ಏಮ್ಸ್ ಸಂಸ್ಥೆ ಸ್ಥಾಪನೆಗೆ ಕೇಂದ್ರ ಸರಕಾರದ ಮೇಲೆ ಒತ್ತಡ ಹೇರುವಂತೆ ಆಗ್ರಹಿಸಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್ .ಭೋಸರಾಜು ಅವರು ಕಲ್ಯಾಣ ಕರ್ನಾಟಕ ಭಾಗದ ಸಂಸದರು, ರಾಜ್ಯಸಭಾ ಸದಸ್ಯರು ಹಾಗೂ ಕೇಂದ್ರ ಸಚಿವರಿಗೆ ಪತ್ರ ಬರೆದಿದ್ದಾರೆ.

ಕೇಂದ್ರ ಸರಕಾರದಿಂದ ಮಹತ್ವಾಕಾಂಕ್ಷೆ ಜಿಲ್ಲೆಯ ಹಾಗೂ 371(ಜೆ) ಅಡಿಯಲ್ಲಿ ವಿಶೇಷ ಸ್ಥಾನಮಾನ ಹೊಂದಿರುವ ಹಿಂದುಳಿದ ಜಿಲ್ಲೆಗಳಲ್ಲಿ ಒಂದಾಗಿದೆ. ನಂಜುಂಡಪ್ಪ ವರದಿಯಲ್ಲಿ ರಾಯಚೂರು ಜಿಲ್ಲೆಯಲ್ಲಿ ಐಐಟಿ (ಖಖಖಿ) ಯಂತಹ ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸುವಂತೆ ಸಲಹೆ ನೀಡಲಾಗಿತ್ತು. ಆದರೆ, ಕಾರಣಾಂತರಗಳಿಂದ ಐಐಟಿಯನ್ನು ಧಾರವಾಡ ಜಿಲ್ಲೆಗೆ ಮಂಜೂರು ಮಾಡಲಾಯಿತು. ಆ ನಂತರದ ದಿನಗಳಲ್ಲಿ ಕರ್ನಾಟಕ ರಾಜ್ಯಕ್ಕೆ ಏಮ್ಸ್ ಮಂಜೂರು ಮಾಡುವುದಾಗಿ ಕೇಂದ್ರ ಸರಕಾರ ಭರವಸೆ ನೀಡಿತು.

ಧಾರವಾಡ ಜಿಲ್ಲೆಯಲ್ಲಿ ಐಐಟಿ ಸ್ಥಾಪನೆ ಆದ ನಂತರ ಪ್ರತಿಷ್ಠಿತ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಸಂಸ್ಥೆಯಾಗಿರುವ ಏಮ್ಸ್‌ನ್ನು ರಾಯಚೂರು ಜಿಲ್ಲೆಗೆ ಮಂಜೂರು ಮಾಡಬೇಕು ಎನ್ನುವ ಬೇಡಿಕೆ ಹೆಚ್ಚಾಗಿದೆ. ಪಕ್ಷಾತೀತವಾಗಿ ರಾಯಚೂರು ನಗರದಲ್ಲಿ ಏಮ್ಸನ್ನು ಸ್ಥಾಪಿಸಬೇಕು ಎನ್ನುವ ಕೂಗಿನ ನಡುವೆ 629 ದಿನಗಳಿಂದ ಸಾರ್ವಜನಿಕರು ನಿರಂತರ ಹೋರಾಟ ನಡೆಸುತ್ತಿದ್ದಾರೆ.

ಸನ್ಮಾನ್ಯ ಸಿದ್ದರಾಮಯ್ಯ ಅವರ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದ ನಂತರ ನಿರಂತರವಾಗಿ ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ಕೇಂದ್ರ ಸರಕಾರದ ಮೇಲೆ ಒತ್ತಡ ಹೇರುತ್ತಿದೆ. 2023ನೇ ಜೂನ್ 17 ರಂದು ಸನ್ಮಾನ್ಯ ಮುಖ್ಯಮಂತ್ರಿಗಳು ಕೇಂದ್ರ ಆರೋಗ್ಯ ಮಂತ್ರಿಗಳಿಗೆ ಪತ್ರವನ್ನು ಬರೆದು ರಾಯಚೂರಿನಲ್ಲಿ ಏಮ್ಸ್ ಮಂಜೂರು ಮಾಡುವಂತೆ ಮನವಿ ಮಾಡಿದರು. ಅಲ್ಲದೇ, ರಾಜ್ಯ ಸರಕಾರದಿಂದ ಅಗತ್ಯ ಸಹಕಾರ ನೀಡುವುದಾಗಿಯೂ ತಮ್ಮ ಪತ್ರದಲ್ಲಿ ತಿಳಿಸಿದ್ದರು. ಇದಕ್ಕೆ ಉತ್ತರ ದೊರಕದ ಹಿನ್ನಲೆಯಲ್ಲಿ 2023ನೇ ಸೆಪ್ಟೆಂಬರ್ 7 ರಂದು ಮತ್ತೊಂದು ಪತ್ರವನ್ನು ಬರೆದು ಮನವಿಯನ್ನು ಮಾಡಿದ್ದರು. 2023ನೇ ಆಗಸ್ಟ್ 22ರಂದು ರಾಯಚೂರು ಜಿಲ್ಲೆಯ ಜಿಲ್ಲಾ ಉಸ್ತುವಾರಿ ಸಚಿವರು, ಜನಪ್ರತಿನಿಧಿಗಳು, ಹೋರಾಟ ಸಮಿತಿಯ ಸದಸ್ಯರನ್ನು ಒಳಗೊಂಡ ತಂಡ ದೆಹಲಿಗೆ ಭೇಟಿ ನೀಡಿ ಆರೋಗ್ಯ ಸಚಿವರನ್ನು ಭೇಟಿ ಮಾಡಿ ರಾಜ್ಯ ಸರಕಾರದ ಅಧಿಕೃತ ಒಪ್ಪಿಗೆಯನ್ನು ಸಲ್ಲಿಸಿತು. ಈ ತಂಡಕ್ಕೆ ಆರೋಗ್ಯ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ, ರಾಜ್ಯ ಸರಕಾರದ ಆಶಯದಂತೆಯೇ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು. ಆದರೆ, ಕೇಂದ್ರ ಸರಕಾರದಿಂದ ಇದುವರೆಗೂ ಯಾವುದೇ ರೀತಿಯ ಅಧಿಕೃತ ಸಂವಹನ ಸ್ವೀಕಾರವಾಗಿಲ್ಲ. ಈ ಹಿನ್ನಲೆಯಲ್ಲಿ 2024ನೇ ಜನವರಿ 29ರಂದು ಮತ್ತೊಮ್ಮೆ ಸನ್ಮಾನ್ಯ ಮುಖ್ಯಮಂತ್ರಿಗಳು ಕೇಂದ್ರ ವಿತ್ತ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರಿಗೆ ಪತ್ರ ಬರೆದು 2024-25 ರ ಕೇಂದ್ರ ಬಜೆಟ್‌ನಲ್ಲಿ ಘೋಷಣೆ ಮಾಡುವಂತೆ ಕೋರಿದ್ದಾರೆ.

ಈ ಹಿನ್ನಲೆಯಲ್ಲಿ ಕಲ್ಯಾಣ ಕರ್ನಾಟಕದ ಜನಪ್ರತಿನಿಧಿಗಳಾದ ತಾವುಗಳು ಕೇಂದ್ರ ಸರಕಾರದ ಮೇಲೆ ಮತ್ತಷ್ಟು ಒತ್ತಡ ಹೇರುವ ಅವಶ್ಯಕತೆಯಿದೆ. ತಾವುಗಳು ಕೇಂದ್ರ ಸರಕಾರದ ವಿತ್ತ ಸಚಿವರು ಹಾಗೂ ಸಂಬಂಧಪಟ್ಟ ಸಚಿವರಿಗೆ ಮನವಿ ಮಾಡಿಕೊಳ್ಳುವ ಮೂಲಕ ರಾಯಚೂರು ನಗರಕ್ಕೆ ಏಮ್ಸ್ ಮಂಜೂರು ಆಗುವಂತೆ ಮಾಡುವ ನಿಟ್ಟಿನಲ್ಲಿ ಸಹಕರಿಸಿ ಎಂದು ಈ ಮೂಲಕ ವಿನಂತಿಸಿಕೊಳ್ಳುತ್ತಿದ್ದೇನೆ ಎಂದು ಸಚಿವರು ತಮ್ಮ ಪತ್ರದಲ್ಲಿ ವಿವರಿಸಿದ್ದಾರೆ.

# ಅಜ್ಜಿಪುರದಲ್ಲಿ ಪ್ಲಾಸ್ಟಿಕ್ ಅಕ್ಕಿ ಪತ್ತೆ

**ಚಾಮರಾಜನಗರ:** ರಾಜ್ಯ ಸರ್ಕಾರ ನೀಡುವ ಉಚಿತ ಪಡಿತರ ವಿತರಣೆಯಲ್ಲಿ ಪ್ಲಾಸ್ಟಿಕ್ ಅಕ್ಕಿ ಪತ್ತೆ ಆಗಿದೆ ಎಂದು ರೈತ ಸಂಘಟನೆ ಆರೋಪ ಮಾಡಲಾಗಿದೆ. ಚಾಮರಾಜನಗರ ಜಿಲ್ಲೆ ಹನೂರು ತಾಲೂಕಿನ ಅಜ್ಜಿಪುರ ಗ್ರಾಮದ ಸೊಸೈಟಿ ಗೋದಾಮಿನಲ್ಲಿ ಸರ್ಕಾರ ನೀಡುವ ಪಡಿತರದಲ್ಲಿ ಪ್ಲಾಸ್ಟಿಕ್ ಅಕ್ಕಿ ಇದೆ ಎಂದು ರೈತ ಸಂಘಟನೆ ಶನಿವಾರ ಸೊಸೈಟಿಗೆ ಬೀಗ ಹಾಕಿ ಆಕ್ರೋಶ ವ್ಯಕ್ತಪಡಿಸಿದ್ದು ಮಂಗಳವಾರದಂದು ಆಹಾರ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಇದೇ ವೇಳೆ ಚಂದನ್ ಹಾಗೂ ಶ್ರೀನಿವಾಸ್ ಎಂಬುವರು ಪಡಿತರ ಅಕ್ಕಿ ಪಡೆದಿದ್ದು, ಇದರಲ್ಲಿ ಪ್ಲಾಸ್ಟಿಕ್ ಅಕ್ಕಿ ಕಲಬೆರಕೆಯಾಗಿದೆ ಎಂದು ಅಧಿಕಾರಿಗಳ ಮುಂದೆಯೆ ಅಕ್ಕಿಯನ್ನು ತೋರಿಸಿ ಆರೋಪ ಮಾಡಿದರು.

ರೈತ ಸಂಘದ ಹನೂರು ಘಟಕದ ಅಧ್ಯಕ್ಷ ಅಮ್ಜದ್ ಖಾನ್ ಮಾತನಾಡಿ ಹನೂರು ತಾಲೂಕಿನ ವಿವಿಧ ಗ್ರಾಮಗಳಿಗೆ ಪಡಿತರ ಸರಬರಾಜಾಗುತ್ತಿದ್ದು, ಅಜ್ಜಿಪುರ ಗ್ರಾಮದಲ್ಲಿ ಪ್ಲಾಸ್ಟಿಕ್ ಅಕ್ಕಿ ಬೆರೆಕೆಯಾಗಿದೆ, ಇದನ್ನು ಜನರಿಗೆ ಕೊಟ್ಟು ಅವರ ಅನಾರೋಗ್ಯಕ್ಕೆ ಯಾಕೆ ಕಾರಣರಾಗುತ್ತೀರಾ, ಸರ್ಕಾರ ನೀಡುವ ಪಡಿತರದಲ್ಲೂ ಮೋಸ ಮಾಡುತ್ತೀರಾ ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಗೌಡೇಗೌಡ ಮಾತನಾಡಿ ಪಡಿತರ ವಿತರಣೆ ವೇಳೆ ಅಧಿಕಾರಿಗಳು ಪರಿಶೀಲನೆ ಮಾಡಬೇಕು, ಸರ್ಕಾರ ನೀಡುವ ಪಡಿತರದಲ್ಲಿ ಯಾವುದೇ ತೊಂದರೆ ಆಗಬಾರದು, ನಿಯಮದ ಪ್ರಕಾರ ಪಡಿತರ ವಿತರಣೆಯನ್ನು ಮಂಗಳವಾರ ರಜೆ ಇದ್ದು ಉಳಿದ ದಿನಗಳು ಪಡಿತರ ವಿತರಣೆ ಮಾಡಬೇಕು. ಇಲ್ಲಿನ ಹಳ್ಳಿ ಜನರು ಕೂಲಿ ಕೆಲಸಕ್ಕೆ ಎಂದು ಹೋಗುತ್ತಾರೆ, ನೀವು ಮೂರು ದಿನ ಕೊಡುವ ಬದಲು ವಾರಪೂರ್ತಿ ಪಡಿತರ ನೀಡಿದರೆ ಉತ್ತಮ, ಯಾವುದೇ ಕಲಬೆರಿಕೆಯನ್ನು ವಿತರಿಸಬಾರದು, ಅಧಿಕಾರಿಗಳ ಮುಂದೆಯೇ ಇದು ಪ್ಲಾಸ್ಟಿಕ್ ಅಕ್ಕಿ ಮಿಶ್ರಣವಾಗಿದೆ ಎಂದು ಅಕ್ಕಿಯನ್ನ ತೋರಿಸಿದರು.



# ಸಂಘ ಸಂಸ್ಥೆಗಳು ನೊಂದವರ ಪರವಿರಲಿ



**ಪಿರಿಯಾಪಟ್ಟಣ:** ಯಾವುದೆ ಸಂಘ ಸಂಸ್ಥೆ ನೊಂದವರು, ಅಸಹಾಯಕರು, ದುರ್ಬಲ ವರ್ಗದವರ ಪರ ಕೆಲಸ ಮಾಡಿದಾಗ ಮಾತ್ರ ಅದರ ಹುಟ್ಟುವಿಕೆಗೊಂದು ಅರ್ಥ ಬರುತ್ತದೆ ಎಂದು ಮಹಾರಾಣಿ ಕಲಾ ಮತ್ತು ವಾಣಿಜ್ಯ ಕಾಲೇಜಿನ ಪ್ರಾಂಶುಪಾಲ ಪ್ರೊ.ಸೋಮಣ್ಣ ತಿಳಿಸಿದರು.

ಮೈಸೂರಿನ ಜ್ಞಾನಾಮೃತ ಸೇವಾ ಸಂಸ್ಥೆಯವರು ಹೊರ ತಂದಿರುವ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದರು. ಅನೇಕ ಗುರುತರವಾದ ಜವಾಬ್ದಾರಿ, ಸಾಮಾಜಿಕ ಕಳಕಳಿಯನ್ನು ಹೊತ್ತು ಸಾವಿರಾರು ಸಂಘಗಳು ಜನ್ಮ ತಾಳಿವೆ ಆದರೆ ಅವುಗಳು ತಮ್ಮ ಉದ್ದೇಶವನ್ನು ಈಡೇರಿಸಿಕೊಳ್ಳಲು ವಿಫಲವಾಗಿರುವ ಉದಾಹರಣೆಗಳು ಸಾಕಷ್ಟಿವೆ ಆದ್ದರಿಂದ ಸಂಘಸಂಸ್ಥೆಗಳು ಕೇವಲ ನೊಂದಣಿಯಾದರೆ ಸಾಲದು, ಅದು ಬೆಳೆದು ಹೆಮ್ಮರವಾಗಿ ಬಡವರಿಗೆ ಮತ್ತು ದುರ್ಬಲ ವರ್ಗದವರ ಧ್ವನಿಯಾಗಿ ಕೆಲಸ ಮಾಡಬೇಕು ಆಗ ಮಾತ್ರ ಅವುಗಳ ರಚನೆಗೆ ಅರ್ಥ ಬರುತ್ತದೆ. ನಾಡಿನಲ್ಲಿ ಅನೇಕ ಸಂಘ ಸಂಸ್ಥೆಗಳು ಸಾಮಾಜಿಕ ಮತ್ತು ಧಾರ್ಮಿಕ ಕ್ಷೇತ್ರಗಳಲ್ಲಿ ಗುರುತರವಾದ ಜವಾಬ್ದಾರಿಯನ್ನು ಹೊತ್ತು ಸಾವಿರಾರು ಜನರಿಗೆ ಅನ್ನ ಮತ್ತು ಆಶ್ರಯ ನೀಡುವ ಮೂಲಕ ಹೆಮ್ಮರವಾಗಿ ಬೆಳೆದಿದೆ. ಇದರಿಂದ ಎಷ್ಟೋ ಜನಪರ ಕೆಲಸಗಳು, ಧಾರ್ಮಿಕ ಚಿಂತನೆಗಳು ನಡೆಯುತ್ತಿವೆ. ಅದರ ಹಾದಿಯಲ್ಲಿಯೇ ಜ್ಞಾನಾಮೃತ ಸೇವಾ ಸಂಸ್ಥೆಯೂ ಸಾಗಬೇಕು ಆ ಮೂಲಕ ಸಮಾಜದಲ್ಲಿ ನೊಂದವರ ಪರವಾಗಿ ಕೆಲಸ ಮಾಡಬೇಕು ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಹೆಚ್.ಕೆ.ನಾಗೇಶ್ ಮಾತನಾಡಿ ಸೇವೆಯೇ ಪರಮ ಧರ್ಮ ಎಂಬ ಆಶಯದೊಂದಿಗೆ ನಮ್ಮ ಸಂಸ್ಥೆ ಅಕ್ಷರ, ಆರೋಗ್ಯ, ಸ್ವಯಂ ಉದ್ಯೋಗ, ತರಬೇತಿ ಕಾರ್ಯಕ್ರಮ, ಮಹಿಳೆಯ ಸ್ವಾವಲಂಬನೆ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಕೆಲಸ ಮಾಡುತ್ತಿದ್ದು ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಕೆಲಸ ಮಾಡಲಿದೆ ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷರಾದ ಬಸವರಾಜು, ಹೆಚ್.ಪಿ.ಲೋಕೇಶ್, ಪ್ರಧಾನ ಕಾರ್ಯದರ್ಶಿ ಎಸ್.ಆರ್.ರವಿಕುಮಾರ್, ಪದಾಧಿಕಾರಿಗಳಾದ ಪಿ.ಎನ್.ದೇವೇಗೌಡ, ಗೋಕುಲಂ ಮಂಜುನಾಥ್, ಎನ್.ಆರ್.ಮೊಹಲ್ಲಾ ಗೋವಿಂದರಾಜು, ಮುದುಗುಪ್ಪೆ ಕುಮಾರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಉತ್ತಮ ಫಲಿತಾಂಶಕ್ಕೆ ವ್ಯಾಸಂಗದ ಕಡೆ ಗಮನ ಹರಿಸಿ

**ಹನೂರು :** ಉತ್ತಮ ಫಲಿತಾಂಶಕ್ಕೆ ವ್ಯಾಸಂಗ ಕಡೆ ಗಮನ ಹರಿಸಿ ಶಿಕ್ಷಕರು ಪೋಷಕರ ಶ್ರಮ ಮತ್ತು ಮಾರ್ಗದರ್ಶನ ಅರಿತು ವಿದ್ಯಾರ್ಥಿಗಳು ಕಲಿಕೆಗೆ ಒತ್ತು ನೀಡಿ ಎಂದು ಶಾಸಕ ಎಂ.ಆರ್ ಮಂಜುನಾಥ್ ತಿಳಿಸಿದರು



ಹನೂರು ತಾಲ್ಲೂಕಿನ ಬಂಡಳ್ಳಿ ಹಾಗೂ ಲೊಕ್ಕನಹಳ್ಳಿ ಗ್ರಾಮದಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ವ್ಯಾಸಂಗ ಮಾಡುತ್ತಿರುವಂತಹ ವಿದ್ಯಾರ್ಥಿಗಳಿಗೆ ಭರವಸೆ ತುಂಬುವ ಕಾರ್ಯಕ್ರಮವನ್ನು ಅಯೋಜಿಸಲಾಗಿತ್ತು

ಈ ವೇಳೆ ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು

ವಾರ್ಷಿಕ ಪರೀಕ್ಷೆಗಳಿಗೆ ಇನ್ನು ಕೆಲವೇ ದಿನಗಳು ಉಳಿದಿದ್ದು ವಿದ್ಯಾರ್ಥಿಗಳು ಈಗಿನಿಂದಲೇ ವಿಷಯವಾರು ಕಲಿಕೆಗೆ ಆದ್ಯತೆಯನ್ನು ನೀಡಿದರೆ ಉತ್ತಮ ಫಲಿತಾಂಶ ಪಡೆಯಬಹುದು

ವಿದ್ಯಾರ್ಥಿಗಳು ತಂದೆ ತಾಯಿಗಳ ತ್ಯಾಗ, ಶಿಕ್ಷಕರಶ್ರಮ ಮತ್ತು ಮಾರ್ಗದರ್ಶನವನ್ನು ಅರಿತು ನಿರಂತರ ಅಧ್ಯಯನದಲ್ಲಿ ತೊಡಗಿಸಿಕೊಳ್ಳಬೇಕು. ಪಟ್ಟಣ ಪ್ರದೇಶಗಳಿಗೆ ಹೋಲಿಕೆ ಮಾಡಿದರೆ ಉತ್ತಮವಾದ ಪರಿಸರ ವಾತಾವರಣವನ್ನು ಹೊಂದಿರುವ ಗ್ರಾಮೀಣಭಾಗದ ವಿದ್ಯಾರ್ಥಿಗಳು ಪ್ರಕೃತಿಯನ್ನೇ ಶಕ್ತಿಯನ್ನಾಗಿಸಿ ಮುನ್ನುಗ್ಗಬೇಕು. ಬರೆದಿರುವುದನ್ನು ಓದಿ, ಓದಿದ್ದನ್ನು ಮನನಮಾಡಿಕೊಂಡು ಉತ್ತಮ ರೀತಿಯಲ್ಲಿ ಪರೀಕ್ಷೆಯನ್ನು ಎದುರಿಸಬೇಕು. ನಮ್ಮ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಇಂಗ್ಲೀಷ್ ಮತ್ತು ಗಣಿತ ವಿಷಯಗಳಲ್ಲಿ ಪ್ರಬುದ್ಧತೆ ಸಾಧಿಸುವ ನಿಟ್ಟಿನಲ್ಲಿ ಕಾರ್ಯಾಗಾರಗಳನ್ನು ಕೈಗೊಳ್ಳಬೇಕಾದ ಅವಶ್ಯಕತೆ ಇದೆ. ನನ್ನ ಮೊದಲ ಆದ್ಯತೆ ಶಿಕ್ಷಣ, ಆರೋಗ್ಯ, ರೈತ ಏಳ್ಗೆಯಾಗಿದ್ದು, ಶಿಕ್ಷಣ ಇಲಾಖೆಗೆ ಬೇಕಾದ ಸಹಕಾರವನ್ನು ನಾನು ಸದಾ ಒದಗಿಸುತ್ತೇನೆ ಎಂದು ತಿಳಿಸಿದರು.

ವಿದ್ಯಾರ್ಥಿಗಳಿಂದ ಉತ್ತಮ ಫಲಿತಾಂಶ ಭರವಸೆ: ಶಾಸಕ ಎಂ.ಆರ್.ಮಂಜುನಾಥ್ ವಿನೂತನ ಆಲೋಚನೆಯಲ್ಲಿ ಮೂಡಿ ಬಂದಿರುವ ಎಸ್‌ಎಸ್ ಎಲ್ ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬುವ ದಿಸೆಯಲ್ಲಿ ಆಯೋಜಿಸಲಾಗಿದ್ದ ಭರವಸೆ ತುಂಬುವ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮದಿಂದ ನಮಗೆ ನಿಜಕ್ಕೂ ಸ್ಫೂರ್ತಿ, ಧೈರ್ಯ ಆತ್ಮವಿಶ್ವಾಸ ಮೂಡಿದೆಖಂಡಿತ ನಾವು ಉತ್ತಮ ಫಲಿತಾಂಶ ತಂದು ನಾವು ಓದಿದ ಶಾಲೆ, ಕಾಲೇಜು, ಶಿಕ್ಷಕರು, ತಂದೆ ತಾಯಿ, ನಿಮ್ಮೆಲ್ಲರಿಗೂ ಕೀರ್ತಿ ತರುತ್ತೇವೆ ಎಂದು ಭರವಸೆ ನೀಡಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜು ,ಕರ್ನಾಟಕ ಪಬ್ಲಿಕ್ ಶಾಲೆ ಯ ಪ್ರಾಂಶುಪಾಲರಾದ ಜಯಪ್ರಕಾಶ್ . ರಾಜೇಶ್ ದೈಹಿಕ ಶಿಕ್ಷಣ ಪರಿವಿಕ್ಷಕ ಮಹಾದೇವ್ , ಲೋಕ್ಕನಹಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗೇಶ್, ಮುಖ್ಯ ಶಿಕ್ಷಕರುಗಳಾದ ಬಸವರಾಜು ರಾಜೇಂದ್ರ,ನಾಗರಾಜು, ಅಮಲ್ ದಾಸ್ ,ಮೂರ್ತಿ, ಬಂಡಳ್ಳಿ ಜೇಸಿಮ್ ಪಾಷಾ,ಹಾಗೂ ಶಿಕ್ಷಕರಾದ ವೆಂಕಟೇಶ್ ,ಮಲ್ಲೇಶ್ ಇನ್ನತರರು ಉಪಸ್ಥಿತರಿದ್ದರು.

# ಮುಂದಿನ ಪೀಳಿಗೆಗೆ ನೀರನ್ನು ಉಳಿಸಿಕೊಡಲು ಹೋರಾಟದ ಸಂಕಲ್ಪ

**ಚನ್ನಪಟ್ಟಣ:** ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಸರ್. ಎಂ. ವಿಶ್ವೇಶ್ವರಯ್ಯ ಅವರ ತ್ಯಾಗ ಮತ್ತು ಶ್ರಮದ ಫಲವಾಗಿ ಕೆಆರ್‌ಎಸ್ ಜಲಾಶಯ ನಿರ್ಮಾಣವಾಗಿ ಕಾವೇರಿ ನೀರನ್ನು ಕುಡಿಯುತ್ತಿದ್ದೇವೆ. ಇದೇ ನಿಟ್ಟಿನಲ್ಲಿ ನಮ್ಮ ಅವಧಿಯಲ್ಲಿ ಮೇಕೆದಾಟು ಯೋಜನೆಯ ಮೂಲಕ 67 ಟಿಎಂಸಿ ನೀರನ್ನು ಮುಂದಿನ ಪೀಳಿಗೆಗೆ ಉಳಿಸಿಕೊಡುವ ನಿಟ್ಟಿನಲ್ಲಿ ಹೋರಾಟದ ಸಂಕಲ್ಪ ಮಾಡಿದ್ದು ಈ ಸಂಕಲ್ಪ ಈಡೇರುವ ವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂಬ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರ ರಮೇಶ್‌ಗೌಡ ಅವರು ಅಭಿಪ್ರಾಯಿಸಿದರು.



ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಬುಧವಾರ ನಡೆದ 119 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರು ಕೊಡಗಿನಲ್ಲಿ ಹುಟ್ಟಿ ಹರಿಯುತ್ತಿದ್ದ ಕಾವೇರಿ ನದಿ ನೀರನ್ನು ಸಂಗ್ರಹಿಸಿ ನಾಡಿನ ಜನತೆಗೆ ಕುಡಿಯಲು ಹಾಗೂ ಕೃಷಿ ಬೆಳೆಗೆ ನೀಡುವ ನಿಟ್ಟಿನಲ್ಲಿ ಆರ್ಥಿಕವಾಗಿ ಸಾಮಾಜಿಕವಾಗಿ, ರಾಜಕೀಯವಾಗಿ ಎಷ್ಟೊಂದು ಸಮಸ್ಯೆಗಳು ಬಂದರೂ ಸಹ ಎಲ್ಲವನ್ನು ಮೆಟ್ಟಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಹಾಗೂ ಸರ್. ಎಂ. ವಿಶ್ವೇಶ್ವರಯ್ಯ ಅವರು ಕೆಆರ್‌ಎಸ್ ಜಲಾಶಯವನ್ನು ನಿರ್ಮಿಸಿದ್ದು ಕಾವೇರಿ ನೀರನ್ನು ನೀಡಿದ್ದಾರೆ. ಈ ನಿಟ್ಟಿನಲ್ಲಿ ನಾಡಿನ ನೆಲ. ಜಲದ ಉಪಯೋಗ ಪಡೆಯುತ್ತಿರಯವ ನಾವೂ ಸಹ ಕೊಡಗಿನಲ್ಲಿ ಹೆಚ್ಚು ಮಳೆ ಆಗಿ ತಮಿಳುನಾಡಿಗೆ ನೀರು ಬಿಟ್ಟ ವೇಳೆ ಎರಡು ರಾಜ್ಯಕ್ಕೆ ಉಪಯೋಗಕ್ಕೆ ಬಾರದೆ ಸಮುದ್ರದ ಪಾಲಾಗುವ ಸುಮಾರು 67 ಟಿಎಂಸಿ ನೀರನ್ನು ಉಳಿಸಿಕೊಂಡು ಅಗತ್ಯ ಮುಂದಿನ ಪೀಳಿಗೆಗೆ ನೀರಿನ ಅಭಾವ ಬಾರದಂತೆ ನೋಡಿಕೊಳ್ಳೋಣ ಎಂಬ ನಿಟ್ಟಿನಲ್ಲಿ ನಿರಂತರ ಹೋರಾಟ ಮಾಡುತ್ತಿದ್ದೇವೆ. ನಮ್ಮ ಹೋರಾಟ ಪ್ರಚಾರಕ್ಕೋ ಸಂಖ್ಯಾಬಲದ ಹೋರಾಟವೋ ಅಲ್ಲ ಎಂದು ಅಭಿಪ್ರಾಯಿಸಿದರು. ಕಾವೇರಿ ನದಿ ನೀರನ್ನು ಆರಂಭದಲ್ಲಿ ತಮಿಳುನಾಡಿಗೆ ಬಿಟ್ಟ ಬೇಳೆ ಹಲವಾರು ರೈತಪರ, ಕನ್ನಡಪರ ಹೋರಾಟಗಾರರು ಉರುಳುಸೇವೆ, ರಕ್ತದಾನ ಸೇರಿದಂತೆ ವಿಭಿನ್ನ ಹೋರಾಟಗಳನ್ನು ಮಾಡಿ ಮನೆ ಸೇರಿದ್ದಾರೆ ಆದರೆ ರಾಮನಗರ ಜಿಲ್ಲೆಯಲ್ಲಿ ನಮ್ಮ ಸಂಘಟನೆ ಹಾಗೂ ಮಂಡ್ಯದಲ್ಲಿ ಸುನಂದ ಜಯರಾಂ ಅವರು, ಚಾಮರಾಜನಗರದಲ್ಲಿ ಶ್ರೀನಿವಾಸ್‌ಗೌಡರು ಹಾಗೂ ಮೈಸೂರಿನಲ್ಲಿ ಸಂಘಟನೆಯೊಂದು ನಿರಂತರವಾಗಿ ಹೋರಾಟ ಮಾಡುತ್ತಾ ಬಂದಿದ್ದು, ನಮ್ಮ ಹೋರಾಟದ ಉದ್ದೇಶವೇ ಮುಂದಿನ ಪೀಳಿಗೆ ಕಾವೇರಿ ನದಿ ನೀರಿಗಾಗಿ ಹೋರಾಟದ ಹಾದಿ ತುಳಿಯದಂತೆ ನೀರಿನ ಸಂಕಷ್ಟ ಸೂತ್ರವನ್ನು ರಚಿಸುವುದಾಗಿದೆ. ಈ ನಿಟ್ಟಿನಲ್ಲಿ ನಮ್ಮ ಹೋರಾಟ ನಿರಂತರವಾಗಿದ್ದು ಈ ಹೋರಾಟದಲ್ಲಿ ಜಯ ಸಿಗುವ ತನಕ ಹೋರಾಟ ನಿಲ್ಲುವುದಿಲ್ಲ ಎಂದು ರಮೇಶ್‌ಗೌಡರು ಹೇಳಿದರು.

ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷರು ಹಾಗೂ ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡ(ಜಿಎನ್) ಅವರು ಮಾತನಾಡಿ, ಕನ್ನಡ ನಾಡಿನಲ್ಲಿ ನೆಲ, ಜಲದ ಉಪಯೋಗ ಪಡೆಯುವ ಜನರಲ್ಲಿ, ಕನ್ನಡಾಭಿಮಾನ, ಹಾಗೂ ಸ್ವಾಭಿಮಾನ ಇಲ್ಲವಾಗಿದೆಯೇ ಎಂಬ ಅನುಮಾನಗಳು ಕಾಡುತ್ತಿವೆ ಎಂದು ಬೇಸರ ವ್ಯಕ್ತಪಡಿಸಿದರು. ಕಾವೇರಿ ಜಲಾಶಯದಲ್ಲಿ ನೀರು ಕಡಿಮೆಯಾಗುತ್ತಿದ್ದಂತೆ ಕಾವೇರಿ ಕೊಳ್ಳದ ಜಿಲ್ಲೆಗಳ ಮನೆಗಳಿಗೆ ನೀಡುತ್ತಿದ್ದ ನೀರಿನ ಸರಬರಾಜಿನಲ್ಲಿ ವ್ಯತ್ಯಾಸ ಮಾಡಿದ್ದಾರೆ. ಪಟ್ಟಣದಲ್ಲಿ ಪ್ರತಿನಿತ್ಯ 1 ಗಂಟೆ ಬರುತ್ತಿದ್ದ ನೀರು ಇಂದು ಎರಡು ದಿನಕ್ಕೆ ಒಮ್ಮೆ 10 ನಿಮಿಷಗಳು ನೀರು ಬಿಡುತ್ತಿದ್ದಾರೆ. ಮುಂದೆ ವಾರಕ್ಕೆ ಒಮ್ಮೆ ನೀರು ಬಂದಾಗ ಜನತೆಗೆ ನೀರಿನ ಬೆಲೆ ಗೊತ್ತಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ವೇದಿಕೆ ಜಿಲ್ಲಾಧ್ಯಕ್ಷರ ಯೋಗೀಶ್‌ಗೌಡ, ಉಪಾಧ್ಯಕ್ಷ ಬೆಳಕು ಶ್ರೀಧರ್. ರಂಜಿತ್‌ಗೌಡ, ಪವನ್, ರ್‍ಯಾಂಬೋ ಸೂರಿ, ಹನುಮಂತನಗರ ವೆಂಕಟರಮಣ, ಜಗದಾಪುರ ಕೃಷ್ಣೇಗೌಡ, ನಿವೃತ್ತ ಸರ್ಕಾರಿ ನೌಕರ ರಾಮಣ್ಣ, ಎಂಟಿಆರ್ ತಿಮ್ಮರಾಜು, ಆರ್. ಶಂಕರ್, ಜಮೀರ್, ಮೆಣಸಿಗನಹಳ್ಳಿ ರಾಮಕೃಷ್ಣಪ್ಪ, ಸಿದ್ದಪ್ಪಾಜಿ, ಇತೇಶ್, ಅನಂತ್ ಇದ್ದರು.

# ಜೀನಿಯಸ್ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ವಾಲಿಬಾಲ್ ಪಂದ್ಯಾವಳಿ

**ಮೈಸೂರು:** ಮೈಸೂರಿನ ವರ್ತೂಲ ರಸ್ತೆಯದೇವೆಗೌಡ ವೃತ್ತದಲ್ಲಿರುವ ಕೆ.ಬಿ.ಎಲ್ ಬಡಾವಣೆಯಜೀನಿಯಸ್‌ಕಾಲೇಜಿನಲ್ಲಿಜಿಲ್ಲಾಮಟ್ಟದ ವಾಲಿಬಾಲ್ ಮತ್ತು ಫನ್‌ಫೇರ್ ಕಾರ್ಯಕ್ರಮವನ್ನು ನಡೆಸಲಾಯಿತು. ಕಾರ್ಯಕ್ರಮಕ್ಕೆಜ್ಯೋತಿ ಬೆಳಗಿಸುವುದರ ಮೂಲಕ ಚಾಲನೆ ನೀಡಿದದಕ್ಷಿಣ ಶಿಕ್ಷಕರ ಕ್ಷೇತ್ರದ ಶಾಸಕರಾದ ಮರಿತಿಬ್ಬೇಗೌಡರವರುಇಂದು ಹುತಾತ್ಮರ ದಿನ, ಆದ್ದರಿಂದರಾಷ್ಟ್ರಪಿತ ಮಹಾತ್ಮಗಾಂಧೀಜಿರವರನ್ನುಸ್ಮರಿಸುವುದ ು ನಮ್ಮೆಲ್ಲರಕರ್ತವ್ಯ.ತ್ಯಾಗ ಬಲಿದಾನದಿಂದ ನಮಗೆ ಸ್ವಾಂತಂತ್ರವನ್ನುತಂದುಕೊಟಿ ್ಟದ್ದಾರೆ. ನನ್ನಜೀವನವೇನನ್ನ ಸಂದೇಶಎಂದು ಸಾರಿದರಾಷ್ಟ್ರಪಿತರುಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರುಭಾರತಕ್ಕೆವಿಶಿಷ್ಟವಾದ ಸಂವಿಧಾನವನ್ನುರಚಿಸಿ ಸಮಾನತೆಯನ್ನುತಂದವರು. ಇಂದು ಸಂವಿಧಾನವನ್ನುಇಡೀ ವಿಶ್ವವೇಗೌರವಿಸುತ್ತಿರುವುದು ನಮಗೆ ಸಂತಸತಂದಿದೆಎಂದರು.ಕ್ರೀಡೆ ಮನುಷ್ಯನಿಗೆಆರೋಗ್ಯವನ್ನುಹೆಚ್ಚಿಸುತ್ತದೆ. ವಿದ್ಯಾರ್ಥಿಗಳು ಪ್ರತಿನಿತ್ಯವೂ ಬೆಳಿಗ್ಗೆ ಮತ್ತು ಸಂಜೆದೈಹಿಕ ಕ್ರೀಡೆಗಳಲ್ಲಿ ತೊಡಗಬೇಕೆಂದುಕರೆ ನೀಡಿದರು.ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀಮತಿ ಸುರೇಖಾಪ್ರಭುಎನ್‌ರವರು ಮಾತನಾಡಿಕ್ರೀಡಾ ಚಟುವಟಿಕೆಗಳು ವಿದ್ಯಾರ್ಥಿಗಳಿಗೆ ದೈಹಿಕ ಮೌಲ್ಯದೊಂದಿಗೆ ಸಧೃಡ ಶರೀರವನ್ನು ಹೊಂದುವಂತೆ ಮಾಡುತ್ತದೆ. ಆದ್ದರಿಂದ ಕಾಲೇಜಿನ ವಿದ್ಯಾರ್ಥಿಗಳು ಬಿಡುವಿನ ವೇಳೆಯಲ್ಲಿ ಕ್ರೀಡಾಚಟುವಟಿಕೆಯಲ್ಲಿ ತೊಡಗುವುದು ಒಳ್ಳೆಯದೆಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಹೆಚ್.ಆರ್.ಸುರೇಶ್ ರವರುವಹಿಸಿ ಮಾತನಾಡಿ ಪಠ್ಯ ಚಟುವಟಿಕೆಗಳು ಎಷ್ಟು ಮುಖ್ಯವೋ ಅಷ್ಟೇ ಸಹಪಠ್ಯ ಚಟುವಟಿಕೆಗಳಾದ ಕ್ರೀಡೆ, ನೃತ್ಯ, ಸಂಗೀತ, ನಾಟಕ, ಸಾಹಿತ್ಯ, ವ್ಯಾಯಾಮವಿದ್ಯಾರ್ಥಿ ಜೀವನದಲ್ಲಿಮುಖ್ಯವಾಗಿರುತ್ತದೆ.ಮಾನಸಿಕ ಒತ್ತಡವನ್ನು ನಿಯಂತ್ರಿಸಬೇಕಾದರೆಕ್ರೀಡಾ ಚಟುವಟಿಕೆಗಳು ಪೂರಕವಾಗುತ್ತದೆ ಮತ್ತುಆರೋಗ್ಯವನ್ನು ಸಮತೋಲನದಲ್ಲಿಇಡಲು ಸಹಕಾರಿಯಾಗುತ್ತದೆಎಂದು ತಿಳಿಸಿದರು ನಂತರ ನಡೆದಜಿಲ್ಲಾಮಟ್ಟದಅಂತರಕಾಲೇಜು ವಾಲಿಬಾಲ್ ಹಾಗೂ ಫನ್‌ಪೇರ್‌ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.




# ತಾಳಕುಂಟೆ ಚುನಾವಣೆ ಮುಂದೂಡಿಕೆ

**ಮಾಲೂರು :** ತಾಳಕುಂಟೆ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರ ಚುನಾವಣೆಯು ಅರ್ಹ ಮತದಾರರನ್ನು ಬಿಟ್ಟು ಅಧ್ಯಕ್ಷ ಮತ್ತು ಕಾರ್ಯದರ್ಶಿ ಗಳು ತಮಗೆ ಬೇಕಾದಂತಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿ ಚುನಾವಣೆಯನ್ನು ಮಾಡಲು ಮುಂದಾಗಿರುವುದಾಗಿಎಂದು ಆರೋಪಿಸಿ ಹಾಲು ಉತ್ಪಾದಕರು ಮತ್ತುಗ್ರಾಮಸ್ಥರುಚು ನಾವಣೆಯನ್ನು ಬಹಿಷ್ಕರಿಸುವುದರ ಮೂಲಕ ಚುನಾವಣೆಯನ್ನು ಮುಂದೂಡಿದಘಟನೆ ನಡೆಯಿತು. ತಾಳಕುಂಟೆ ಹಾಲು ಉತ್ಪಾದಕ ಸಹಕಾರ ಸಂಘದಲ್ಲಿಒಟ್ಟು 43 ಅರ್ಹ ಹಾಲು ಉತ್ಪಾದಕರ ಮತಗಳಿದ್ದು, ಅದನ್ನುತಮಗೆ ಬೇಕಾದಂತೆ 25 ಹಾಲು ಉತ್ಪಾದಕರ ಮತಗಳಾಗಿ ಪಟ್ಟಿಯನ್ನು ತಯಾರಿಸಿ ಉಳಿದ ಮತಗಳನ್ನು ಕೈ ಬಿಟ್ಟಿದ್ದಾರೆ. ಈ ಹಿಂದೆ ಸ್ವತಹ ಕಾರ್ಯದರ್ಶಿಯವರೇ 43 ಮತಗಳ ಪಟ್ಟಿಯನ್ನು ನೀಡಿದ್ದು, ಪುನ: ಅವರೇ 25 ಮತಗಳ ಪಟ್ಟಿಯನ್ನು ನೀಡಿ ನಿರ್ದೇಶಕರಚುನಾವಣೆಯನ್ನು ಮಾಡಲು ಮುಂದಾಗಿರುವುದು ಸರಿಇಲ್ಲ. ಇದರಿಂದಅರ್ಹ ಮತದಾರರಿಗೆ ಅನ್ಯಾಯವಾಗುತ್ತದೆ ಎಂದು ಮುಂದೂಡಿದರು.

## ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ

# ಸಂವಿಧಾನಕ್ಕೆ ಬದ್ಧರಾಗಿರಬೇಕು

**ಬೆಂಗಳೂರು:** ನಮ್ಮ ಸರ್ಕಾರದಲ್ಲಿ ಅಧಿಕಾರಿಗಳು ಜಾತ್ಯತೀತತೆಗೆ ಮತ್ತು ಸಂವಿಧಾನಕ್ಕೆ ಪೂರ್ತಿ ಬದ್ಧರಾಗಿರಬೇಕು, ಇಲ್ಲದಿದ್ದರೆ ಅಂಥವರಿಗೆ ಇಲ್ಲಿ ಮುಂದುವರೆಯಲು ಅವಕಾಶ ಇಲ್ಲ ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ಎಚ್ಚರಿಕೆ ನೀಡಿದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಮೊಟ್ಟ ಮೊದಲ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿಗಳು, ನಿಮ್ಮ ಅನುಭವಗಳು ಜಿಲ್ಲಾಡಳಿತಕ್ಕೆ ನೆರವಾಗಬೇಕು. ಸರ್ಕಾರದ ಯೋಜನೆಗಳು, ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ಜನರಿಗೆ ತಲುಪಲು, ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ಷಿಪ್ರ ತೀರ್ಮಾನ ತೆಗೆದುಕೊಳ್ಳಲು ನೆರವಾಗಬೇಕು ಎನ್ನುವ ಕಾರಣಕ್ಕೆ ನಿಮ್ಮನ್ನು ನೇಮಿಸಲಾಗಿದೆ ಎಂದರು.

ಸರ್ಕಾರ ಬಂದು 8 ತಿಂಗಳಾಗಿದೆ. ಜಿಲ್ಲಾಧಿಕಾರಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಸಭೆ ನಡೆಸಿ ಹಲವು ಸೂಚನೆಗಳನ್ನು ನೀಡಿ 3-4 ತಿಂಗಳಾಗಿದೆ. ನೀವು ಉಸ್ತುವಾರಿ ವಹಿಸಿದ ಮೇಲೆ ಆಡಳಿತಾತ್ಮಕವಾಗಿ ಏನು ಬದಲಾವಣೆ ಆಗಿದೆ ಎನ್ನುವ ಮಾಹಿತಿಗಳನ್ನು ಸಭೆಗೆ ನೀಡಬೇಕು.

ಸರ್ಕಾರದ ಕಾರ್ಯಕ್ರಮಗಳು ಜನರಿಗೆ ತಲುಪಿಸುವಲ್ಲಿ ನಿಮ್ಮಗಳ ಅನುಭವ ಎಷ್ಟು ನೆರವಾಗಿದೆ ಎಂದು ಕೇಳಿ ಮಾಹಿತಿ ಪಡೆದುಕೊಂಡರು. ಕೆಲವು ಕಡೆ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಕೆಲವೇ ಕೆಲವು ಫಲಾನುಭವಿಗಳಿಗೆ ತಲುಪಲು ಆಗಿರುವ ತಾಂತ್ರಿಕ ಸಮಸ್ಯೆ ಬಗೆಹರಿಸಲು ಇನ್ನೂ ಏಕೆ ಆಗಿಲ್ಲ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು, ಕೆಲವರಿಗೆ ಮಾತ್ರ ಗ್ಯಾರಂಟಿ ಅನುಕೂಲ ತಲುಪಿಲ್ಲ. ಈ ಕೆಲವರೇ ಹೆಚ್ಚು ಹೇಳಿಕೊಂಡು ತಿರುಗುತ್ತಿದ್ದಾರೆ. ಗ್ಯಾರಂಟಿ ಯೋಜನೆಯ ಅನುಕೂಲ ಪಡೆಯುತ್ತಿರುವವರು ಮೌನವಾಗಿದ್ದಾರೆ. ಆದ್ದರಿಂದ ತಾಂತ್ರಿಕ ಸಮಸ್ಯೆ ಮೊದಲು ಬಗೆಹರಿಸಿ, ಅನರ್ಹ ಫಲಾನುಭವಿಗಳಿಗೆ ಮಾಹಿತಿ ನೀಡಿ ಅವರ ಅರ್ಜಿ ತಿರಸ್ಕರಿಸಿ ಎನ್ನುವ ಸೂಚನೆ ನೀಡಿದರು.

ಸಾರ್ವಜನಿಕರು ರೆವಿನ್ಯೂ ಇಲಾಖೆ, ತಹಶೀಲ್ದಾರ್, ಎಸಿ ಹಾಗೂ ಜಿಲ್ಲಾಧಿಕಾರಿ ಕಚೇರಿಗಳಿಗೆ ಅಲೆದಾಟ ಕಡಿಮೆ ಆಗಿದೆಯಾ? ತಹಶೀಲ್ದಾರ್, ಎಸಿ ಹಾಗೂ ಜಿಲ್ಲಾಧಿಕಾರಿ ಕಚೇರಿಗಳಲ್ಲಿ ಜನರ ಸಮಸ್ಯೆಗೆ ಪರಿಹಾರ ಸಿಗ್ತಾ ಇದೆಯಾ? ಜನರ ಅರ್ಜಿಗಳು ಎಷ್ಟು ದಿನಗಳಿಂದ ಬಾಕಿ ಇವೆ ಪರಿಶೀಲನೆ ನಡೆಸಿದ್ದೀರಾ? ಎಷ್ಟು ಬಾಕಿ ಅರ್ಜಿ ನಿಮ್ಮಿಂದ ಬಗೆಹರಿದಿದೆ? ಎಷ್ಟು ಆಸ್ಪತ್ರೆಗಳಿಗೆ ದಿಡೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದೀರಿ? ಡಯಾಲಿಸಿಸ್ ಕೇಂದ್ರಗಳಲ್ಲಿ ಸಮರ್ಪಕ ಸೇವೆ ಜನರಿಗೆ ಸಿಗುತ್ತಿದೆಯಾ? ಎಂದು ಪ್ರಶ್ನಿಸಿದರು.

ಜನತಾ ಸ್ಪಂದನದಲ್ಲಿ ಬಂದ ಸಮಸ್ಯೆಗಳಿಗೆ ಸಮರೋಪಾದಿಯಲ್ಲಿ ಪರಿಹಾರ ಒದಗಿಸಿಕೊಡಿ ಎನ್ನುವ ಸೂಚನೆ ನೀಡಲಾಗಿತ್ತು. ಸದ್ಯ ಸಮಾಧಾನಕರವಾಗಿ ಕೆಲಸ ಮಾಡಿದ್ದೀರಿ. ಇದರ ಪ್ರಮಾಣ ಮತ್ತು ವೇಗವನ್ನು ಇನ್ನಷ್ಟು ಹೆಚ್ಚಿಸಿ ಎಂದು ಸೂಚನೆ ನೀಡಿದರು.

ಎಷ್ಟು ಕಚೇರಿಗಳಿಗೆ, ಹಾಸ್ಟೆಲ್‌ಗಳಿಗೆ, ಠಾಣೆಗಳಿಗೆ, ಶಾಲೆಗಳಿಗೆ, ಭೇಟಿ ನೀಡಿದ್ದೀರಿ ಎನ್ನುವ ವಿವರಗಳನ್ನು ಪಡೆದುಕೊಂಡರು. ಕೋಲಾರದ ಹಾಸ್ಟೆಲ್‌ನಲ್ಲಿ ಊಟದಲ್ಲಿ ಆದ ಸಮಸ್ಯೆಗೆ ಯಾರು ಹೊಣೆ? ಸಮಸ್ಯೆ ಯಾಕಾಯ್ತು? ಮೊದಲೇ ಅಧಿಕಾರಿಗಳು ಈ ಬಗ್ಗೆ ನಿಗಾ ಇಡಬೇಕಿತ್ತು. ನಿಗಾ ವಹಿಸದ ಕಾರಣಕ್ಕೆ ಈ ರೀತಿಯ ಘಟನೆಗಳು ಸಂಭವಿಸುತ್ತದೆ. ಇವು ಮರುಕಳಿಸಿದರೆ ಸೂಕ್ತ ಕ್ರಮ ಅನಿವಾರ್ಯವಾಗುತ್ತದೆ ಎಂದರು.

ನೀವು ಉಸ್ತುವಾರಿ ವಹಿಸಿರುವ ಜಿಲ್ಲೆಯಲ್ಲಿನ ಅಧಿಕಾರಿಗಳು- ಫಲಾನುಭವಿಗಳ ಜತೆ ಸಂಪರ್ಕ, ಸಂಬಂಧ ಇನ್ನಷ್ಟು ಹೆಚ್ಚು ಹೆಚ್ಚು ಏರ್ಪಡಬೇಕು. ಜನ ಹೆಚ್ಚು ಹೋಗೋದು ಕೃಷಿ, ಕಂದಾಯ, ಪೊಲೀಸ್ ಇಲಾಖೆ, ಠಾಣೆಗಳಿಗೆ ಬರ್ತಾರೆ. ನೀವು ಎಷ್ಟು ಠಾಣೆಗಳಿಗೆ ಭೇಟಿ ನೀಡಿದ್ದೀರಿ.ನೀವು ಉಸ್ತುವಾರಿ ವಹಿಸಿದ ಮೇಲೆ ಆಡಳಿತಾತ್ಮಕವಾಗಿ ಏನು ಬದಲಾವಣೆ ಆಗಿದೆ? ನಿಮ್ಮಿಂದ ಜಿಲ್ಲಾಡಳಿತಕ್ಕೆ ಏನು ಸಲಹೆ ಸಿಕ್ಕಿದೆ? ನಿಮ್ಮ ಅನುಭವದ ಅನುಕೂಲ ಜಿಲ್ಲೆಗಳಿಗೆ ಎಷ್ಟಾದೆ ಎಂದು ಪ್ರಶ್ನಿಸಿದರು.

ಜಿಲ್ಲಾಧಿಕಾರಿಗಳಿಗೆ ಜಾತ್ಯತೀತತೆ ಬಗ್ಗೆ ಬದ್ಧತೆ ಇರಬೇಕು. ಸಂವಿಧಾನದ ಬಗ್ಗೆ ಗೌರವ ಇರಬೇಕು. ಸಂವಿಧಾನಕ್ಕೆ ವಿರುದ್ಧವಾಗಿ ನಡೆದುಕೊಂಡರೆ ಅಂತಹ ಅಧಿಕಾರಿಗಳಿಗೆ ಇಲ್ಲಿ ಮುಂದುವರೆಯುವ ಹಕ್ಕಿಲ್ಲ. ಅವಕಾಶವೂ ಇಲ್ಲ. ನಿಮ್ಮ ಹಂತದಲ್ಲಿ ಸಮಸ್ಯೆ ಬಗೆಹರಿಯದೆ ಹೋದರೆ, ಮುಖ್ಯ ಕಾರ್ಯದರ್ಶಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಬೇಕು.ಕರ್ತವ್ಯಲೋಪ, ನಿರ್ಲಕ್ಷ್ಯಕ್ಕೆ ಜಿಲ್ಲಾ ಮಟ್ಟದಲ್ಲಿ ನೀವು ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದೇ ಹೋದರೆ ಜಿಲ್ಲಾ ಮಟ್ಟದಲ್ಲಿ ಹೇಗೆ ಶಿಸ್ತು ತರುತ್ತೀರಿ ಎಂದರು.

ಪ್ರತಿ ಜಿಲ್ಲೆಯ ಪ್ರಗತಿ ಪರಿಶೀಲನೆಯನ್ನು ಸವಿವರವಾಗಿ ಮಾಡಬೇಕು. ಅದರಿಂದ ಜಿಲ್ಲೆಯ ಸಮಸ್ಯೆಗಳನ್ನು ಅರಿಯಲು ಸಾಧ್ಯವಾಗುತ್ತದೆ. ಆಯಾ ಜಿಲ್ಲೆಯ ರಸ್ತೆ ಸಾರಿಗೆ ನಿಗಮದ ಜಿಲ್ಲಾಧಿಕಾರಿ ಗಳೊಂದಿಗೆ ಸಭೆ ನಡೆಸಿ, ಬಸ್‌ಗಳ ಕೊರತೆ, ಸ್ಥಗಿತಗೊಳಿಸಿರುವ ಮಾರ್ಗಗಳು, ಬಸ್ ಸೇವೆಯಲ್ಲಿನ ವ್ಯತ್ಯಯ ಮೊದಲಾದ ವಿಷಯಗಳ ಕುರಿತು ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಬೇಕು ಎಂದರು.

ಮಾನವ-ವನ್ಯಪ್ರಾಣಿ ಸಂಘರ್ಷದ ಸಮಸ್ಯೆ ಕುರಿತು ಪ್ರಸ್ತಾಪಿಸಿದ ಮುಖ್ಯಮಂತ್ರಿಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಮ್ಮ ಜಿಲ್ಲೆಯಲ್ಲಿ ವನ್ಯಪ್ರಾಣಿಗಳು ರೈತರ ಜಮೀನಿಗೆ, ತೋಟಕ್ಕೆ ನುಗ್ಗಲು ಆಹಾರ, ನೀರಿನ ಕೊರತೆಯೇ ಕಾರಣ. ಅರಣ್ಯದೊಳಗೆಯೇ ಆಹಾರ, ನೀರಿನ ವ್ಯವಸ್ಥೆ ಕಲ್ಪಿಸುವ ಕುರಿತು ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆಚರ್ಚಿಸಿಕ್ರಮಕೈಗೊಳ್ಳಬೇಕೆಂದು ತಿಳಿಸಿದರು. ಮೇವು ಸಾಲದೆ ಇದ್ದರೆ, ಬೆಳೆಯಬೇಕು. ರೈತರಿಂದ ಕೊಂಡುಕೊಳ್ಳಬೇಕು. ಮೇವಿಗೆ ಯಾವುದೇ ಕೊರತೆಯಾಗದಂತೆ ಎಚ್ಚರ ವಹಿಸಲು ಸೂಚಿಸಿದರು. 20 ಕೋಟಿ ರೂ. ಮೇವು ಮಿನಿಕಿಟ್ ವಿತರಣೆ ಕುರಿತು ಸಂಚಿವ ಸಂಪುಟದ ಮುಂದೆ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು.

# ಪದಗಳ ಜಾದೂಗಾರ ದಾ.ರಾ.ಬೇಂದ್ರೆ

**ವಿಜಯಪುರ:** ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ವರಕವಿ ದಾ. ರಾ. ಬೇಂದ್ರೆ ರವರು ಕನ್ನಡ ಪದಗಳನ್ನು ಬಳಸುತ್ತಿದ್ದ ರೀತಿಯಿಂದ ಅವರನ್ನು ಕನ್ನಡ ಪದಗಳ ಜಾದೂಗಾರ ಎಂದೇ ಗುರುತಿಸಲಾಗುತ್ತಿತ್ತೆಂದು, ಭರತ್ ನಗರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಶಿಕ್ಷಕಿ ಸುಕನ್ಯಾ ತಿಳಿಸಿದರು.

ಬುಧವಾರದಂದು ಅಖಿಲ ಕರ್ನಾಟಕ ಮಿತ್ರ ಸಂಘದ ವತಿಯಿಂದ ಭರತ್ ನಗರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ವರಕವಿ ದಾ. ರಾ. ಬೇಂದ್ರೆ ರವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಮಿತ್ರ ಸಂಘದ ಅಧ್ಯಕ್ಷರಾದ ಚಿ. ಮಾ. ಸುಧಾಕರ್ ಅಧ್ಯಕ್ಷತೆ ವಹಿಸಿ ಉಪನ್ಯಾಸವನ್ನು ನೀಡಿ, ಮಾತನಾಡಿ, ದ. ರಾ. ಬೇಂದ್ರೆಯವರು ಕನ್ನಡ ಸಾಹಿತ್ಯದ ನವೋದಯ ಕಾಲಘಟ್ಟದ ಪ್ರಮುಖ ಕವಿಗಳಲೊಬ್ಬರಾಗಿದ್ದು, ಅವರನ್ನು 'ಕನ್ನಡದ ವರಕವಿ' ಎಂದು ಪರಿಗಣಿಸಲಾಗಿದೆ. ಬೇಂದ್ರೆಯವರು 'ಅಂಬಿಕಾತನಯದತ್ತ' ಎಂಬ ಕಾವ್ಯನಾಮದಿದಂದ ಪ್ರಸಿದ್ಧರಾಗಿದ್ದಾರೆ. ಭಾರತೀಯ ಜ್ಞಾನಪೀಠವು 1973 ರ ಸಾಹಿತ್ಯ ಪ್ರಶಸ್ತಿಯನ್ನು ದ. ರಾ. ಬೇಂದ್ರೆಯವರ 'ನಾಕುತಂತಿ' ಎಂಬ ಕವನ ಸಂಕಲನಕ್ಕೆ ನೀಡಿ ಗೌರವಿಸಿದೆ. ಪ್ರಶಸ್ತಿ ಪುರಸ್ಕೃತ ಕೃತಿ 'ನಾಕುತಂತಿ' ನಲವತ್ತು ನಾಲ್ಕು ಕವನಗಳ ಒಂದು ಪುಟ್ಟ ಸಂಕಲನ ಗ್ರಂಥ. ಇದು ಆತ್ಮ-ಆಧ್ಯಾತ್ಮ, ಲೌಕಿಕ-ಪಾರಮಾರ್ಥ, ವ್ಯಕ್ತಿ-ಶಕ್ತಿ, ಕೃಷಿ-ರಾಜಕೀಯ, ಭಕ್ತಿ-ಬೋಧೆ, ಶ್ರವಣ-ಅಂತಃಕರಣ - ಇತ್ಯಾದಿ ದ್ವಂದ್ವಗಳನ್ನು ಧ್ವನಿಸಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮಿತ್ರ ಸಂಘದ ಗೌರವ ಕಾರ್ಯದರ್ಶಿ ಅರ್. ಮುನಿರಾಜು, ಕಾರ್ಯಾಧ್ಯಕ್ಷರಾದ ವಿ. ವಿಶ್ವನಾಥ್, ಮುಖ್ಯ ಶಿಕ್ಷಕರಾದ ಮುನಿಆಂಜನಪ್ಪ, ಶಿಕ್ಷಕಿಯರಾದ ಗುಲ್ಜಾರ್ ಫಾತೀಮಾ, ಮಾಲತಿ, ಜ್ಯೋತಿಶ್ರೀ ಹಾಗೂ ಶಾಲಾ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



# ಪ್ರಜಾಪ್ರಭುತ್ವವನ್ನು ಪ್ರೀತಿ ತತ್ವದ ಮೇಲೆ ಉಳಿಸಬೇಕಿದೆ



**ಹುಳಿಯಾರು:** ತುಳಿತಕ್ಕೆ ಒಳಗಾದ, ದುಡಿಯುವ ವರ್ಗಗಳನ್ನು ರಕ್ಷಿಸುವಲ್ಲಿ ವಿಫಲವಾದ ಧರ್ಮಗಳು ಹೇಳ ಹೆಸರಿಲ್ಲದಂತಾಗಿವೆ. ಇದಕ್ಕೆ ಪ್ರಪಂಚದಲ್ಲಿ ನಡೆದ, ನಡೆಯುತ್ತಿರುವ ಯುದ್ಧಗಳೇ ಸಾಕ್ಷಿಯಾಗಿವೆ. ಈ ನಿಟ್ಟಿನಲ್ಲಿ ಭಾರತದ ಪ್ರಜಾಪ್ರಭುತ್ವ ಎನ್ನುವ ಮಹಾಧರ್ಮವನ್ನು ಪ್ರೀತಿ ತತ್ವದ ಮೇಲೆ ಉಳಿಸಿ ಬೆಳೆಸು ಚುಳುವಳಿ ಆಗಬೇಕಿದೆ ಎಂದು ಸಾಹಿತಿ ಬಿಳಿಗೆರೆ ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಹುಳಿಯಾರಿನಲ್ಲಿ ಆಯೋಜಿಸಿದ್ದ 11 ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಡಾ.ನಟರಾಜ್ ಹುಳಿಯಾರ ಅವರ ಡೈರೆಕ್ಟ್ ಆಕ್ಷನ್ ನಾಟಕಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜನರ ಮೇಲೆ ಪ್ರೀತಿಯಿಲ್ಲದ, ಬದ್ಧತೆಯಿಲ್ಲದ, ಪ್ರಜಾಪ್ರಭುತ್ವದ ಬೇರುಗಳನ್ನು ಸಡಿಲಮಾಡುತ್ತಿರುವ ರಾಜಕಾರಣಿಗಳಿಗೆ ಪಾಠ ಕಲಿಸಲು ರೈತ, ದಲಿತ, ಮಹಿಳಾ ಹೋರಾಟಗಳಿಂದ ಮಾತ್ರ ಸಾಧ್ಯ. ಹಾಗಾಗಿ ರೈತ ಸಾಲಗಾರನಲ್ಲ ಸರ್ಕಾರವೇ ಬಾಕಿದಾರ ಎಂಬ ಘೋಷಣೆಯನ್ನು ಕೂಗಿ ರೈತರ ಆಲೋಚನೆಯನ್ನು ಬದಲಾಯಿಸಿ ಹೋರಾಟದ ಕಿಚ್ಚು ಹಚ್ಚಿದ ಪ್ರೊ.ನಂಜುಂಡಸ್ವಾಮಿ ಈ ಕಾಲದ ಹೋರಾಟಗಾರರಿಗೆ ಸ್ಪೂರ್ತಿಯಾಗಬೇಕು. ಅವರ ರೈತ ಪರ ಕಾಳಜಿ, ಹೋರಾಟವನ್ನು ಯುವ ಪೀಳಿಗೆಗೆ ಕಟ್ಟಿಕೊಡುವ ಕೆಲಸಗಳು ಆಗಬೇಕು. ಡೈರೆಕ್ಟ್ ಆಕ್ಷನ್ ನಾಟಕ ಇದರಲ್ಲಿ ಸಫಲವಾಗಲಿ ಎಂದು ಆಶಿಸಿದರು.

ಕಲಾಶ್ರೀ ಡಾ.ಲಕ್ಷ್ಮಣದಾಸ್ ಮಾತನಾಡಿ ಹುಳಿಯಾರು ಕಲೆಸಾಹಿತ್ಯದ ತವರೂರು. ಡಾ.ನಾಟರಾಜ್ ಹುಳಿಯಾರು, ಪ್ರೊ. ಎಸ್.ಜಿ.ಸಿದ್ಧರಾಮಯ್ಯ ಈ ಭಾಗದ ಸಾಹಿತಿಗಳು, ಇಲ್ಲಿನ ಮಂಜುಳಾ, ಹೇಮಾ, ಅನಂತವೇಣಿ, ಸುಮಾ ಅವರು ರಾಜ್ಯಾದಾದ್ಯಂತ ಪೌರಾಣಿಕ ನಾಟಕಗಳಲಿ ಅಭಿನಯಿಸುತ್ತಿದ್ದಾರೆ. ಸುಗಮ ಸಂಗೀತಕ್ಷೇತ್ರದಲ್ಲಿ ಖ್ಯಾತರಾಗಿರುವ ಕೆಂಕೆರೆ ಮಲ್ಲಿಕಾರ್ಜುನ್ ಸಹ ಇದೇ ಹೋಬಳಿಯವರು. ನಟರತ್ನಕರ ಮಾಸ್ಟರ್ ಹೀರಣ್ಣಯ್ಯ ಅವರ ಪತ್ನಿಯ ಊರು ಈ ಭಾಗದ ದೊಡ್ಡಬಿದರೆಯವರು. ಹಾಗಾಗಿಯೇ ಇಂದಿನ ತಾಲೂಕು ಸಮ್ಮೇಳನ ಜಿಲ್ಲಾ ಸಮ್ಮೇಳನವನ್ನು ಮೀರಿಸುವಷ್ಟು ಜನಸಾಗರದ ನಡುವೆ ನಡೆಯುತ್ತಿದೆ ಎಂದರು. ತಾಲೂಕು ಕಸಾಪ ಅಧ್ಯಕ್ಷ ಎಂ.ಎಸ್.ರವಿಕುಮಾರ್, ಗಾಯಕ ಕೆಂಕೆರೆ ಮಲ್ಲಿಕಾರ್ಜುನ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಮ್ಮೇಳನದ ಮೆರಗು ಹೆಚ್ಚಿಸಿದ ಸ್ವಸಹಾಯ ಸಂಘದ ಸ್ಟಾಲ್‌ಗಳು

ಹುಳಿಯಾರು: ಹುಳಿಯಾರಿನಲ್ಲಿ 2 ದಿನಗಳ ಕಾಲ ಆಯೋಜಿಸಿದ್ದ 11 ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಅಭೂತಪೂರ್ವ ಯಶಸ್ಸು ಗಳಿಸಿದೆ. ಈ ಯಶಸ್ಸಿಗೆ ಅನೇಕರ ಕೊಡುಗೆಯಿದೆ. ಇದರಲ್ಲಿ ಹುಳಿಯಾರಿನ ಸ್ತ್ರೀಶಕ್ತಿ ಸ್ವಸಹಾಯ ಸಂಘದ ಮಹಿಳೆಯರ ಕೊಡುಗೆಯೂ ಸಹ ಒಂದಾಗಿದೆ. ಹುಳಿಯಾರು ಪಟ್ಟಣ ಪಂಚಾಯ್ತಿ ಡೆನಲ್ಮ್ ಯೋಜನೆಯಲ್ಲಿ ಓಂ ಶಕ್ತಿ ಸ್ವಸಹಾಯ ಸಂಘ, ಶ್ರೀ ದುರ್ಗಾ ಸ್ತ್ರೀ ಶಕ್ತಿ, ಕಾಲ ಭೈರವೇಶ್ವರ, ವೆಂಕಟಾದ್ರಿ, ಕೆಂಚಾಂಬ ಹೀಗೆ ವಿವಿಧ ಸ್ವಸಹಾಯ ಸಂಘದ ಮಹಿಳೆಯರು ಸಿರಿಧಾನ್ಯ, ಸಾವಯವ ಬೆಲ್ಲ, ನಿಪ್ಪಟ್ಟು, ಚಕ್ಕಲಿ, ಹ್ಯಾಂಡ್ ಮೇಡ್ ಸೋಪು, ಗೃಹ ಬಳಕೆ ವಸ್ತುಗಳ ಮಾರಾಟದ ಸ್ಟಾಲ್ ಹಾಕಿ ಸಮ್ಮೇಳನದ ಮೆರಗು ಹೆಚ್ಚಿಸಿದರು. ಶಾಸಕ ಸಿ.ಬಿ.ಸುರೇಶ್‌ಬಾಬು ಈ ಮಳಿಗೆಗಳನ್ನು ಉದ್ಘಾಟಿಸಿದರು. ಸ್ವಉದ್ಯೋಗ ಮಾಡಿ ಬದುಕು ಕಟ್ಟಿಕೊಂಡಿರುವ ಮಹಿಳೆಯರ ಸ್ವಾವಲಂಭಿ ಜೀವನವನ್ನು ಪ್ರಶಂಸಿಸಿದರು. ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್.ಸಿದ್ಧಲಿಂಗಪ್ಪ, ತಾಲೂಕು ಕಸಾಪ ಅಧ್ಯಕ್ಷ ರವಿಕುಮಾರ್, ಹೋಬಳಿ ಕಸಾಪ ಅಧ್ಯಕ್ಷ ನಾರಾಯಣಪ್ಪ, ಬಿಇಒ ಕಾಂತರಾಜು, ಸ್ವಸಹಾಯ ಸಂಘದ ಲಲಿತಾ, ಭಾಗ್ಯಮ್ಮ, ವಾಣಿ, ಮಂಜುಳಾ, ನಾಗರತ್ನ, ಮಮತ, ಪೂರ್ಣಮ್ಮ, ಸರಸ್ವತಿ, ಶೋಭಾ ಸೇರಿದಂತೆ ಅನೇಕರು ಇದ್ದರು.

# ಕಾಲಮಿತಿಯೊಳಗೆ ಸಕಾಲ ಅರ್ಜಿಗಳನ್ನು ವಿಲೇವಾರಿ ಮಾಡಿ

**ರಾಮನಗರ:** ಸಕಾಲ ಯೋಜನೆಯ ಅನುಷ್ಠಾನದಲ್ಲಿ ಜಿಲ್ಲೆ ಉತ್ತಮ ಪ್ರಗತಿ ಸಾಧಿಸಲು ಎಲ್ಲಾ ಅಧಿಕಾರಿಗಳು ನಿಗಧಿಪಡಿಸಿದ ಅವಧಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ವಿಲೇವಾರಿ ಮಾಡುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ ಅವರು ತಿಳಿಸಿದರು. ಅವರು ಡಿ. 31ರ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಕಾಲ ಯೋಜನೆಯಡಿ ಒದಗಿಸಲಾಗುತ್ತಿರುವ ಸೇವೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಕಾಲ ಯೋಜನೆಯಡಿ ಇಲಾಖೆಗಳಿಗೆ ನಿಗದಿಪಡಿಸಿದ ಯೋಜನೆಗಳಲ್ಲಿ ಅರ್ಜಿಗಳನ್ನು ಸ್ವೀಕರಿಸಬೇಕು. ಸ್ವೀಕರಿಸಿದ ಅರ್ಜಿಗಳನ್ನು ತಿರಸ್ಕಾರ ಮಾಡಬಾರದು ಹಾಗೂ ಸ್ವೀಕರಿಸಿದ ಅರ್ಜಿಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡಬೇಕು. ಇದರಿಂದ ಸಕಾಲ ಯೋಜನೆಯಡಿ ಜಿಲ್ಲೆಯು ಉತ್ತಮ ರ್‍ಯಾಂಕಿಂಗ್‌ಗಳಿಸಲು ಸಾಧ್ಯವಾಗುತ್ತದೆ. ಈ ದಿಸೆಯಲ್ಲಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು. ಸಕಾಲ ಯೋಜನೆಯನ್ನು ಪ್ರತಿದಿನ, ಪ್ರತಿ ವಾರ, ಪ್ರತಿ ಮಾಹೆವಾರು ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದ್ದು, ಅಧಿಕಾರಿಗಳು ಈ ಕುರಿತು ಹೆಚ್ಚು ನಿಗಾ ವಹಿಸುವ ಮೂಲಕ ಸಕಾಲ ಯೋಜನೆಯನ್ನು ಯಶಸ್ವಿಗೊಳಿಸುವುದರೊಂದಿಗೆ ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸಬೇಕು ಎಂದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ ಸಿಟ್ಟಿಂಗ್

**ಬೆಂಗಳೂರು:** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ 1993ರ ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮದ ಅಡಿಯಲ್ಲಿ ಸ್ಥಾಪಿತವಾಗಿರುವ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಫೆಬ್ರವರಿ 1 ರಂದು ಚಾಮರಾಜನಗರ ಜಿಲ್ಲೆ ಮತ್ತು ಫೆಬ್ರವರಿ 02 ರಂದು ಕೊಡಗು ಜಿಲ್ಲೆಯಲ್ಲಿ ಸಿಟ್ಟಿಂಗ್ಸ್ ನಡೆಸಲು ಉದ್ದೇಶಿಸಿರುತ್ತದೆ. ಈ ಸಂದರ್ಭದಲ್ಲಿ ಸದರಿ ಜಿಲ್ಲೆಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಆಯಾ ಮೈಸೂರು ಜಿಲ್ಲೆಯಲ್ಲಿ ಇತ್ಯರ್ಥಪಡಿಸಿ, ವಿಲೇ ಮಾಡಲು ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಲಾಗಿದೆ. ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸದರಿ ಜಿಲ್ಲೆಗಳಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆಯಾ ಜಿಲ್ಲೆಗಳಲ್ಲಿಯೇ ಸಾರ್ವಜನಿಕರಿಂದ ದೂರುಗಳು / ಅಹವಾಲುಗಳನ್ನು ಸಹ ಸ್ವೀಕರಿಸಲು ಉದ್ದೇಶಿಸಲಾಗಿದೆ. ಸಾರ್ವಜನಿಕರು ಆಯಾ ಜಿಲ್ಲೆಗಳಲ್ಲಿ ನಿಗದಿತ ದಿನಾಂಕಗಳಂದು ಆಯೋಗದ ಮಾನ್ಯ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಸಂಪರ್ಕಿಸಿ, ದೂರುಗಳನ್ನು ಸಲ್ಲಿಸಬಹುದು ಎಂದು ಆಯೋಗದ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲೆಯನು ಹೊರತರಲು ವೇದಿಕೆಗಳು ಅತ್ಯಗತ್ಯ

**ಪಿರಿಯಾಪಟ್ಟಣ:**ಶಿಕ್ಷಣದಲ್ಲಿ ಕಲೆಯನ್ನು ಉತ್ತೇಜಿಸಿ, ಕಲಾತ್ಮಕತೆಯನ್ನು ಪೋಷಿಸುವ ಮತ್ತು ಪ್ರದರ್ಶಿಸುವ ಮೂಲಕ ಮಕ್ಕಳಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ರಾಷ್ಟ್ರ ಮಟ್ಟದ ಕಲೋತ್ಸವ ಕಾರ್ಯಕ್ರಮ ಸಹಕಾರಿ ಎಂದು ಬೆಟ್ಟದಪುರ ಗ್ರಾಮ ಪಂಚಾಯ್ತಿ ಅಧ್ಯಕ್ಷ ಅಯ್ಯರ್ ಗಿರೀಶ್ ತಿಳಿಸಿದರು. ದೆಹಲಿಯಲ್ಲಿ ನಡೆದ ರಾಷ್ಟ್ರ ಮಟ್ಟದ ಕಲೋ ತ್ಸವ ಕಾರ್ಯಕ್ರಮದಲ್ಲಿ ಭರತ ನಾಟ್ಯ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸರ್ಕಾರಿ ಪ್ರೌಢಶಾಲೆ ಬೆಟ್ಟದಪುರದ ಭಾಸ್ಕರ್ ವಿದ್ಯಾರ್ಥಿಯನ್ನು ಸನ್ಮಾನಿಸಿ ಮಾತನಾಡಿದ ಅವರು ಪ್ರತಿಯೊಬ್ಬರಲ್ಲಿಯೂ ವಿಶೇಷ ಪ್ರತಿಭೆ ಇದ್ದು, ಅಂತಹ ಪ್ರತಿಭೆಯನ್ನು ಯಾವುದೇ ಮುಜುಗರ ಇಲ್ಲದೆ ಸೂಕ್ತ ವೇದಿಕೆಗಳಲ್ಲಿ ಅನಾವರಣಗೊಳಿಸಿಕೊಳ್ಳಬೇಕು, ಸರ್ಕಾರಿ ಶಾಲೆಯಲ್ಲಿ ವಿಶೇಷ ಪ್ರತಿಭಾ ಸಂಪನ್ನ ಮಕ್ಕಳುಗಳಿದ್ದು ಅಂತಹ ಮಕ್ಕಳುಗಳಿಗೆ ಸರ್ಕಾರವು ಹತ್ತು ಹಲವು ಉತ್ತೇಜಕ ಯೋಜನೆಯನ್ನು ಜಾರಿಗೆ ತಂದಿದ್ದು ಅವುಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದರು. ಹಳ್ಳಿಯೇ ಸೌಭಾಗ್ಯದ ಬಳ್ಳಿ ಎನ್ನುವಂತೆ ಗ್ರಾಮೀಣ ವಿದ್ಯಾರ್ಥಿಯು ರಾಷ್ಟ್ರ ಮಟ್ಟದ ಕಲೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ನಮ್ಮ ಊರಿಗೆ ಹೆಮ್ಮೆಯ ಸಂಗತಿ ಎಂದರು. ಪಿ ಡಿ ಓ ಮಂಜುನಾಥ್ ,ಗ್ರಾಮ ಪಂಚಾಯ್ತಿ ಸದಸ್ಯರಾದ ರಾಜಶೇಖರ್ , ರಾಜು, ಗಿರೀಗೌಡ, ರಜನಿಕಾಂತ್, ಶಂಕರ್, ಈಶ್ವರಚಾರ್, ಇಮ್ರಾನ್, ಮಂಜುಳಾ, ಸೌಮ್ಯ, ಶಿಲ್ಪಾ ಗೀತಾ, ಲಕ್ಷ್ಮಿ ಸಿಬ್ಬಂದಿ ಹಾಜರಿದ್ದರು.

# ವಸತಿ ಶಾಲೆಗೆ ಎಸಿ ಭೇಟಿ

**ಪಿರಿಯಾಪಟ್ಟಣ :** ಬೆಟ್ಟದಪುರದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿದ ಉಪ ವಿಭಾಗಾಧಿಕಾರಿ ಮಕ್ಕಳಿಗೆ ಶಿಕ್ಷಣದ ಬಗ್ಗೆ ಅರಿವನ್ನು ಮೂಡಿಸಿ, ಇಂದಿನ ಆಧುನಿಕ ಪ್ರಪಂಚದಲ್ಲಿ ಶಿಕ್ಷಣ ಎಷ್ಟು ಅವಶ್ಯಕತೆ ಇದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಬೆಟ್ಟದಪುರ ಗ್ರಾಮ ಪಂಚಾಯತಿ ಅಧ್ಯಕ್ಷ ಬಿ ಸಿ ಗಿರೀಶ್, ಉಪ ತಹಸಿಲ್ದಾರ್ ಶಶಿಧರ್ ಜಿ, ಸರ್ಕಲ್ ಇನ್ಸ್ಪೆಕ್ಟರ್ ದೀಪಕ್, ಪಿ ಎಸ್ ಐ ಪ್ರಕಾಶ್ ಎಂ ಎತ್ತಿನಮನಿ, ಪಶುಪಾಲನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ, ಸೋಮಯ್ಯ, ವೈದ್ಯಾಧಿಕಾರಿ ಡಾ. ಪೂಜಾ, ಚೆಸ್ಕಾಂ ಎ ಇ ಇ ಪ್ರಶಾಂತ್, ಪಿಡಿಒ ಮಂಜುನಾಥ್, ಆರ್ ಐ ಅಜ್ಮಲ್,ಅರ್ಚಕ ಸತೀಶ್ ಕಶ್ಯಪ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

# ಕೆಯುಡಬ್ಲ್ಯುಜೆ ಪ್ರಶಸ್ತಿ ಪ್ರಕಟ

**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) 2022-23 ನೇ ಸಾಲಿನ ವಾರ್ಷಿಕ ಪ್ರಶಸ್ತಿಗೆ ಕೋಲಾರ ಪತ್ರಿಕೆ ಉಪ ಸಂಪಾದಕ ಹೆಚ್.ಕೆ.ರಾಘವೇಂದ್ರ ಮತ್ತು ದೂರದರ್ಶನ ವರದಿಗಾರ ಸಿ.ಎನ್.ಶಿವಶಂಕರ್ ಭಾಜನರಾಗಿದ್ದಾರೆ. ಮಂಡಿಬೆಲೆ ಶಾಮಣ್ಣ ಸ್ಮಾರಕ ಪ್ರಶಸ್ತಿ (ಗ್ರಾಮೀಣ ಜನ-ಜೀವನದ ಅತ್ಯುತ್ತಮ ವರದಿಗೆ) ಹೆಚ್.ಕೆ.ರಾಘವೇಂದ್ರ ಹಾಗೂ ಪಟೇಲ್ ಭೈರಹನುಮಯ್ಯ ಪ್ರಶಸ್ತಿ (ಅತ್ಯುತ್ತಮ ಮಾನವೀಯ ವರದಿಗೆ) ದೂರದರ್ಶನ ವರದಿಗಾರ ಸಿ.ಎನ್.ಶಿವಶಂಕರ್ ಭಾಜನರಾಗಿದ್ದಾರೆ. ಪುರಸ್ಕೃತರನ್ನು ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಗೋಪಿನಾಥ್, ಪ್ರಧಾನ ಕಾರ್ಯದರ್ಶಿ ಎಸ್.ಕೆ.ಚಂದ್ರಶೇಖರ್, ಖಜಾಂಚಿ ಎ.ಜಿ.ಸುರೇಶ್ ಕುಮಾರ್ ಅಭಿನಂದಿಸಿದ್ದಾರೆ.

# ಸಾಹಿತ್ಯದ ಜೊತೆ ಮನರಂಜನೆಗೂ ಕೊರತೆ ಇಲ್ಲದ ಸಮ್ಮೇಳನ

ಹುಳಿಯಾರು ಕನ್ನಡ ಸಾಹಿತ್ಯ ಸಮ್ಮೇಳನ ಕೇವಲ ಬೌದ್ಧಿಕ ವಿಕಸನಕ್ಕೆ ನೆರವಾಗುವ, ಸಮಾಜವನ್ನು ಚಿಂತನೆಗೆ ಒಳಪಡಿಸುವ, ಅಂಕುಡೊಂಕುಗಳನ್ನು ತಿಳಿಸುವ ವಿಚಾರ ಗೋಷ್ಠಿಗೆ ಮಾತ್ರ ಸೀಮಿತವಾಗಿರಲಿಲ್ಲ. ಸಮ್ಮೇಳನಕ್ಕೆ ಬಂದವರಿಗೆ ಬರಪೂರ ಮನರಂಜನೆಯ ರಸದೌತಣ ಸಹ ಲಭಿಸಿತ್ತು. ಪ್ರತಿ ಗೋಷ್ಠಿಯ ಮಧ್ಯೆ ಮಧ್ಯೆ ಒಂದೊಂದು ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಮಾಡಿಸಿ ಸಮ್ಮೇಳನ ಒಂದೇ ಒಂದು ಕ್ಷಣವೂ ಬೋರಾಗದಂತೆ ಸಂಘಟಕರು ಎಚ್ಚರ ವಹಿಸಿದ್ದರು. ಉದ್ದುದ್ದ ಭಾಷಣ ಇರುವ ಉದ್ಘಾಟನಾ ಸಮಾರಂಭದಲ್ಲಿ



ಹಾಲುಗೋಣದ ಶ್ರೀ ೀ ಸಿದ್ಧರಾಮೇಶ್ವರ ಕಿವುಡ ಮತ್ತು ಮೂಗ ಶಾಲೆಯ ಮಕ್ಕಳ ನೃತ್ಯ ವೇದಿಕೆಯಲ್ಲಿದ್ದ ಶಾಸಕರಾದಿಯಾಗಿ ಎಲ್ಲರ ಮೆಚ್ಚುಗೆ ಗಳಿಸಿತ್ತು. ಕುಶಾಲಪುರ ಸರ್ಕಾರಿ ಶಾಲೆ, ದಬ್ಬಗುಂಟೆ ಸರ್ಕಾರಿ ಶಾಲೆ, ಸಿಂಗಾಪುರ ಸರ್ಕಾರಿ ಶಾಲೆ, ಬೆಳ್ಳಾರ ಸರ್ಕಾರಿ ಶಾಲೆ, ಹೊನ್ನಯ್ಯನಪಾಳ್ಯ ಸರ್ಕಾರಿ ಶಾಲೆ, ಹುಳಿಯಾರು ಸರ್ಕಾರಿ ಶಾಲೆ, ಹುಳಿಯಾರು ಕೇಶವ ಶಾಲೆ, ಧ್ಯಾನ ನಗರಿ ಕನಕಪ್ರಿಯ ನಾಟ್ಯ ಶಾಲೆ, ಕರ್ನಾಟಕ ಪಬ್ಲಿಕ್ ಸ್ಕೂಲ್, ನಂದಿಹಳ್ಳಿ ಸರ್ಕಾರಿ ಶಾಲೆ, ವಾಸವಿ ಪ್ರೌಢಾಶಾಲೆ, ಬಸವೇಶ್ವರ ಪ್ರೌಢಶಾಲೆ ಕನಕದಾಸ ಪ್ರೌಢಶಾಲೆ, ಹಂದಿಗನಡು ಸರ್ಕಾರಿ ಶಾಲೆ, ವಿವೇಕಾನಂದ ಶಾಲೆ ಬಳ್ಳೆಕಟ್ಟೆ ಶಾಲೆ ಹೀಗೆ ಹೋಬಳಿ ವಿವಿಧ ಶಾಲೆಗಳ ಮಕ್ಕಳ ನೃತ್ಯ ಮಾಡಿ ರಂಜಿಸಿದರು. ಇದಲ್ಲದೆ ಹುಳಿಯಾರಿನ ವಿವಿಧ ಭಜನಾ ಮಂಡಳಿಯಿಂದ ಭಜನಾ ಹಾಡುಗಳು, ಬೆಂಗಳೂರಿನ ನಗ್ನ ಥೇಯೆಟರ್ ಅವರ ಡೈರೆಕ್ಟ್ ಆಕ್ಷನ್ ನಾಟಕ, ಶೇಷಾದ್ರಿ ಭಜನಾ ಮಂಡಳಿಯಿಂದ ರೈತ ಮಹಿಳೆಯರ ಬದುಕು ರೂಪಕ, ಪ್ರೇಮಾಗೋಪಾಲ್ ಅವರಿಂದ ಶ್ರೀ ಪದ್ಮಾವತಿ ಶ್ರೀನಿವಾಸ ಕಲ್ಯಾಣೋತ್ಸವ. ಜೊತೆಗೆ ಅನೇಕ ಗಾಯಕರ ಹಾಡುಗಳು, ಏಕಪಾತ್ರಾಭಿನಯ, ಮಿಮಿಕ್ರಿ ಪ್ರದರ್ಶನಗಳು ನಡೆದು ಸಮ್ಮೇಳನ ಮೆಚ್ಚುಗೆಗೆ ಪಾತ್ರವಾಯಿತಲ್ಲದೆ ಜನರನ್ನು ಸಮ್ಮೇಳನದತ್ತ ಸೆಳೆಯಿತು.

# ಸಂಜೆ ಟಿಪ್ಸ್



## ಸೇವರ್ ರೈಡ್ ಪ್ರಾರಂಭ

ನಗರದಲ್ಲಿ ಕೈಗೆಟುಕುವ ಕ್ಯಾಬ್ ಕುರಿತಾಗಿ ಇರುವ ಕಾಳಜಿಗಳನ್ನು ನಿವಾರಿಸುವ ನಿಟ್ಟಿನಲ್ಲಿಭಾರತದ ಮೊದಲ ಆಪ್ ಆಧರಿತ ಡಿಜಿಟಲ್ ಮೀಟರ್ ಟ್ಯಾಕ್ಸಿ ವಯಾಡಾಟ್ಸ್ 'ಸೇವರ್ ರೈಡ್' ವಿಶೇಷತೆಯನ್ನು ಪ್ರಾರಂಭಿಸಿದೆ.ಈ ಆವಿಷ್ಕಾರಕ ಕೊಡುಗೆಯು ರೈಡರ್ ಗಳಿಗೆ ನಗರದಾದ್ಯಂತ ಕಡಿಮೆ ವೆಚ್ಚದಲ್ಲಿ ಸುತ್ತಾಡಲು ಅವಕಾಶ ಕಲ್ಪಿಸುತ್ತದೆ,ಈಗಾಗಲೇ ಸ್ಪರ್ಧಾತ್ಮಕ ಬೇಸ್ ದರದಲ್ಲಿ ಶೇ.15 ಕಡಿತವು ಇತರೆ ರೈಡ್ -ಹೈಲಿಂಗ್ ಪ್ಲಾಟ್ ಫಾರಂಗಳನ್ನು ಮೀರಿ ಕೈಗೆಟುಕುವಮತ್ತು ಪಾರದರ್ಶಕ ಪರಿಹಾರ ಒದಗಿಸುತ್ತದೆ. ಪರಿಣಾಮಕಾರಿ ಬೆಲೆಯ ಕಾರ್ಯತಂತ್ರ ಹೊಂದಿರುವ ಈ ಬೆಂಗಳೂರು ಮೂಲದ ಪ್ಲಾಟ್ ಫಾರಂ ಪ್ರಾರಂಭಿಕ 4 ಕಿಲೋಮೀಟರ್ಗಳಿಗೆ 100ರೂ. ಬೆಲೆ ಹೊಂದಿದ್ದು ನಂತರ ಪ್ರತಿ ಕಿಲೋಮೀಟರ್ 20 ರೂ. ಬೆಲೆ ಹೊಂದಿದೆ. ಈ ಸಂಚಲನಾತ್ಮಕ ಬೆಲೆಯ ಮಾದರಿಯು ಭಾರತದ ತಂತ್ರಜ್ಞಾನ ನಗರದಲ್ಲಿ ರೈಡ್-ಹೈಲಿಂಗ್ ಸೇವೆಗಳಲ್ಲಿ ವೆಚ್ಚದ ಕಾಳಜಿಗಳನ್ನು ನಿವಾರಿಸುವ ಗುರಿ ಹೊಂದಿದ್ದು ವಯಾಡಾಟ್ಸ್ ಅನ್ನು ಪ್ರಯಾಣಿಕರಿಗೆ ಆಕರ್ಷಕ ಮತ್ತು ವೆಚ್ಚ ಉಳಿಸುವ ಆಯ್ಕೆಯಾಗಿಸಿದೆ. ಈ ಆಪ್ ಆಧರಿತ ರೈಡ್-ಹೈಲಿಂಗ್ ಸ್ಟಾರ್ಟಪ್ ಇಡೀ ದಿನ ಒಂದೇ ದರ ಕಾಪಾಡಿಕೊಳ್ಳುತ್ತದೆ. ಇತರೆ ಹಲವಾರು ಕ್ಯಾಬ್ ಅಗ್ರಿಗೇಟರ್ ಗಳಂತೆ ಅಲ್ಲದೆ ವಯಾಡಾಟ್ಸ್ ಪೀಕ್ ಹವರ್ ಹೆಚ್ಚಿನ ದರ ವಿಧಿಸದೆ ರೈಡರ್‌ಗಳಿಗೆ ಸಮಯ ಅಥವಾ ಬೇಡಿಕೆಯ ಹೊರತಾಗಿಯೂ ಸ್ಥಿರವಾದ ಮತ್ತು ಪಾರದರ್ಶಕ ಬಾಡಿಗೆ ವ್ಯವಸ್ಥೆ ನೀಡುತ್ತದೆ.ವಯಾಡಾಟ್ಸ್ ಸಿಇಒ ವೈಶಾಕ್ ಸಿಂಹ, ''ಬೆಂಗಳೂರಿನಲ್ಲಿ ನಮ್ಮ ಬಳಕೆದಾರರಿಗೆ 'ಸೇವರ್ ರೈಡ್'ಗಳನ್ನು ಪರಿಚಯಿಸಲು ಬಹಳ ರೋಮಾಂಚಿತರಾಗಿದ್ದೇವೆ'' ಎಂದರು. ''ವಯಾಡಾಟ್ಸ್ ನಲ್ಲಿ ನಮ್ಮ ಗುರಿ ಕೈಗೆಟುಕುವ, ಲಭ್ಯ ಮತ್ತು ವಿಶ್ವಾಸಾರ್ಹ ಆಯ್ಕೆಯನ್ನು ಪ್ರಯಾಣಿಕರಿಗೆ ಒದಗಿಸುವ ಮೂಲಕ ಸಾರಿಗೆ ವಲಯವನ್ನು ಮರು ವ್ಯಾಖ್ಯಾನಿಸುವುದು ನಮ್ಮ ಗುರಿಯಾಗಿದೆ. ರೈಡರ್ ಮತ್ತು ಚಾಲಕ ಸಮುದಾಯಕ್ಕೆ ದಿನಪೂರ್ತಿ ಅನುಕೂಲಕರ ಮತ್ತು ಕೈಗೆಟುಕುವಮೊಬಿಲಿಟಿ ಪಡೆಯುವ ಸ್ವಾತಂತರ್ಯ ನೀಡುವಲ್ಲಿ ನಮ್ಮ ಬದ್ಧತೆ ಪ್ರತಿಫಲಿಸುತ್ತದೆ ಎಂದರು.

## ರಾಗಿ ಪೂರಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ರಾಗಿಹಿಟ್ಟು - 1ಕಪ್, ಗೋಧಿಹಿಟ್ಟು - 3 ಚಮಚ, ಎಳ್ಳು - 1 ಚಮಚ, ಆಲೂಗೆಡ್ಡೆ - 1, ಮೆಣಸಿನ ಪುಡಿ - ಅರ್ಧ ಚಮಚ, ಎಣ್ಣೆ - ಕರಿಯಲು, ಇಂಗು - ಚಿಟಿಕೆ, ಉಪ್ಪು - ರುಚಿಗೆ, ನೀರು - ಸ್ವಲ್ಪ

### ಮಾಡುವ ವಿಧಾನ

ತಯಾರಿಸುವ ವಿಧಾನ: ಮೊದಲು ಆಲೂಗೆಡ್ಡೆಯನ್ನು ಬೇಯಿಸಿ, ಸ್ಮ್ಯಾಶ್ ಮಾಡಿ. ಅದನ್ನು ಒಂದು ಪಾತ್ರೆಗೆ ಹಾಕಿ, ಅದಕ್ಕೆ ರಾಗಿಹಿಟ್ಟು ಹಾಗೂ ಗೋಧಿಹಿಟ್ಟು ಸೇರಿಸಿ. ಅದಕ್ಕೆ ಖಾರದಪುಡಿ, ಉಪ್ಪು, ಚಿಟಿಕೆ ಇಂಗು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಅದಕ್ಕೆ ಉಗುರು ಬೆಚ್ಚನೆಯ ನೀರು ಹಾಕಿ, ಪೂರಿ ಹಿಟ್ಟಿನಂತೆ ಮಿಶ್ರಣ ಮಾಡಿಕೊಳ್ಳಿ. ನಂತರ ಈ ಹಿಟ್ಟಿನಿಂದ ಉಂಡೆ ತಯಾರಿಸಿ, ಪೂರಿ ಆಕಾರದಲ್ಲಿ ಲಟ್ಟಿಸಿ. ಈ ದಪ್ಪ ತಳದ ಪಾತ್ರೆಯಲ್ಲಿ ಎಣ್ಣೆ ಬಿಸಿ ಮಾಡಿ, ಅದಕ್ಕೆ ಲಟ್ಟಿಸಿಕೊಂಡ ಪೂರಿ ಸೇರಿಸಿ, ಕರಿಯಿರಿ. ಎರಡೂ ಕಡೆ ಚೆನ್ನಾಗಿ ಬೇಯಿಸುವುದು ಮುಖ್ಯವಾಗುತ್ತದೆ. ಎಣ್ಣೆ ಅಂಶ ಹೀರಿಕೊಳ್ಳಲು ಪೂರಿಗಳನ್ನು ಟಿಶ್ಯೂ ಮೇಲಿರಿಸಿ.

ಈ ಪೂರಿಯನ್ನು ಆಲೂಗೆಡ್ಡೆ, ತರಕಾರಿ ಸಾಗು ಜೊತೆ ತಿನ್ನಲು ಚೆನ್ನಾಗಿರುತ್ತದೆ. ಚಿಕನ್ ಕರಿ ಹಾಗೂ ಎಗ್ ಬುರ್ಜಿ ಕೂಡ ಇದಕ್ಕೆ ಹೊಂದಿಕೆಯಾಗುತ್ತದೆ.

# ಒಂದೇ ಚಿತ್ರದಲ್ಲಿ ನಟಿಸಲಿದ್ದಾರಂತೆ ಯಶ್, ಶಾರೂಖ್





ಕಿಂಗ್ ಖಾನ್ ಶಾರುಖ್ , ಕನ್ನಡದ ರಾಕಿಂಗ್ ಸ್ಟಾರ್ ಯಶ್ ಇಬ್ಬರಿಗೂ ಪ್ರತ್ಯೇಕವಾಗಿ ದೊಡ್ಡಮಟ್ಟದ ಫ್ಯಾನ್ ಫಾಲೋಯಿಂಗ್ ಇದೆ. ಇಬ್ಬರೂ ಅವರವರ ಸಿನಿವಲಯದಲ್ಲಿ ಮಾತ್ರ ಮಿಂಚದೆ, ಇತ್ತೀಚಿಗಿನ ವರ್ಷಗಳಲ್ಲಿ ಪ್ಯಾನ್ ಇಂಡಿಯಾದಲ್ಲಿ ಮಿಂಚಿದ್ದಾರೆ. ರಾಕಿಭಾಯ್ ಯಶ್ ಬಿಟೌನ್ ಕಾಲಿಡಲಿದ್ದಾರೆ ಎನ್ನುವ ವಿಚಾರ ಹೊಸತಲ್ಲ. ನಿತೀಶ್ ತಿವಾರಿ ಅವರ ರಾಮಾಯಣ ಸಿನಿಮಾದಲ್ಲಿ ಅವರು ರಾವಣನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಈ ನಡುವೆ ಅವರು ಶಾರುಖ್ ಖಾನ್ ಅವರೊಂದಿಗೆ ನಟಿಸಲಿದ್ದಾರೆ ಎನ್ನುವ ಸುದ್ದಿಯೊಂದು ಹಬ್ಬಿದೆ. ಕಿಂಗ್ ಶಾರುಖ್ ಖಾನ್ ಅವರೊಂದಿಗೆ ಕೆಲಸ ಮಾಡಲು ಯಶ್ ತಮ್ಮ ಆಸಕ್ತಿಯ ಬಗ್ಗೆ ಮಾತನಾಡಿದ್ದಾರೆ. ಸ್ಕ್ರಿಪ್ಟ್ ಪರಿಪೂರ್ಣವಾಗಿರಬೇಕು ಎನ್ನುವ ಷರತ್ತನ್ನು ಹಾಕಿದ್ದಾರೆ ಎಂದು ಮೂಲವೊಂದು ತಿಳಿಸಿರುವುದಾಗಿ ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ. ಯಶ್ ಹಾಗೂ ಶಾರುಖ್ ಖಾನ್ ಜೊತೆಯಾಗಿ ನಟಿಸಲು ಒಪ್ಪಿದ್ದಾರೆ. ಆದರೆ ತಮ್ಮಅಪಾರ ಅಭಿಮಾನಿಗಳ ನಿರೀಕ್ಷೆಗೆ ತಕ್ಕಂತೆ ಸಿನಿಮಾವಿರಬೇಕು. ಹಾಗಾಗಿ ಇಬ್ಬರು ಈ ಬಗ್ಗೆ ಆತುರದ ನಿರ್ಧಾರವನ್ನು ಕೈಗೊಳ್ಳದೆ ನಿಧಾನವಾಗಿ ಯೋಚಿಸಲಿದ್ದಾರೆ. ಇದು ಉತ್ಸಾಹದಿಂದ ಮಾಡಲಾದ ಯೋಜನೆಗಿಂತ ಉತ್ತಮವಾಗಿ ರೂಪಿಸಲ್ಪಟ್ಟ ಯೋಜನೆಯಾಗಬೇಕೆಂದು ಇಬ್ಬರು ಬಯಸುತ್ತಾರೆ ಎಂದು ಮೂಲವೊಂದು ಹೇಳಿರುವುದಾಗಿ ವರದಿ ತಿಳಿಸಿದೆ. ಯಶ್ ಆಯಕ್ಷನ್ ಚಿತ್ರಕ್ಕಾಗಿ ರೆಡ್ ಚಿಲ್ಲೀಸ್ ಎಂಟರ್ಟೈನ್ಮೆಂಟ್ನೊಂದಿಗೆ ಮಾತುಕತೆ ನಡೆಸುತ್ತಿದ್ದಾರೆ ಎಂಬ ವರದಿಗಳೂ ಇವೆ. ಯಶ್ ಆರಂಭಿಕವಾಗಿ ಸ್ಕ್ರಿಪ್ಟ್ ನ್ನು ಇಷ್ಟಪಟ್ಟಿದ್ದಾರೆ ಎನ್ನಲಾಗಿದೆ. ಮುಂದಿನ ದಿನಗಳಲ್ಲಿ ಇದರ ಬಗ್ಗೆ ಸ್ಪಷ್ಟನೆ ಸಿಗಲಿದೆ.

# ಕಲ್ಲಂಗಡಿ ಪ್ರಯೋಜನ

### ಹೆಲ್ತ್ ಟಿಪ್ಸ್



ಗರ್ಭಿಣಿಯರು ಸಾಕಷ್ಟು ಹಣ್ಣುಗಳನ್ನು ತಿಂದರೆ ಆರೋಗ್ಯಕ್ಕೆ ಒಳ್ಳೆಯದು ಎಂದು ತಿನ್ನುತ್ತಾರೆ. ಯಾವ ಹಣ್ಣುಗಳನ್ನು ಎಷ್ಟು ಪ್ರಮಾಣದಲ್ಲಿ ತಿಂದರೆ ಒಳ್ಳೆಯದು ಎಂಬುದರ ಬಗ್ಗೆ ಸರಿಯಾದ ಮಾಹಿತಿ ತಿಳಿದರೆ ಒಳ್ಳೆಯದು. ಕಲ್ಲಂಗಡಿ ಹಣ್ಣನ್ನು ಗರ್ಣಿಣಿಯರು ತಿನ್ನಬಹುದೇ ಎಂಬುದಕ್ಕೆ ಇಲ್ಲಿದೆ ನೋಡಿ ಒಂದಷ್ಟು ಮಾಹಿತಿ.

ಕಲ್ಲಂಗಡಿ ಹಣ್ಣಿನಲ್ಲಿ ಶೇಕಡಾ 92% ರಷ್ಟು ನೀರಿನಾಂಶವಿದೆ. ಇದು ದೇಹವನ್ನು ಹೈಡ್ರೇಟೆಡ್ ಆಗಿ ಇಡುವುದಕ್ಕೆ ಸಹಾಯ ಮಾಡುತ್ತದೆ. ಹಾಗೇ ನಾರಿನಾಂಶ, ವಿಟಮಿನ್ಸ್, ಮಿನರಲ್ಸ್ ಜಾಸ್ತಿ ಇದೆ ಇದರಲ್ಲಿ. ಇದನ್ನು ಸೇವಿಸುವುದರಿಂದ ಹೃದಯ ಸಂಬಂಧಿ ಸಮಸ್ಯೆಗಳು ದೂರವಾಗುತ್ತದೆ.

ಗರ್ಭಿಣಿಯರು ಇದನ್ನು ಸೇವಿಸುವುದರಿಂದ ಹುಟ್ಟಲಿರುವ ಮಗುವಿನ ಆರೋಗ್ಯಕ್ಕೂ ಕೂಡ ಇದು ತುಂಬಾ ಒಳ್ಳೆಯದು. ತೂಕ ಇಳಿಕೆಗೆ ಕೂಡ ಈ ಹಣ್ಣು ಸಹಾಯಕಾರಿಯಾಗಿದೆ. ಹಾಗೇ ಇದನ್ನು ತಿನ್ನುವುದರಿಂದ ಕಾಲು ಊದಿಕೊಳ್ಳುವಿಕೆ ಕೂಡ ಕಡಿಮೆಯಾಗುತ್ತದೆ.

ಇನ್ನು ಗರ್ಭಿಣಿಯರಿಗೆ ಜೀರ್ಣಕ್ರಿಯೆಯ ಸಮಸ್ಯೆ ಇರುತ್ತದೆ. ಇನ್ನು ಕೆಲವರಿಗೆ ಅಸಿಡಿಟಿ ಸಮಸ್ಯೆ ಇರುತ್ತದೆ. ಕಲ್ಲಂಗಡಿ ಹಣ್ಣಿನ ಸೇವನೆಯಿಂದ ಇದು ಕಡಿಮೆಯಾಗುತ್ತದೆ.

ಇದರಲ್ಲಿ ಕ್ಯಾಲ್ಸಿಯಂ, ಪೋಟ್ಯಾಷಿಯಂ ಹೇರಳವಾಗಿದೆ. ಹುಟ್ಟಲಿರುವ ಮಗುವಿನ ದೇಹದ ಬೆಳವಣಿಗೆಗೆ ಇದು ಸಹಾಯಕಾರಿಯಾಗಿದೆ.

# ಮೆಂತ್ಯೆಯಲ್ಲಿದೆ ಸೌಂದರ್ಯ

### ಬ್ಯೂಟಿ ಟಿಪ್ಸ್



ಮೆಂತ್ಯೆ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಮೆಂತ್ಯೆ ಕಷಾಯ ಕುಡಿಯುವುದರಿಂದ ಬೆನ್ನು ನೋವಿನ ಸಮಸ್ಯೆ ಕೂಡ ನಿವಾರಣೆಯಾಗುತ್ತದೆ. ಇದೇ ಮೆಂತೆ ಮುಖದ ಹಾಗೂ ಕೂದಲಿನ ಸೌಂದರ್ಯಕ್ಕೂ ಸಹಕಾರಿಯಾಗಿದೆ. ಹೇಗೆ ಮೆಂತ್ಯೆಯಿಂದ ದೇಹದ ಸೌಂದರ್ಯವನ್ನು ಹೆಚ್ಚಿಸಿಕೊಳ್ಳಬಹುದು ಎಂಬುದಕ್ಕೆ ಇಲ್ಲಿದೆ ನೋಡಿ ಒಂದಷ್ಟು ಮಾಹಿತಿ.

ಮೆಂತ್ಯೆಯಲ್ಲಿ ವಿಟಮಿನ್ ಸಿ ಅಂಶ ಇರುತ್ತದೆ. ಇದು ಮುಖದ ಕಾಂತಿಯನ್ನು ಹೆಚ್ಚಿಸುತ್ತದೆ. ನೆನೆಸಿದ ಮೆಂತ್ಯೆದಿಂದ ಪೇಸ್ಟ್ ತಯಾರಿಸಿಕೊಳ್ಳಿ. ಇದನ್ನು ಮುಖಕ್ಕೆ ಹಚ್ಚಿ 15 ನಿಮಿಷಗಳ ನಂತರ ಮುಖ ತೊಳೆಯಿರಿ. ಕಲೆ ನಿವಾರಣೆಯಾಗುತ್ತದೆ. ಇನ್ನು ಒಂದು ಟೇಬಲ್ ಸ್ಪೂನ್ ಮೆಂತ್ಯೆ ಪುಡಿಗೆ ಸ್ವಲ್ಪ ಹಾಲು ಮಿಕ್ಸ್ ಮಾಡಿಕೊಂಡು ಪೇಸ್ಟ್ ಮಾಡಿಕೊಳ್ಳಿ ಇದನ್ನು ಫೇಶಿಯಲ್ ಮಾಸ್ಕ್ ರೀತಿ ಬಳಸುವುದರಿಂದ ಮುಖ ನೈಸರ್ಗಿಕವಾಗಿ ಕಂಗೊಳಿಸುತ್ತದೆ.

ಇನ್ನು ಮುಖವನ್ನು ಕ್ಲೆನ್ಸಿಂಗ್ ಮಾಡುವುದಕ್ಕೆ ಕೂಡ ಈ ಮೆಂತ್ಯೆಯನ್ನು ಬಳಸಬಹುದು. 3 ಚಮಚ ಮೆಂತ್ಯೆಯನ್ನು ರಾತ್ರಿಯಿಡೀ ನೆನೆಸಿಡಿ. ಬೆಳಿಗ್ಗೆ ರುಬ್ಬಿಕೊಂಡು ಸ್ಕಬ್ ರೀತಿ ಇದನ್ನು ಬಳಸಿಕೊಳ್ಳಿ. ಮುಖದ ಮೇಲೆ 5 ನಿಮಿಷಗಳ ಕಾಲ ಇದನ್ನು ನಿಧಾನಕ್ಕೆ ಮಸಾಜ್ ಮಾಡಿ. ಡೆಡ್ ಸ್ಕಿನ್ ನಿವಾರಣೆಯಾಗುತ್ತದೆ. 1 ಚಮಚ ಮೆಂತ್ಯೆ ಪುಡಿಗೆ ½ ಚಮಚ ಜೇನುತುಪ್ಪ ಹಾಗೂ ½ ಚಮಚ ಹಾಲನ್ನು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಇದನ್ನು ಮುಖಕ್ಕೆ ಹಚ್ಚಿಕೊಂಡು ನಿಧಾನಕ್ಕೆ ಮಸಾಜ್ ಮಾಡಿ. ಇದರಿಂದ ಮುಖದ ಕಾಂತಿ ಹೆಚ್ಚುತ್ತದೆ.

# ವಿಶ್ವ ಹಿಜಾಬ್ ದಿನ



ವಿಶ್ವ ಹಿಜಾಬ್ ದಿನವು 2013 ರಲ್ಲಿ ನಜ್ಮಾ ಖಾನ್ ಸ್ಥಾಪಿಸಿದ ವಾರ್ಷಿಕ ಕಾರ್ಯಕ್ರಮವಾಗಿದೆ, 1 ಪ್ರತಿ ವರ್ಷ ಫೆಬ್ರವರಿ 1 ರಂದು ವಿಶ್ವದಾದ್ಯಂತ 140 ದೇಶಗಳಲ್ಲಿ ನಡೆಯುತ್ತದೆ. 2 ಎಲ್ಲಾ ಧರ್ಮಗಳು ಮತ್ತು ಹಿನ್ನೆಲೆಯ ಮಹಿಳೆಯರನ್ನು ಒಂದು ದಿನದ ಹಿಜಾಬ್ ಧರಿಸಲು ಮತ್ತು ಅನುಭವಿಸಲು ಪ್ರೋತ್ಸಾಹಿಸುವುದು ಮತ್ತು ಹಿಜಾಬ್ ಅನ್ನು ಏಕೆ ಧರಿಸಲಾಗುತ್ತದೆ ಎಂಬುದರ ಕುರಿತು ಅರಿವು ಮೂಡಿಸುವುದು ಮತ್ತು ಹರಡುವುದು ಇದರ ಉದ್ದೇಶವಾಗಿದೆ . 3 ಹಿಜಾಬ್ ಧರಿಸುವುದನ್ನು ಸಾಮಾನ್ಯಗೊಳಿಸುವುದು ತನ್ನ ಗುರಿಯಾಗಿದೆ ಎಂದು ನಜ್ಮಾ ಖಾನ್ ಹೇಳಿದರು.

ಬಾಂಗ್ಲಾದೇಶಿ-ಅಮೆರಿಕನ್ ನಜ್ಮಾ ಖಾನ್ ಅವರು 2013 ರಲ್ಲಿ ವಿಶ್ವ ಹಿಜಾಬ್ ದಿನವನ್ನು (ಫಾಊಅ) ಪ್ರಾರಂಭಿಸಿದರು. ಅವರು ಅರಿವು ಮೂಡಿಸುವುದು ಮತ್ತು ಹಿಜಾಬ್ ಧರಿಸುವುದನ್ನು ಸಾಮಾನ್ಯಗೊಳಿಸುವುದು ಎಂದು ಹೇಳಿದರು. ಶಾಲೆ ಮತ್ತು ವಿಶ್ವವಿದ್ಯಾನಿಲಯದಲ್ಲಿ ತಾರತಮ್ಯ ಮತ್ತು ಬೆದರಿಸುವ ಅನುಭವಗಳನ್ನು ಉಗುಳುವುದು, ಬೆನ್ನಟ್ಟುವುದು, ಒದೆಯುವುದು ಮತ್ತು ಭಯೋತ್ಪಾದಕ ಎಂದು ಕರೆಯುವ ಮೂಲಕ ಧಾರ್ಮಿಕ ಸಹಿಷ್ಣುತೆಯನ್ನು ಬೆಳೆಸುವ ನಿರೀಕ್ಷೆಯಲ್ಲಿ ಅವರು ದಿನವನ್ನು ಪ್ರಾರಂಭಿಸಿದರು ಎಂದು ಖಾನ್ ಹೇಳಿದರು.

2017 ರಲ್ಲಿ ನ್ಯೂಯಾರ್ಕ್ ರಾಜ್ಯವು ವಿಶ್ವ ಹಿಜಾಬ್ ದಿನವನ್ನು ಗುರುತಿಸಿತು ಮತ್ತು ದಿನವನ್ನು ಗುರುತಿಸುವ ಕಾರ್ಯಕ್ರಮವನ್ನು ಹೌಸ್ ಆಫ್ ಕಾಮನ್ಸ್ನಲ್ಲಿ ಆಯೋಜಿಸಲಾಯಿತು, ಇದರಲ್ಲಿ ಥೆರೆಸಾ ಮೇ (ಮಾಜಿ ಯುಕೆ ಪ್ರಧಾನ ಮಂತ್ರಿ) ಭಾಗವಹಿಸಿದ್ದರು . 5 2021 ರಲ್ಲಿ ಮುಸ್ಲಿಂ ಸಂಪ್ರದಾಯದ ತಿಳುವಳಿಕೆಯನ್ನು ಉತ್ತೇಜಿಸಲು ಫಿಲಿಪೈನ್ಸ್ನ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್ ಫೆಬ್ರವರಿ 1 ಅನ್ನು ವಾರ್ಷಿಕ ರಾಷ್ಟ್ರೀಯ ಹಿಜಾಬ್ ದಿನ ಎಂದು ಅನುಮೋದಿಸಿತು.

ಫೆಬ್ರವರಿ 2013 ರಲ್ಲಿ, ಮಾಜಿ ಮುಸ್ಲಿಂ ಮತ್ತು ಪ್ರಚಾರಕರಾದ ಮರ್ಯಮ್ ನಮಾಝೀ ಅವರು ಬ್ಲಾಗ್ ಪೋಸ್ಟ್ನಲ್ಲಿ ವಿಶ್ವ ಹಿಜಾಬ್ ದಿನವನ್ನು ಟೀಕಿಸಿದರು, ಅದು ವಿಶ್ವ ಹಿಜಾಬ್ ದಿನವನ್ನು ವಿಶ್ವ ಸ್ತ್ರೀ ಜನನಾಂಗ ಊನಗೊಳಿಸುವ ದಿನ ಅಥವಾ ವಿಶ್ವ ಬಾಲ್ಯ ವಿವಾಹ ದಿನದೊಂದಿಗೆ ಹೋಲಿಸಿದೆ. 8 ಆಸ್ರಾ ನೊಮಾನಿ ಅವರು ದಿ ವಾಷಿಂಗ್ಟನ್ ಪೋಸ್ಟ್ನಲ್ಲಿ ಅಭಿಪ್ರಾಯದ ತುಣುಕು ಬರೆದರು , ವಿಶ್ವ ಹಿಜಾಬ್ ದಿನದ ಘಟನೆಯು ಯಾವಾಗಲೂ ತಲೆಯ ಹೊದಿಕೆಯನ್ನು ಸ್ವಯಂಪ್ರೇರಣೆಯಿಂದ ಧರಿಸಲಾಗುತ್ತದೆ ಮತ್ತು ಹಿಜಾಬ್ ಎಂದರೆ ತಲೆ ಸ್ಕಾರ್ಫ್ ಎಂದು ತಪ್ಪಿಸುವ ವ್ಯಾಖ್ಯಾನ ಹರಡುತ್ತದೆ. 2017 ರಲ್ಲಿ ಪ್ರಕಟವಾದ ಅವರ ಸ್ವಂತ ಅಭಿಪ್ರಾಯದ ತುಣುಕಿನಲ್ಲಿ, ಮಾಜಿದ್ ನವಾಜ್ ಅವರು ಹಿಂದಿನ ನೋಮಾನಿ ಮತ್ತು ಅರಾಫಾ ಲೇಖನವನ್ನು ಉಲ್ಲೇಖಿಸಿದ್ದಾರೆ ಮತ್ತು ಈವೆಂಟ್ ಅನ್ನು ಪಾಸ್ಸೆಗಿಂತ ಕೆಟ್ಟದಾಗಿದೆ ಎಂದು ವಿವರಿಸುತ್ತಾರೆ, ಹೆಸರನ್ನು ಹಿಜಾಬ್ ಈಸ್ ಎ ಚಾಯ್ಸ್ ಡೇ ಎಂದು ಬದಲಾಯಿಸುವಂತೆ ಸೂಚಿಸುತ್ತಾರೆ.



## ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಮಕ್ಕಳಿಂದ ಅನುಕೂಲ, ಆರೋಗ್ಯದಲ್ಲಿ ಏರುಪೇರು, ಕಾನೂನುಬಾಹಿರ ಚಟುವಟಿಕೆಗಳು, ದೇವತಾ ಕಾರ್ಯಗಳಲ್ಲಿ ಅಡೆತಡೆ.

**ವೃಷಭ:** ಸಂಗಾತಿಯಿಂದ ನೋವು ಮತ್ತು ನಿರಾಸೆ, ಆಕಸ್ಮಿಕ ಘಟನೆ ಮರುಕಳಿಸುವುದು, ಅಧಿಕ ನಷ್ಟ, ಯಂತ್ರೋಪಕರಣಗಳಿಂದ ಪೆಟ್ಟು.

**ಮಿಥುನ:** ಆರೋಗ್ಯದಲ್ಲಿ ವ್ಯತ್ಯಾಸ, ಸ್ನೇಹಿತರಿಂದ ಸಂಕಷ್ಟ, ಪಾಲುದಾರಿಕೆಯಲ್ಲಿ ನಷ್ಟ, ಸಂಗಾತಿಯಿಂದ ನೋವು.

**ಕಟಕ:** ಆರ್ಥಿಕ ನಷ್ಟ, ಸ್ವಯಂಕೃತಾಪರಾಧದಿಂದ ನೋವು, ಅವಕಾಶಗಳು ಕೈ ತಪ್ಪುವುದು, ಅಧಿಕಾರಿಗಳಿಂದ ಸಮಸ್ಯೆ.

**ಸಿಂಹ:** ಉದ್ಯೋಗ ವ್ಯವಹಾರದಲ್ಲಿ ಜಯ, ಅನಿರೀಕ್ಷಿತ ಪ್ರಯಾಣ, ಸ್ಪರ್ಧಾತ್ಮಕ ಚಟುವಟಿಕೆಗಳಲ್ಲಿ ಯಶಸ್ಸು, ಭೂ ವ್ಯವಹಾರಗಳಿಂದ ಧನಾಗಮನ.

**ಕನ್ಯಾ:** ಆಕಸ್ಮಿಕ ಅಪಘಾತ ಎಚ್ಚರಿಕೆ, ಬಂಧು ಬಾಂಧವರಿಂದ ನಷ್ಟ, ಪಿತ್ರಾರ್ಜಿತ ಆಸ್ತಿಯಿಂದ ಸಮಸ್ಯೆ, ಕೋರ್ಟ್ ಮೆಟ್ಟಿಲೇರುವ ಸಂದರ್ಭ.

**ತುಲಾ:** ಸಂಗಾತಿಯಿಂದ ನೋವು, ಪಾಲುದಾರಿಕೆಯಲ್ಲಿ ಲಾಭ, ಕೆಲಸ ಕಾರ್ಯನಿಮಿತ್ತ ಪ್ರಯಾಣ.

**ವೃಶ್ಚಿಕ:** ಉದ್ಯೋಗದಿಂದ ಧನಾಗಮನ, ಅಧಿಕಾರಿಗಳಿಂದ ಪ್ರಶಂಸೆ, ಗೌರವಕ್ಕೆ ಧಕ್ಕೆ, ವ್ಯವಹಾರದಲ್ಲಿ ಸಮಸ್ಯೆ.

**ಧನಸ್ಸು:** ಪ್ರೀತಿ ಪ್ರೇಮ ವಿಷಯದಲ್ಲಿ ಜಯ, ಮಕ್ಕಳಿಂದ ಅನುಕೂಲ, ಗರ್ಭಿಣಿಯರು ಎಚ್ಚರಿಕೆ, ಧರ್ಮ ಕಾರ್ಯಗಳಲ್ಲಿ ತೊಡಗುವಿರಿ.

**ಮಕರ:** ಕೋರ್ಟ್ ಮೆಟ್ಟಿಲೇರುವ ಸಂದರ್ಭ, ವೇಗದ ಚಾಲನೆಯಿಂದ ಸಮಸ್ಯೆ, ನಿದ್ರಾಭಂಗ, ಉನ್ನತ ಅಧಿಕಾರಿಗಳಿಂದ ಸಮಸ್ಯೆ.

**ಕುಂಭ:** ಸಂಗಾತಿಯಿಂದ ಅನುಕೂಲ, ಪಾಲುದಾರಿಕೆಯಲ್ಲಿ ಲಾಭ, ಉದ್ಯೋಗ ಲಾಭ.

**ಮೀನ:** ಮಕ್ಕಳಿಂದ ಧನಾಗಮನ, ಪ್ರಯಾಣದಲ್ಲಿ ಅಡೆತಡೆ, ತಂದೆಯಿಂದ ನೋವು, ಆರೋಗ್ಯದಲ್ಲಿ ವ್ಯತ್ಯಾಸ.

# 177ನೇ ಶ್ರೀ ತ್ಯಾಗರಾಜ ಸ್ವಾಮಿ ಆರಾಧನೆ



ಜನವರಿ 30ರಂದ 10 ಗಂಟೆಗೆ ಸಂತ ತ್ಯಾಗರಾಜರಿಂದ ರಚಿಸಲ್ಪಟ್ಟ ಪಂಚ ರತ್ನ ಕೃತಿ ಗೋಷ್ಠಿ ಗಾಯನವು ಪ್ರತಿಷ್ಠಿತ ಶಾಸ್ತ್ರೀಯ ಸಂಗೀತಗಾರರು ಒಕ್ಕೊರಲಿನಿಂದ ಹಾಡಿದರು. ಈ ಕಾರ್ಯಕ್ರಮದಲ್ಲಿ 600 ಕ್ಕಿಂತ ಹೆಚ್ಚು ಸಂಗೀತಗಾರರು ಭಾಗವಹಿಸಿದ್ದರು. ಜನವರಿ 30 ಸಂಜೆ 6 ಗಂಟೆಗೆ ಶಾಸ್ತ್ರೀಯ ಸಂಗೀತ ಕ್ಷೇತ್ರದ ದಿಗ್ಗಜರಿಗೆ ''ಭಾರತಿ ತ್ಯಾಗರಾಜ ಸಮ್ಮಾನ್'' ಪ್ರಶಸ್ತಿಯನ್ನು ಪದ್ಮಶ್ರೀ ಪುರಸ್ಕೃತ ಡಾ. ವಿ.ಆರ್. ಗೌರಿಶಂಕರ್ ರವರು ಈ ಬಾರಿ ವಿದುಷಿ ವಸಂತಮಾಧವಿ ಮತ್ತು ವಿದ್ವಾನ್ ಶ್ರೀ ಹೆಚ್. ಕೆ. ನರಸಿಂಹ ಮೂರ್ತಿ ರವರಿಗೆ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಶ್ರೀ ಸದ್ಗುರು ತ್ಯಾಗಬ್ರಹ್ಮ ಆರಾಧನಾ ಟ್ರಸ್ಟಿ ರಾಧಾಕೃಷ್ಣ ಜಿ ಶೇಷಪ್ಪ ಈ ಶುಭ ಸಂದರ್ಭದಲ್ಲಿ ಉಪಸ್ಥಿತರಿದ್ದರು.ಪ್ರಶಸ್ತಿಯು 1 ಲಕ್ಷ ರೂ.ಗಳ ನಗದು. ಒಂದು ಚಿನ್ನದ ಪದಕ, ಒಂದು ಉಲ್ಲೇಖ, ಮತ್ತು ಇತರ ಸಾಮಗ್ರಿಗಳನ್ನು ಒಳಗೊಂಡಿದ್ದು ಇದುವರಗೆ 32 ಸಂಗೀತಗಾರರು ಮತ್ತು ಸಂಬಂಧಿತ ವಿಷಯಗಳಲ್ಲಿ ಪರಿಣತರಿಗೆ ಈ ಪ್ರತಿಷ್ಠಿತ ರಾಷ್ಟ್ರೀಯ ಪ್ರಶಸ್ತಿಯನ್ನು ಸದ್ಗುರು ಶ್ರೀ ತ್ಯಾಗಬ್ರಹ್ಮ ಕೈಂಕರ್ಯ ಟ್ರಸ್ಟ್ ನೀಡಿ ಗೌರವಿಸಿದೆ.

# ಕಾಲ್ನಡಿಗೆಯಲ್ಲಿ ತೆರಳಿ ರಾಮನ ದರ್ಶನ ಪಡೆದ ಮುಸ್ಲಿಮರು!





**ಅಯೋಧ್ಯೆ:** ಲಕ್ನೋದಿಂದ 6 ದಿನ ಕಾಲ್ನಡಿಗೆಯಲ್ಲಿ ತೆರಳಿ 350 ಮಂದಿ ಮುಸ್ಲಿಮರು ರಾಮಲಲ್ಲಾಗೆ ನಮಿಸಿದ್ದಾರೆ.ಫಿ RSS ಬೆಂಬಲಿತ ಮುಸ್ಲಿಂ ಸಂಘಟನೆಯಾದ ಮುಸ್ಲಿಂ ರಾಷ್ಟ್ರೀಯ ಮಂಚ್ ನೇತೃತ್ವದ ಗುಂಪು ಜನವರಿ 25 ರಂದು ಲಕ್ನೋದಿಂದ ತಮ್ಮ ಪ್ರಯಾಣವನ್ನು ಪ್ರಾರಂಭಿಸಿತು ಎಂದು ಒಖಿಒ ನ ಮಾಧ್ಯಮ ಉಸ್ತುವಾರಿ ಶಾಹಿದ್ ಸಯೀದ್ ಹೇಳಿದ್ದಾರೆ. 350 ಮಂದಿ ಮುಸ್ಲಿಂ ಭಕ್ತರ ಗುಂಪು 'ಜೈ ಶ್ರೀ ರಾಮ್' ಎಂದು ಘೋಷಣೆ ಕೂಗುತ್ತಾ ಕೊರೆಯುವ ಚಳಿಯ ನಡುವೆಯೇ ಸುಮಾರು 150 ಕಿ.ಮೀ ಕಾಲ್ನಡಿಗೆಯಲ್ಲಿ ಸಾಗಿ ಅಯೋಧ್ಯೆಗೆ ತಲುಪಿದೆ. ಈ 6 ದಿನಗಳಲ್ಲಿ ಪ್ರತಿ 25 ಕಿ.ಮೀ ಬಳಿಕ ರಾತ್ರಿ ವೇಳೆ ವಿಶ್ರಾಂತಿ ತೆಗೆದುಕೊಳ್ಳುತ್ತಿದ್ದರು. ಮರುದಿನ ಬೆಳಗ್ಗೆ ತಮ್ಮ ಪ್ರಯಾಣವನ್ನು ಮುಂದುವರಿಸುತ್ತಿದ್ದರು ಎಂದು ಅವರು ವಿವರಿಸಿದ್ದಾರೆ.ಸವೆದ ಬೂಟುಗಳು ಮತ್ತು ದಣಿದ ಪಾದಗಳೊಂದಿಗೆ 6 ದಿನಗಳ ಬಳಿಕ ಭಕ್ತರು ಅಯೋಧ್ಯೆಯನ್ನು ತಲುಪಿದರು. ನಂತರ ರಾಮಮಂದಿರಕ್ಕೆ ತೆರಳಿ ಹೊಸದಾಗಿ ಪ್ರತಿಷ್ಠಾಪಿಸಲಾದ ರಾಮಲಲ್ಲಾ ವಿಗ್ರಹಕ್ಕೆ ಪೂಜೆ ಸಲ್ಲಿಸಿದರು. ಮುಸ್ಲಿಂ ಆರಾಧಕರ ಈ ಕಾರ್ಯವು ಏಕತೆ, ಸಮಗ್ರತೆ, ಸಾರ್ವಭೌಮತೆ ಮತ್ತು ಸಾಮರಸ್ಯದ ಸಂದೇಶವನ್ನು ರವಾನಿಸುತ್ತದೆ ಎಂದು ಸಯೀದ್ ಹೇಳಿದರು.

## ಜಾರ್ಖಂಡ್ ನೂತನ ಮುಖ್ಯಮಂತ್ರಿ ಚಂಪೈ ಸೊರೇನ್



**ರಾಂಚಿ:** ಆಡಳಿತಾರೂಢ ಜಾರ್ಖಂಡ್ ಮುಕ್ತಿ ಮೋರ್ಚಾ ಇಂದು (ಜ. 31)ಚಂಪೈ ಸೊರೇನ್ ಅವರನ್ನು ಜಾರ್ಖಂಡ್ನ ಮುಂದಿನ ಮುಖ್ಯಮಂತ್ರಿಯನ್ನಾಗಿ ನೇಮಕ ಮಾಡಿದೆ. ಈಗಾಗಲೇ ಹೇಮಂತ್ ಸೊರೇನ್ ರಾಜೀನಾಮೆ ನೀಡಿದ್ದು, ರಾಜ್ಯಪಾಲ ಸಿ.ಪಿ.ರಾಧಾಕೃಷ್ಣನ್ ಇದನ್ನು ಅಂಗೀಕರಿಸಿದ್ದಾರೆ. ಭೂ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದ ತನಿಖೆಯ ಭಾಗವಾಗಿ ಇಡಿ ಜಾರ್ಖಂಡ್ ಮುಖ್ಯಮಂತ್ರಿ ಯಾಗಿದ್ದ ಹೇಮಂತ್ ಸೊರೇನ್ ಅವರನ್ನು ರಾಂಚಿಯಲ್ಲಿ ವಿಚಾರಣೆ ಮಾಡುತ್ತಿದೆ.

## ಪೇಟಿಎಂ ಪೇಮೆಂಟ್ ಬ್ಯಾಂಕ್‌ಗೆ ಆರ್‌ಬಿಐ ನಿರ್ಬಂಧ



**ಮುಂಬೈ:** ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಗೆ ಆರ್ಬಿಐ ನಿರ್ಬಂಧ ವಿಧಿಸಿದೆ. ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ನಿರ್ಬಂಧ ವಿಧಿಸಲಾಗಿದ್ದು, ಫೆಬ್ರವರಿ 29 ರ ನಂತರ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಠೇವಣಿಗಳನ್ನು ಸ್ವೀಕರಿಸದಂತೆ ಸೂಚಿಸಲಾಗಿದೆ. ಫೆಬ್ರವರಿ 29, 2024 ರ ನಂತರ ಯಾವುದೇ ಗ್ರಾಹಕರ ಖಾತೆ, ಪ್ರಿಪೇಯ್ಡ್ ಉಪಕರಣಗಳು, ವ್ಯಾಲೆಟ್ಗಳು ಮತ್ತು ಫಾಸ್ಟ್‌ಟ್ಯಾಗ್ ಗಳಲ್ಲಿ ಠೇವಣಿ ಅಥವಾ ಟಾಪ್-ಅಪ್ಗಳನ್ನು ಸ್ವೀಕರಿಸದಂತೆ ಭಾರತೀಯ ರಿಸರ್ವ್ ಬ್ಯಾಂಕ್ ಬುಧವಾರ Paytm ಪಾವತಿಗಳನ್ನು ನಿರ್ಬಂಧಿಸಿದೆ Paytm ವಿರುದ್ಧ ಕೇಂದ್ರೀಯ ಬ್ಯಾಂಕ್ನ ಕ್ರಮವು ಬಾಹ್ಯ ಲೆಕ್ಕಪರಿಶೋಧಕರು ನಡೆಸಿದ ಸಮಗ್ರ ಸಿಸ್ಟಮ್ ಆಡಿಟ್ ವರದಿ ಮತ್ತು ನಂತರದ ಅನುಸರಣೆ ಮೌಲ್ಯೀಕರಣ ವರದಿಗೆ ಪ್ರತಿಕ್ರಿಯೆ ಇದಾಗಿದೆ. ಫೆಬ್ರವರಿ 29, 2024 ರ ನಂತರ ಯಾವುದೇ ಬಡ್ಡಿ, ಕ್ಯಾಶ್ಬ್ಯಾಕ್ ಅಥವಾ ಮರುಪಾವತಿಗಳನ್ನು ಹೊರತುಪಡಿಸಿ ಯಾವುದೇ ಗ್ರಾಹಕರ ಖಾತೆಗಳು, ಪ್ರಿಪೇಯ್ಡ್ ಉಪಕರಣಗಳು, ವ್ಯಾಲೆಟ್ಗಳು, ಫಾಸ್ಟ್ಯಾಗ್ಗಳು, NCMC ಕಾರ್ಡ್ಗಳು ಇತ್ಯಾದಿಗಳಲ್ಲಿ ಯಾವುದೇ ಹೆಚ್ಚಿನ ಠೇವಣಿ ಅಥವಾ ಕ್ರೆಡಿಟ್ ವಹಿವಾಟುಗಳು ಅಥವಾ ಟಾಪ್-ಅಪ್ಗಳನ್ನು ಅನುಮತಿಸಲಾಗುವುದಿಲ್ಲ ಎಂದು ಹೇಳಲಾಗಿದೆ.

## ಚೀನಾ ಸೈನಿಕರನ್ನು ಎದುರಿಸಿದ ಕುರಿಗಾಹಿಗಳು!

**ಲಡಾಖ್:** ನಿಯಂತ್ರಣ ರೇಖೆ ಬಳಿ ಕುರಿಗಳನ್ನು ಮೇಯಿಸುವುದನ್ನು ತಡೆಯಲು ಪ್ರಯತ್ನಿಸಿದ ಚೀನಾದ ಸೈನಿಕರಿಗೆ ಲಡಾಖ್ ನ ಕುರಿ ಕಾಯುವವರ ಗುಂಪು ಧೈರ್ಯದಿಂದ ಎದುರಿಸಿದ ವಿಡಿಯೋ ವೈರಲ್ ಆಗಿದೆ.2020 ರ ಗಾಲ್ವಾನ್ ಘರ್ಷಣೆಯ ನಂತರ ಸ್ಥಳೀಯರು ಈ ಪ್ರದೇಶದಲ್ಲಿ ಕುರಿಗಳನ್ನು ಮೇಯಿಸುವುದನ್ನು ನಿಲ್ಲಿಸಿದ್ದರು. ಅವರು ಪಿಎಲ್ಎ ಪಡೆಗಳೊಂದಿಗೆ ವಾದಿಸುವ ಮತ್ತು ಅವರು ಭಾರತೀಯ ಭೂಪ್ರದೇಶದಲ್ಲಿದ್ದಾರೆ ಎಂದು ಪ್ರತಿಪಾದಿಸುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ಹೃದಯಗಳನ್ನು ಗೆದ್ದಿದೆ. ಕಳೆದ ಮೂರು ವರ್ಷಗಳಿಂದ, ಪೂರ್ವ ಲಡಾಖ್ನ ಅಲೆಮಾರಿಗಳು ಎಲ್ಎಸಿ ಬಳಿಯ ಹಲವಾರು ಪ್ರದೇಶಗಳಲ್ಲಿ ಪ್ರಾಣಿಗಳನ್ನು ಮೇಯಿಸುವುದನ್ನು ನಿಲ್ಲಿಸಿದ್ದರು. ಇದೇ ಮೊದಲ ಬಾರಿಗೆ ಅವರು ಈ ಪ್ರದೇಶದಲ್ಲಿ ತಮ್ಮ ಮೇವಿನ ಹಕ್ಕುಗಳನ್ನು ಪ್ರತಿಪಾದಿಸಿದ್ದಾರೆ ಮತ್ತು ಪಿಎಲ್ಎ ಸೈನಿಕರನ್ನು ಹಿಂದೆ ಸರಿಯುವಂತೆ ಒತ್ತಾಯಿಸಿದ್ದಾರೆ.



## ರಾಹುಲ್ ಗಾಂಧಿ ಕಾರಿಗೆ ಕಲ್ಲೆಸೆತ

**ಪಶ್ಚಿಮಬಂಗಾಳ:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಾರಿಗೆ ಕಲ್ಲು ಎಸೆದ ಘಟನೆ ಪಶ್ಚಿಮ ಬಂಗಾಳದ ಮಾಲ್ಡಾದಲ್ಲಿ ನಡೆದಿದೆ. ಬಿಹಾರದಿಂದ ಮಾಲ್ಡಾಗೆ ತೆರಳುವ ವೇಳೆ ರಾಹುಲ್ ಗಾಂಧಿ ಕಾರಿಗೆ ಜನರು ಕಲ್ಲು ಎಸೆದಿದ್ದಾರೆ. ಕಲ್ಲು ಎಸೆದ ಪರಿಣಾಮ ಕಾರಿನ ಗಾಜು ಒಡೆದಿದೆ. ಇದಾದ ಬಳಿಕ ರಾಹುಲ್ ಗಾಂಧಿ ಕಾರಿನಿಂದ ಇಳಿದಿದ್ದಾರೆ. ಅದೇ ಕಾರಿನಲ್ಲಿ ಅಧೀರ್ ರಂಜನ್ ಚೌಧರಿ ಕೂಡ ಪ್ರಯಾಣ ಬೆಳೆಸುತ್ತಿದ್ದರು. ಈ ಬಗ್ಗೆ ಪ್ರತಿಕ್ರಿಯಿಸಿದ ಅಧೀರ್ ರಂಜನ್ ಚೌಧರಿ 'ನಾನು ಕಾರಿನೊಳಗೆ ಇದ್ದೆ. ಯಾರೋ ಹಿಂದಿನಿಂದ ಇಟ್ಟಿಗೆ ಎಸೆದಿದ್ದಾರೆ. ರಾಹುಲ್ ಗಾಂಧಿಯವರ 'ಭಾರತ್ ಜೋಡೋ ಯಾತ್ರೆ' ಕೈಗೊಂಡು ಬಂಗಾಳಕ್ಕೆ ಪ್ರವೇಶಿಸಿದಾಗಿನಿಂದ ಅಡೆತಡೆಗಳನ್ನು ಎದುರಿಸುತ್ತಿದ್ದೇವೆ ಎಂದು ಹೇಳಿದ್ದಾರೆ.



## ಕ್ಷಮೆ ಯಾಚಿಸುವಂತೆ ಮಾಲ್ಡೀವ್ಸ್ ಅಧ್ಯಕ್ಷರಿಗೆ ವಿಪಕ್ಷಗಳಿಂದ ಆಗ್ರಹ

**ಮಾಲೆ:** ನರೇಂದ್ರ ಮೋದಿ ಮತ್ತು ಭಾರತೀಯರಲ್ಲಿ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಜ್ಜು ಕ್ಷಮೆ ಯಾಚಿಸಬೇಕೆಂದು ಮಾಲ್ಡೀವ್ಸ್ ಜುಮ್ಹೂರಿ ಪಕ್ಷದ (ಜೆಪಿ) ನಾಯಕ ಖಾಸಿಮ್ ಇಬ್ರಾಹಿಂ ಆಗ್ರಹಿಸಿದ್ದಾರೆ. ಮಾಲ್ಡೀವ್ಸ್ ನ ಸದನದಲ್ಲಿ ನಡೆದ ಘರ್ಷಣೆಯ ನಂತರ ಆದ ಬೆಳವಣಿಗೆಯಲ್ಲಿ ಪ್ರತಿಪಕ್ಷ MDP ದೇಶದ ಅಧ್ಯಕ್ಷರ ವಿರುದ್ಧ ದೋಷಾರೋಪಣೆಯ ಪ್ರಸ್ತಾವನೆ ಸಲ್ಲಿಸಲು ಮುಂದಾಗಿದೆ. ನೆರೆಹೊರೆಯ ದೇಶಗಳೊಂದಿಗಿನ ನಮ್ಮ ಸಂಬಂಧದ ಮೇಲೆ ಕೆಟ್ಟ ಪರಿಣಾಮವನ್ನು ಬೀರುವಂತಹ ಹೇಳಿಕೆಗಳನ್ನು ನೀಡಬಾರದು ಎಂದಿರುವ ಖಾಸಿಮ್, ಡಿಕ್ರಿಯನ್ನು ರದ್ದುಗೊಳಿಸುವ ವಿರುದ್ಧ ಮಾತನಾಡಿದ್ದು, ಅದರಿಂದ ರಾಷ್ಟ್ರಕ್ಕೆ ನಷ್ಟವಾಗಲಿದೆ ಎಂದಿದ್ದಾರೆ. ಜೊತೆಗೆ ಭಾರತ ಸರ್ಕಾರ ಮತ್ತು ಪ್ರಧಾನಿ ಮೋದಿಯವರ ಬಗ್ಗೆ ನೀಡಿದ ಹೇಳಿಕೆಗೆ ಔಪಚಾರಿಕವಾಗಿ ಕ್ಷಮೆಯಾಚಿಸುವಂತೆ ಅಧ್ಯಕ್ಷರನ್ನು ಒತ್ತಾಯಿಸಿದ್ದಾರೆ.





## ಸಹಕಾರಿ ಸಂಸ್ಥೆಗಳ ಮೂಲಕ ಲಕ್ಷಾಂತರ ಜನರಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಮೋದಿ ಪಣ

**ದೆಹಲಿ:** ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ಗಳು (ಎಆರ್ಡಿಬಿ) ಮತ್ತು ಸಹಕಾರ ಸಂಘಗಳ (ಆರ್ಸಿಎಸ್) ರಿಜಿಸ್ಟ್ರಾರ್ ಕಚೇರಿಗಳ ಗಣಕೀಕರಣದ ಯೋಜನೆಯನ್ನು ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಅಮಿತ್ ಶಾ ಮಂಗಳವಾರದಂದು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅಮಿತ್ ಶಾ, 'ಸಹಕಾರಿ ಸಂಸ್ಥೆಗಳ ಮೂಲಕ ಲಕ್ಷಾಂತರ ಜನರಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಮೋದಿಯವರು ಒಂದು ದೃಢವಾದ ವ್ಯವಸ್ಥೆಯನ್ನು ಸ್ಥಾಪಿಸಿದ್ದಾರೆ' ಎಂದು ಸ್ಪಷ್ಟಪಡಿಸಿದರು. ಈ ಯೋಜನೆಯು ಸಹಕಾರಿ ವಲಯದಲ್ಲಿ ಕಾಗದದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ ದಕ್ಷತೆಯನ್ನು ಹೆಚ್ಚಿಸುತ್ತದೆ.

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನಾಯಕತ್ವ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾರವರ ನುರಿತ ಮಾರ್ಗದರ್ಶನದಲ್ಲಿ ಸರಿಸುಮಾರು 23 ಕೋಟಿ ಜನರು ಬಡತನ ರೇಖೆಯಿಂದ ಮೇಲೆ ಬಂದಿದ್ದಾರೆ. ಇಂದು ಲಕ್ಷಾಂತರ ಮನೆಗಳಿಗೆ ಗ್ಯಾಸ್, ವಿದ್ಯುತ್, 5 ಕಿಲೋಗ್ರಾಂ ಉಚಿತ ಪಡಿತರ, ಮತ್ತು ವಿವಿಧ ಸೌಲಭ್ಯಗಳನ್ನು ನೀಡುವ ಮೂಲಕ ಮೋದಿ ಸರ್ಕಾರ ಬಡವರ ಕಲ್ಯಾಣಕ್ಕಾಗಿ ನಿರಂತರ ಕೆಲಸ ಮಾಡುತ್ತಿದೆ.

ಸಹಕಾರ ಮಂತ್ರಾಲಯ ರಚನೆಯ ಬೇಡಿಕೆ ದೇಶದಲ್ಲಿ ಬಹಳ ದಿನಗಳಿಂದ ಬಾಕಿ ಉಳಿದಿದ್ದರೂ ಯಾವ ಸರಕಾರವೂ ಇತ್ತ ಗಮನಹರಿಸಿಲ್ಲ. 2021 ರಲ್ಲಿ, ಮೋದಿಯವರು ಸಹಕಾರ ಸಚಿವಾಲಯವನ್ನು ಸ್ಥಾಪಿಸಿ, ಅದರ ನಾಯಕತ್ವವನ್ನು 'ಅಂತ್ಯೋದಯ' ರಾಜಕೀಯಕ್ಕೆ ಹೆಸರುವಾಸಿಯಾದ ಅಮಿತ್ ಶಾರಿಗೆ ವಹಿಸಿದರು. ದೀರ್ಘ ಕಾಲದಿಂದ ಸಹಕಾರಿ ಆಂದೋಲನದೊಂದಿಗೆ ಒಡನಾಟ ಹೊಂದಿರುವ ಶಾ, ಹದಗೆಟ್ಟಿದ್ದ ಸಹಕಾರಿ ಕ್ಷೇತ್ರವನ್ನು ಪರಿಣಾಮಕಾರಿಯಾಗಿ ಪುನಶ್ಚೇತನಗೊಳಿಸಿದ್ದಾರೆ. ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾರ ನೀತಿಗಳ ಮೂಲಕ, ಸಹಕಾರ ಸಚಿವಾಲಯವು 'ಸಹಕಾರದಿಂದ ಸಮೃದ್ಧಿ' ಎಂಬ ದೃಷ್ಟಿಕೋನವನ್ನು ಸಾಕಾರಗೊಳಿಸಲು ಬದ್ಧವಾಗಿದೆ. ಎಆರ್ಡಿಬಿ ಮತ್ತು ಆರ್ಸಿಎಸ್ ಕಚೇರಿಗಳ ಗಣಕೀಕರಣವು, ಈ ಸಚಿವಾಲಯವು ತೆಗೆದುಕೊಂಡ ಮಹತ್ವದ ಕ್ರಮಗಳಲ್ಲಿ ಒಂದಾಗಿದೆ. ಅಮಿತ್ ಶಾ ಅವರು ಈ ಯೋಜನೆಯ ಮೂಲಕ ಸಂಪೂರ್ಣ ಸಹಕಾರಿ ಪರಿಸರ ವ್ಯವಸ್ಥೆಯನ್ನು ಡಿಜಿಟಲ್ ವೇದಿಕೆಗೆ ತರುವ ಮೂಲಕ ಸಹಕಾರಿ ವಲಯದಲ್ಲಿ ಆಧುನೀಕರಣ ಮತ್ತು ದಕ್ಷತೆಯನ್ನು ಹೆಚ್ಚಿಸಲು ಕಟಿಬದ್ಧರಾಗಿದ್ದಾರೆ.

PACSUA ಗಣಕೀಕರಣದೊಂದಿಗೆ, ಅವುಗಳನ್ನು ಸಾಮಾನ್ಯ ರಾಷ್ಟ್ರೀಯ ಸಾಫ್ಟ್‌ವೇರ್ ಮೂಲಕ ನಬಾರ್ಡ್ನೊಂದಿಗೆ ಸಂಯೋಜಿಸಲಾಗುತ್ತಿದೆ. ಬಹುಪಯೋಗಿ ಸಾಮಾನ್ಯ ಸೇವಾ ಕೇಂದ್ರವಾಗಿ ಡಿಜಿಟಲ್ ಸೇವೆಗಳನ್ನು ಪ್ರಾರಂಭಿಸಲು ಕಂಅಖ ಗೆ ಅಧಿಕಾರ ನೀಡಲಾಗುತ್ತಿದೆ. ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಹಿಡಿದು ಇಡೀ ಸಹಕಾರಿ ವ್ಯವಸ್ಥೆಗೆ ಆಧುನೀಕರಣ ನಡೆಯುತ್ತಿದೆ. 'ಸಹಕಾರದಿಂದ ಸಮೃದ್ಧಿ' ಎಂಬ ಮಂತ್ರದೊಂದಿಗೆ ಹಲವು ವರ್ಷಗಳಿಂದ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ಸಹಕಾರಿ ಸಂಘಗಳಿಗೆ ಈಗ ಮೋದಿ-ಶಾ ಜೋಡಿ ಹೊಸ ಆಯಾಮ ನೀಡುತ್ತಿದೆ ಎನ್ನುವುದು ಅತಿಶಯೋಕ್ತಿಯಲ್ಲ. 'ಯಶಸ್ಸನ್ನು ಸಾಧಿಸುವ ಈ ಸಂಕಲ್ಪ'ದ ಪ್ರಯಾಣದಲ್ಲಿ ಐದನೇ ಅತಿದೊಡ್ಡ ಆರ್ಥಿಕತೆಯಾದ ಭಾರತವು ವಿಶ್ವ ವೇದಿಕೆಯಲ್ಲಿ ಜಾಗತಿಕ ಶಕ್ತಿಯಾಗಿ ಹೊರಹೊಮ್ಮಲಿದೆ.

## ಫೆಲೆಸ್ತೀನ್ ದೇಶಕ್ಕೆ ಮಾನ್ಯತೆ ನೀಡಲು ಸಿದ್ಧ: ಬ್ರಿಟನ್

**ಲಂಡನ್:** ಪ್ರದೇಶದಲ್ಲಿ ಶಾಂತಿಯನ್ನು ಖಚಿತಪಡಿಸುವ ಪ್ರಯತ್ನಗಳ ಅಂಗವಾಗಿ ಫೆಲೆಸ್ತೀನ್ ದೇಶಕ್ಕೆ ಮಾನ್ಯತೆ ನೀಡುವುದನ್ನು ಪರಿಗಣಿಸಲು ಬ್ರಿಟನ್ ಸಿದ್ಧವಾಗಿದೆ ಎಂದು ವಿದೇಶಾಂಗ ಸಚಿವ ಡೇವಿಡ್ ಕ್ಯಾಮರೂನ್ ಹೇಳಿದ್ದಾರೆ. ಈ ರಾಜತಾಂತ್ರಿಕ ನಡೆಯು ದ್ವಿರಾಷ್ಟ್ರ ಪರಿಹಾರಕ್ಕೆ ಮಾರ್ಗವನ್ನು ಕಲ್ಪಿಸಲಿದೆ ಎಂದು ಕ್ಯಾಮರೂನ್ ಹೇಳಿದರು. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತಾನ್ಯಹು ಅವರು ಪ್ರಸ್ತುತ ಇದನ್ನು ವಿರೋಧಿಸುತ್ತಿದ್ದಾರೆ.

'ಫೆಲೆಸ್ತೀನ್ ದೇಶವು ಹೇಗಿರಲಿದೆ, ಅದು ಏನೇನನ್ನು ಒಳಗೊಂಡಿರಲಿದೆ ಮತ್ತು ಅದು ಹೇಗೆ ಕಾರ್ಯನಿರ್ವಹಿಸಲಿದೆ ಎಂಬ ಬಗ್ಗೆ ಕಾರ್ಯಸೂಚಿಯನ್ನು ಬ್ರಿಟನ್ ಸಿದ್ಧಪಡಿಸಲಿದೆ. ಸಂದರ್ಭಕ್ಕೆ ಅನುಗುಣವಾಗಿ ವಿಶ್ವಸಂಸ್ಥೆ ಸೇರಿದಂತೆ ಫೆಲೆಸ್ತೀನ್ ದೇಶಕ್ಕೆ ಮಾನ್ಯತೆ ನೀಡುವ ವಿಷಯವನ್ನು ನಾವು ಮಿತ್ರರಾಷ್ಟ್ರಗಳೊಂದಿಗೆ ಸೇರಿಕೊಂಡು ಪರಿಶೀಲಿಸುತ್ತೇವೆ' ಎಂದು ಹೇಳಿದ ಕ್ಯಾಮರೂನ್, ಯುದ್ಧಗ್ರಸ್ತ ಗಾಝಾಕ್ಕೆ ಹೆಚ್ಚಿನ ಸಹಾಯವನ್ನು ಒದಗಿಸಲು ಅವಕಾಶ ನೀಡುವಂತೆ ಇಸ್ರೇಲ್ ಅನ್ನು ಆಗ್ರಹಿಸಿದರು.





## ಜ್ಞಾನವಾಪಿ ಮಸೀದಿಯಲ್ಲಿ ಪೂಜೆ ನಡೆಸಲು ಹಿಂದೂಗಳಿಗೆ ಅನುಮತಿ

**ವಾರಣಾಸಿ:** ಹಿಂದೂ ಧರ್ಮದವರಿಗೆ ಜ್ಞಾನವಾಪಿ ಮಸೀದಿಯ ಮೊಹರು ಮಾಡಿದ ನೆಲಮಾಳಿಗೆಯಲ್ಲಿ ಪೂಜೆ ಮಾಡಲು ವಾರಣಾಸಿಯ ನ್ಯಾಯಾಲಯವು ಬುಧವಾರ ಅನುಮತಿ ನೀಡಿದೆ.

ನ್ಯಾಯಾಲಯದ ಆದೇಶದ ಪ್ರಕಾರ, ವಾರಣಾಸಿಯ ಜ್ಞಾನವಾಪಿ ಮಸೀದಿಯೊಳಗೆ ಮುಚ್ಚಿದ್ದ ಪ್ರದೇಶವಾದ 'ವ್ಯಾಸ್ ಜೀ ಕಾ ತಹಖಾನಾ'ದಲ್ಲಿ ಹಿಂದೂ ಭಕ್ತರು ಈಗ ಪ್ರಾರ್ಥನೆ ಸಲ್ಲಿಸಬಹುದು. ಹಿಂದಿನ ದಿನದ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಾಲಯವು ಮುಂದಿನ ಏಳು ದಿನಗಳಲ್ಲಿ ಅಗತ್ಯ ವ್ಯವಸ್ಥೆಗಳನ್ನು ಮಾಡುವಂತೆ ಜಿಲ್ಲಾಡಳಿತಕ್ಕೆ ಸೂಚಿಸಿದೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಹಿಂದೂ ಪರ ವಕೀಲ ವಿಷ್ಣು ಶಂಕರ್ ಜೈನ್, 'ವ್ಯಾಸ್ ಕಾ ತಹಖಾನಾ'ದಲ್ಲಿ ಪ್ರಾರ್ಥನೆ ಸಲ್ಲಿಸಲು ಹಿಂದೂಗಳಿಗೆ ಅವಕಾಶ ನೀಡಲಾಗಿದೆ. ಜಿಲ್ಲಾಡಳಿತವು 7 ದಿನಗಳಲ್ಲಿ ವ್ಯವಸ್ಥೆ ಮಾಡಬೇಕಾಗಿದೆ, ಈಗ ಎಲ್ಲರಿಗೂ ಪೂಜೆ ಮಾಡುವ ಹಕ್ಕು ಇದೆ ಎಂದು ಹೇಳಿದ್ದಾರೆ.

1983 ರಲ್ಲಿ ಅಯೋಧ್ಯೆಯಲ್ಲಿ ರಾಮಮಂದಿರದ ಬೀಗಗಳನ್ನು ತೆರೆಯಲು ಆದೇಶಿಸಿದ ನ್ಯಾಯಮೂರ್ತಿ ಕೃಷ್ಣ ಮೋಹನ್ ಪಾಂಡೆ ಅವರು ನೀಡಿದ ಆದೇಶದಂತೆ ವಾರಾಣಸಿ ನ್ಯಾಯಾಲಯದ ಇತ್ತೀಚಿನ ಆದೇಶವನ್ನು ನಾನು ನೋಡುತ್ತೇನೆ ಎಂದು ವಕೀಲ ವಿಷ್ಣು ಜೈನ್ ಹೇಳಿದ್ದಾರೆ. ಗೋರಖ್ಪುರ ನಿವಾಸಿಯಾದ ಜೆಎಂ ಪಾಂಡೆ ಅವರ ಆದೇಶದ ಮೇರೆಗೆ ರಾಮಮಂದಿರದ ಬೀಗವನ್ನು ಪೂಜೆಗಾಗಿ ತೆರೆದ ಮೊದಲ ನ್ಯಾಯಾಧೀಶರಾಗಿದ್ದಾರೆ.

## ಎರಡು ಬಾರಿ ಪ್ರಮಾಣ ವಚನ ಸ್ವೀಕರಿಸಿದ ರಾಜ್ಯಸಭಾ ಸದಸ್ಯೆ!



ನವದೆಹಲಿ: ಆಪ್ ಸ್ವಾತಿ ಮಲಿವಾಲ್ ರಾಜ್ಯಸಭಾ ಸದಸ್ಯರಾಗಿ ಎರಡು ಬಾರಿ ಪ್ರಮಾಣ ವಚನ ಸ್ವೀಕರಿಸಿದ ಘಟನೆ ನಡೆದಿದೆ.ದೆಹಲಿ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಸ್ವಾತಿ ಮಲಿವಾಲ್ ಅವರು ರಾಜ್ಯಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು. ಆದರೆ ಅವರು ಪ್ರಮಾಣ ವಚನದ ಕೊನೆಯಲ್ಲಿ ಇಂಕ್ವಿಲಾಬ್ ಜಿಂದಾಬಾದ್ ಘೋಷಣೆ ಕೂಗಿದ್ದಾರೆ. ಇದರಿಂದಾಗಿ ಸದನದಲ್ಲಿ ಗದ್ದಲ ಉಂಟಾಗಿದೆ. ಈ ಬೆನ್ನಲ್ಲೇ ಅಧ್ಯಕ್ಷ ಜಗದೀಪ್ ಧಂಖರ್ ಅವರು ಚುನಾಯಿತ ಸಂಸದರ ಪ್ರಮಾಣವಚನದ ಭಾಗವಲ್ಲದ ಕೆಲವು ಪದಗಳನ್ನು ಓದಿದ ಕಾರಣ ಈ ಪ್ರಮಾಣ ವಚನವು ಕಾನೂನುಬದ್ಧವೆಂದು ಪರಿಗಣಿಸಲಾಗುವುದಿಲ್ಲ ಎಂದು ತಿಳಿಸಿದ್ದಾರೆ. ಈ ಬೆನ್ನಲ್ಲೇ ಮಲಿವಾಲ್ ಅವರು ಎರಡು ಬಾರಿ ಪ್ರಮಾಣವಚನ ಸ್ವೀಕರಿಸಬೇಕಾಯಿತು ಎಂದು ರಾಜ್ಯಸಭಾ ಸಚಿವಾಲಯದ ಮೂಲಗಳು ತಿಳಿಸಿವೆ. ಸದನದಲ್ಲಿ ಧಂಖರ್ ಮಾತನಾಡಿ, ಇದೊಂದು ಗಂಭೀರ ಸಂದರ್ಭ. ಪ್ರಮಾಣ ವಚನದಲ್ಲಿ ತಿರುವುಗಳಿದ್ದಾಗ ಮತ್ತು ತಿದ್ದುಪಡಿಗಳನ್ನು ಮಾಡಬೇಕಾದ ನಿದರ್ಶನಗಳು ಈ ಹಿಂದೆಯೂ ಇದ್ದವು. ಅವರು ಸದನದ ಯುವ ಸದಸ್ಯೆಯಾಗಿದ್ದಾರೆ ಎಂದರು. ಪ್ರಮಾಣ ವಚನದ ಸಮಯದಲ್ಲಿ ಅನಗತ್ಯ ಘೋಷಣೆಗಳಿಂದಾಗಿ ಅವರು ಆರಂಭದಲ್ಲಿ ತಪ್ಪು ಪ್ರಮಾಣ ಮಾಡಿದರು. ಹೀಗಾಗಿ ಎರಡನೇ ಬಾರಿ ಮಲಿವಾಲ್ ಸರಿಯಾದ ಪ್ರಮಾಣ ವಚನ ಸ್ವೀಕರಿಸಿದ್ದಾರೆ ಎಂದು ತಿಳಿಸಿದ್ದಾರೆ.

## ಇಮ್ರಾನ್ ಖಾನ್ ಗೆ 14 ವರ್ಷ ಜೈಲು

**ಇಸ್ಲಾಮಾಬಾದ್:** ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಮತ್ತು ಅವರ ಪತ್ನಿ ಬುಶ್ರಾ ಬೀಬಿಗೆ 14 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ತಿಳಿಸಿವೆ.

ಪ್ರಧಾನಿಯಾಗಿದ್ದ ಸಂದರ್ಭ ಅವರು ಪಡೆದ ಉಡುಗೊರೆಗಳನ್ನು ಒಳಗೊಂಡ ಪ್ರಕರಣದಲ್ಲಿ ತಪ್ಪಿತಸ್ಥರು ಎಂದು ದೂಷಿಸಲಾಗಿದೆ.

ರಾಜ್ಯ ರಹಸ್ಯಗಳನ್ನು ಸೋರಿಕೆ ಮಾಡಿದ ಪ್ರಕರಣದಲ್ಲಿ ಖಾನ್ಗೆ 10 ವರ್ಷಗಳ ಜೈಲು ಶಿಕ್ಷೆ ವಿಧಿಸಿದ ಒಂದು ದಿನದ ಬಳಿಕ ರಾಷ್ಟ್ರೀಯ ಚುನಾವಣೆಗೆ ಒಂದು ವಾರದ ಮೊದಲು ಈ ತೀರ್ಪು ಬಂದಿದೆ. ಆಗಸ್ಟ್‌ನಲ್ಲಿ ಬಂಧನಕ್ಕೊಳಗಾದ ನಂತರ ಜೈಲಿನೊಳಗೆ ನಡೆದ ವಿಚಾರಣೆಯ ನಂತರ ಖಾನ್ನ ಶಿಕ್ಷೆಯನ್ನು ಏಕಕಾಲದಲ್ಲಿ ನಡೆಸಬೇಕೆ ಅಥವಾ ಹಂತ ಹಂತವಾಗಿ ನಡೆಸಬೇಕೇ ಎಂಬುದು ತಕ್ಷಣವೇ ಸ್ಪಷ್ಟವಾಗಿಲ್ಲ. ಆದರೆ ಇಮ್ರಾನ್ ಖಾನ್ ಅವರ ಪತ್ನಿ ಬುಶ್ರಾ ಬೀಬಿ ಅವರು ವಿಚಾರಣೆಯ ಉದ್ದಕ್ಕೂ ರಿಮಾಂಡ್ನಲ್ಲಿದ್ದರು ಎಂದು ಖಾನ್ ಅವರ ವಕೀಲ ಸಲ್ಮಾನ್ ಸಫ್ದರ್ ಅವರು ಹೇಳಿಕೆ ನೀಡಿದ್ದಾರೆ. ಇಮ್ರಾನ್ ಖಾನ್ ಮತ್ತು ಬುಶ್ರಾ ಬೀಬಿ ಇಬ್ಬರಿಗೂ ಶಿಕ್ಷೆ ವಿಧಿಸಲಾಗಿದ್ದು ಬುಶ್ರಾ ಬೀಬಿಯನ್ನು ಇನ್ನೂ ಬಂಧಿಸಲಾಗಿಲ್ಲ ಎಂದು ಸಫ್ದರ್ ಹೇಳಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಮಲೇಷಿಯಾದಲ್ಲಿ ಕಾಣಿಸಿಕೊಂಡ ರಾಕಿಂಗ್ ಸ್ಟಾರ್ ಯಶ್



ರಾಕಿಂಗ್ ಸ್ಟಾರ್ ಯಶ್ ಮಲೇಷಿಯಾದಲ್ಲಿ ಕಾಣಿಸಿಕೊಂಡಿದ್ದಾರೆ. ಮಲೇಷಿಯಾ ವಿಮಾನ ನಿಲ್ದಾಣದಲ್ಲಿ ಬಂದಿಳಿದ ನೆಚ್ಚಿನ ನಟನನ್ನು ಅಲ್ಲಿನ ಅಭಿಮಾನಿಗಳು ಸಂಭ್ರಮದಿಂದ ಸ್ವಾಗತಿಸಿದ್ದಾರೆ. ಹುಟ್ಟು ಹಬ್ಬದ ದಿನದಂದು ನಡೆದ ಅಭಿಮಾನಿಗಳ ದುರಂತ ಅಂತ್ಯದ ನೋವಿನಲ್ಲಿದ್ದ ಯಶ್, ಇದೀಗ ಮತ್ತೆ ತಮ್ಮ ಕೆಲಸದಲ್ಲಿ ತೊಡಗಿಕೊಂಡಿದ್ದಾರೆ.

ಹಾಗಂತ ಅವರು ಮಲೇಷಿಯಾಗೆ ಹೋಗಿದ್ದು, ಶೂಟಿಂಗಾಗಿ ಅಲ್ಲ, ಖಾಸಗಿ ಸಮಾರಂಭದಲ್ಲಿ ಭಾಗಿ ಆಗುವುದಕ್ಕಾಗಿ ಯಶ್ ಮಲೇಷಿಯಾಗೆ ಪ್ರಯಾಣ ಬೆಳೆಸಿದ್ದಾರೆ. ಅಲ್ಲಿನ ಕಾರ್ಯಕ್ರಮ ಮುಗಿಸಿಕೊಂಡು ಮತ್ತೆ ಅವರು ಟಾಕ್ಸಿಕ್ ಸಿನಿಮಾದ ಚಿತ್ರೀಕರಣದಲ್ಲಿ ಭಾಗಿ ಆಗಲಿದ್ದಾರೆ ಎನ್ನುವ ಮಾಹಿತಿ ಇದೆ.

ಟಾಕ್ಸಿಕ್ ಸಿನಿಮಾದ ಪ್ರಿ ಪ್ರೊಡಕ್ಷನ್ ಕೆಲಸ ಬಹುತೇಕ ಮುಗಿದೆ. ಇನ್ನೇನು ಚಿತ್ರೀಕರಣಕ್ಕೆ ಹೊರಡಬೇಕು. ಬಹುತೇಕ ಶೂಟಿಂಗ್ ವಿದೇಶದಲ್ಲಿ ನಡೆಯಲಿದ್ದು, ಕೆಲವು ಭಾಗಗಳನ್ನು ಮಾತ್ರ ಈ ನೆಲದಲ್ಲಿ ಚಿತ್ರೀಕರಣ ಮಾಡಲಾಗುತ್ತದೆ ಎನ್ನುವುದು ಹರಿದಾಡುತ್ತಿರುವ ಮಾಹಿತಿ. ಇದಕ್ಕೆ ಚಿತ್ರತಂಡವೇ ಸ್ಪಷ್ಟನೆ ಕೊಡಬೇಕಿದೆ.

# ಶಿವರಾತ್ರಿಗೆ ರಿಲೀಸ್ ಆಗಲಿದೆ 'ಕರಟಕ ದಮನಕ' ಸಿನಿಮಾ




ಇದೇ ಮೊದಲ ಬಾರಿಗೆ ಪ್ರಭುದೇವ್ ಮತ್ತು ಶಿವರಾಜ್ ಕುಮಾರ್ ನಟಿಸಿರುವ ಕರಟಕ ದಮನಕ ಸಿನಿಮಾ ಶಿವರಾತ್ರಿ ದಿನದಂದು ರಿಲೀಸ್ ಆಗಲಿದೆ. ಮಾರ್ಚ್ 8 ರಂದು ತಮ್ಮ ಚಿತ್ರವನ್ನು ಬಿಡುಗಡೆ ಮಾಡುವುದಾಗಿ ಚಿತ್ರತಂಡ ಹೇಳಿಕೊಂಡಿದೆ. ಶಿವರಾತ್ರಿಗೆ ಶಿವಣ್ಣನ ಚಿತ್ರದ ಅಬ್ಬರ ಕೇಳಿ ಬರಲಿದೆ.

ರಾಕ್ ಲೈನ್ ವೆಂಕಟೇಶ್ ನಿರ್ಮಾಣದಲ್ಲಿ ತಯಾರಾಗಿರುವ, ಯೋಗರಾಜ್ ಭಟ್ ನಿರ್ದೇಶನದ ಈ ಸಿನಿಮಾಗೆ ವಿಚಿತ್ರವಾಗಿರುವಂಥ ಶೀರ್ಷಿಕೆ ಇಡಲಾಗಿದೆ. ಈವರೆಗೂ ಟೈಟಲ್ ವಿಷಯದಲ್ಲಿ ಉಪೇಂದ್ರ ಮಾತ್ರ ತಲೆಕೆಡಿಸುತ್ತಿದ್ದರು. ಇದೀಗ ಆ ಸಾಲಿಗೆ ಯೋಗರಾಜ್ ಭಟ್ಟರು ಕೂಡ ಸೇರ್ಪಡೆಗೊಂಡಿದ್ದಾರೆ. ಟೈಟಲ್ ನೋಡಿದವರು, ಏನ್ ಗುರು ಇದರ ಅರ್ಥ ಎಂದು ಕೇಳುವಂತಾಗಿದೆ.

ಟೈಟಲ್ ಇಟ್ಟಾಗಿನಿಂದ ಈವರೆಗೂ 'ಕರಟಕ ದಮನಕ' ಎಂದರೇನು ಎನ್ನುವ ಕುರಿತು ಯೋಗರಾಜ್ ಭಟ್ ಎಲ್ಲಿಯೂ ಬಾಯಿ ಬಿಟ್ಟಿರಲಿಲ್ಲ. ಈ ಕುರಿತು ಅವರು ಇನ್ಸ್ಟಾದಲ್ಲಿ ಪೋಸ್ಟ್ ಮಾಡಿದ್ದರು. ಜೊತೆಗೆ ಚಿತ್ರದ ಫಸ್ಟ್ ಲುಕ್ ಕೂಡ ರಿಲೀಸ್ ಮಾಡಿದ್ದರು. 'ಒಂದಾನೊಂದು ಕಾಲದಲ್ಲಿ ಎರಡು ಕುತಂತ್ರಿ ನರಿಗಳಿದ್ದವು. ಒಂದರ ಹೆಸರು ಕರಟಕ ಇನ್ನೊಂದರ ಹೆಸರು ದಮನಕ. ಈ ಎರಡೂ ನರಿಗಳು ಕಾಡು ಮತ್ತು ನಾಡಿನ ತಲೆ ಕೆಡಿಸಿ ಇತಿಹಾಸವಾದವು. ಈ ಕುತಂತ್ರಿ ನರಿಗಳು ಇಂದು ಇಲ್ಲಿ ಮಾನವ ರೂಪ ತಾಳಿವೆ. ಎಚ್ಚರಿಕೆ' ಎಂದು ಪೋಸ್ಟ್ ಮಾಡಿದ್ದರು.

ದಭಿರುಚಿ ಚಿತ್ರಗಳನ್ನು ಕನ್ನಡ ಚಿತ್ರರಂಗಕ್ಕೆ ನೀಡಿರುವ ರಾಕ್ ಲೈನ್ ವೆಂಕಟೇಶ್ ನಿರ್ಮಾಣದಲ್ಲಿ, ಹೆಸರಾಂತ ನಿರ್ದೇಶಕ ಯೋಗರಾಜ್ ಭಟ್ ಅವರ ನಿರ್ದೇಶನದಲ್ಲಿ ಈ ಸಿನಿಮಾ ಮೂಡಿ ಬಂದಿದ್ದು, ಮೊದಲ ಬಾರಿಗೆ ಕರುನಾಡ ಚಕ್ರವರ್ತಿ ಶಿವರಾಜಕುಮಾರ್ ಹಾಗೂ ಇಂಡಿಯನ್ ಮೈಕೆಲ್ ಜಾಕ್ಸನ್ ಪ್ರಭುದೇವ ಅಭಿನಯಿಸಿದ್ದು ವಿಶೇಷ.



# ಸಾರಾಂಶ ಚಿತ್ರದ ಟ್ರೈಲರ್ ಬಿಡುಗಡೆ



ಸೂರ್ಯ ವಸಿಷ್ಠ ನಿರ್ದೇಶನದ 'ಸಾರಾಂಶ' ಹಾಡುಗಳ ಮೂಲಕ ಪ್ರೇಕ್ಷಕರನ್ನು ಸೆಳೆದುಕೊಂಡಿತ್ತು. ಆ ಮೂಲಕ ಸಿನಿಮಾ ಮೇಲೆ ಮೂಡಿಕೊಂಡಿದ್ದ ಕುತೂಹಲ ತಣಿಸುವಂತೆ ಇದೀಗ ಟ್ರೈಲರ್ ಬಿಡುಗಡೆಗೊಂಡಿದೆ. ಮಲ್ಲೇಶ್ವರದ ರೇಣುಕಾಂಬ ಸ್ಟುಡಿಯೋದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ, ಸಪ್ತಸಾಗರದಾಚೆ ಎಲ್ಲೋ ಖ್ಯಾತಿಯ ನಿರ್ದೇಶಕ ಹೇಮಂತ್ ರಾವ್ ಸಾರಾಂಶ ಟ್ರೈಲರ್ ಅನ್ನು ಬಿಡುಗಡೆಗೊಳಿಸಿದ್ದಾರೆ. ಈ ಟ್ರೈಲರ್ ಮೂಡಿ ಬಂದಿರುವ ರೀತಿಯನ್ನು ಮೆಚ್ಚಿಕೊಳ್ಳುತ್ತಾ, ಚಿತ್ರತಂಡಕ್ಕೆ ಶುಭ ಕೋರಿದ್ದಾರೆ. ಅಂದಹಾಗೆ, ಈ ಚಿತ್ರ ಇದೇ ಫೆಬ್ರವರಿ 15ರಂದು ತೆರೆಗಾಣಲಿದೆ.

'ಸಾರಾಂಶ'ದ ಬಗೆಗಿನ ಒಂದಷ್ಟು ವಿಚಾರಗಳನ್ನು ಚಿತ್ರತಂಡ ಹಂತ ಹಂತವಾಗಿ ಜಾಹೀರು ಮಾಡಿತ್ತು. ಇದೀಗ ಒಂದಿಡೀ ಸಿನಿಮಾದ ಆಂತರ್ಯವನ್ನು ತೆರೆದಿಡುವಂಥಾ ಟ್ರೈಲರ್ ಲಾಂಚ್ ಆಗಿದೆ. ವರ್ಷಾಂತರಗಳ ಹಿಂದೆ ಬಿಡುಗಡೆಗೊಂಡು, ಇಂದಿಗೂ ಆ ಪ್ರಭೆ ಉಳಿಸಿಕೊಂಡಿರುವ ಲೂಸಿಯಾ ಚಿತ್ರತಂಡದ ಸದಸ್ಯರು ಈ ಪತ್ರಿಕಾಗೋಷ್ಠಿಯ ಪ್ರಮುಖ ಆಕರ್ಷಣೆಯಾಗಿದ್ದರು. ಶ್ರುತಿ ಹರಿಹರನ್, ಹೇಮಂತ್ ರಾವ್ ಮಾತ್ರವಲ್ಲದೇ ಈ ಚಿತ್ರದ ನಿರ್ದೇಶಕರಾದ ಸೂರ್ಯ ವಸಿಷ್ಠ ಕೂಡಾ ಲೂಸಿಯಾ ಭಾಗವಾಗಿದ್ದವರೆ. ಇವರೆಲ್ಲರ ಸಮ್ಮುಖದಲ್ಲಿ ಸಾರಾಂಶ ಟ್ರೈಲರ್ ಬಿಡುಗಡೆಗೊಂಡಿದೆ. ಈ ಪತ್ರಿಕಾ ಗೋಷ್ಠಿಯಲ್ಲಿ ಶ್ರುತಿ ಹರಿಹರನ್, ದೀಪಕ್ ಸುಬ್ರಮಣ್ಯ, ಸೂರ್ಯ ವಸಿಷ್ಠ, ಸಂಗೀತ ನಿರ್ದೇಶಕ ಉದಿತ್ ಹರಿತಾಸ್, ರವಿ ಭಟ್, ಶ್ವೇತಾ ಗುಪ್ತ ಮುಂತಾದವರು ಹಾಜರಿದ್ದರು. ಅಂದಹಾಗೆ, ಇದು ಈ ದಿನಮಾನಕ್ಕೆ ಅತ್ಯಂತ ಅಪರೂಪವೆಂಬಂತಹ ಗುಣ ಲಕ್ಷಣಗಳನ್ನು ಒಳಗೊಂಡಿರುವ ಚಿತ್ರ. ನಿರ್ದೇಶಕ ಸೂರ್ಯ ವಸಿಷ್ಠ ಅವರೇ ಪ್ರಧಾನ ಪಾತ್ರಗಳಲ್ಲೊಂದಕ್ಕೆ ಜೀವ ತುಂಬಿದ್ದಾರೆ. ದೀಪಕ್ ಸುಬ್ರಮಣ್ಯ ವಿಶಿಷ್ಟ ಪಾತ್ರದ ಮೂಲಕ ಪ್ರೇಕ್ಷಕರನ್ನು ಮುಖಾಮುಖಿಯಾಗಲಿದ್ದಾರೆ. ಶ್ರುತಿ ಹರಿಹರನ್ ಮಾಯಾ ಎಂಬ ಪಾತ್ರವನ್ನು ಒಳಗಿಳಿಸಿಕೊಂಡಿದ್ದಾರೆ. ಈ ಎಲ್ಲ ಪಾತ್ರಗಳ ಝಲಕ್ಕುಗಳು ಸದರಿ ಟ್ರೈಲರ್ ನಲ್ಲಿ ಕಾಣಿಸಿಕೊಂಡಿವೆ.

ಈ ಸಿನಿಮಾದ ಎಲ್ಲ ಪಾತ್ರಗಳೂ ವಿಶೇಷವಾಗಿವೆ ಎಂಬುದಕ್ಕೆ ಈ ಟ್ರೈಲರ್ ನಲ್ಲಿ ಪುರಾವೆಗಳು ಸಿಗುತ್ತವೆ. ಅದರಲ್ಲೊಂದು ಪಾತ್ರವನ್ನು ಶ್ವೇತಾ ಗುಪ್ತ ನಿರ್ವಹಿಸಿದ್ದಾರೆ. ಕನ್ನಡತನದ ಬಗ್ಗೆ ಅತೀವ ಪ್ರೀತಿ ಆಸಕ್ತಿ ಇಟ್ಟುಕೊಂಡಿರೋ ಕನ್ನಡೇತರ ಬುಕ್ ಪಬ್ಲಿಷರ್ ಪಾತ್ರವಿದೆ. ಆ ಪಾತ್ರದ ಬಗ್ಗೆ ನಿರ್ದೇಶಕರು ಈ ಪತ್ರಿಕಾ ಗೋಷ್ಠಿಯಲ್ಲಿ ಒಂದಷ್ಟು ವಿವರಗಳನ್ನು ಬಿಚ್ಚಿಟ್ಟಿದ್ದಾರೆ. ಸದರಿ ಟ್ರೈಲರ್ನಲ್ಲಿ ಪ್ರಧಾನವಾಗಿ ಎರಡು ಬೊಂಬೆ ಪಾತ್ರಗಳು ನೋಡುಗರನ್ನು ಸೆಳೆದುಕೊಂಡಿವೆ. ಅದನ್ನು ರಾಮ್ ಪ್ರಸಾದ್ ಬಾಣಾವರ ಮತ್ತು ಸತೀಶ್ ಕುಮಾರ್ ನಿರ್ವಹಿಸಿದ್ದಾರೆ. ಅದು ಟ್ರೈಲರ್ ನ ಪ್ರಮುಖ ಆಕರ್ಷಣೆಯಾಗಿಯೂ ಗಮನ ಸೆಳೆಯುವಂತಿದೆ. ರವಿ ಕಶ್ಯಪ್ ಮತ್ತು ಆರ್. ಕೆ ನಲ್ಲಮ್ ವಿಭಾ ಕಶ್ಯಪ್ ಪ್ರೊಡಕ್ಷನ್ಸ್ ಮತ್ತು ಕ್ಲಾಪ್ ಬೋರ್ಡ್ ಪ್ರೊಡಕ್ಷನ್ ಮೂಲಕ ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ. ಆಸಿಫ್ ಕ್ಷತ್ರಿಯಾ, ರವಿ ಭಟ್, ರಾಮ್ ಮಂಜುನಾಥ್, ಸತೀಶ್ ಕುಮಾರ್, ಪೃಥ್ವಿ ಬನವಾಸಿ ಮುಂತಾದವರ ತಾರಾಗಣ, ಉದಿತ್ ಹರಿತಾಸ್ ಸಂಗೀತ ನಿರ್ದೇಶನ, ಅಪರಾಜಿತ್ ಹಿನ್ನೆಲೆ ಸಂಗೀತ ಮತ್ತು ಪ್ರದೀಪ್ ನಾಯಕ್ ಸಂಕಲನ ಈ ಚಿತ್ರಕ್ಕಿದೆ. ಸಾರಾಂಶದ ಮೂಲಕ ಅನಂತ್ ಭಾರದ್ವಾಜ್ ಎಂಬ ಪ್ರತಿಭಾನ್ವಿತ ಛಾಯಾಗ್ರಾಹಕ ಪರಿಚಯವಾಗುತ್ತಿದ್ದಾರೆ. ಅವರ ಛಾಯಾಗ್ರಹಣ ಕೂಡಾ ಸಾರಾಂಶದ ಶಕ್ತಿಯಂತಿದೆ ಎಂಬುದು ಚಿತ್ರತಂಡದ ಭರವಸೆ...

# ಕೊಹ್ಲಿ ಜೊತೆಗಿನ ನೆನಪು ಹಂಚಿಕೊಂಡ ಸ್ಟಾರ್ ವೇಗಿ





ಇಂಡಿಯನ್ ಪ್ರೀಮಿಯರ್ ಲೀಗ್ ಇತಿಹಾಸದಲ್ಲೇ ದಾಖಲೆ ಬರೆದ ಆಸ್ಟ್ರೇಲಿಯಾ ತಂಡದ ಸ್ಟಾರ್ ವೇಗಿ ಮಿಚೆಲ್ ಸ್ಟಾರ್ಕ್ 2024ರ ಐಪಿಎಲ್ ಟೂರ್ನಿಯನ್ನೇ ಎದುರು ನೋಡುತ್ತಿದ್ದಾರಂತೆ. ಈ ವಿಷಯವನ್ನು ಸಂದರ್ಶನವೊಂದರಲ್ಲಿ ತಾವೇ ಖುದ್ದಾಗಿ ಹೇಳಿಕೊಂಡಿದ್ದಾರೆ. ಈ ವೇಳೆ ಆರ್‌ಸಿಬಿ ತಂಡದಲ್ಲಿದ್ದಾಗ ವಿರಾಟ್ ಕೊಹ್ಲಿ ಜೊತೆಗಿನ ನೆನಪುಗಳನ್ನ ಹಂಚಿಕೊಂಡಿದ್ದಾರೆ.

ಸಂದರ್ಶನವೊಂದರಲ್ಲಿ ಮಾತನಾಡಿರುವ ಸ್ಟಾರ್ಕ್, ನಾನು ಖಿಃ ಪ್ರವೇಶಿಸಿದಾಗ ಕೊಹ್ಲಿ ಟೀಂ ಕ್ಯಾಪ್ಟನ್ ಆಗಿದ್ದರು. ಆಗಲೇ ನಾನು ಅವರನ್ನು ಸರಿಯಾಗಿ ತಿಳಿದುಕೊಂಡೆ. ಮೈದಾನದ ಹೊರಗೆ ಮತ್ತು ಮೈದಾನದ ಆಚೆ ವಿಭಿನ್ನ ವ್ಯಕ್ತಿತ್ವ ಅವರದ್ದು. ಈಗಲೂ ಅವರನ್ನು ಹೆಚ್ಚು ನೆನಪಿಸಿಕೊಳ್ತೇನೆ ಎಂದಿದ್ದಾರೆ.

2022ರ ಐಪಿಎಲ್ ಟೂರ್ನಿಗೆ ದುಬಾರಿ ಬೆಲೆಗೆ ಬಿಕರಿಯಾಗಿದ್ದ ಕ್ರಿಸ್‌ಮೋರಿಸ್ ತನಗಿಂತಲೂ ಹೆಚ್ಚು ಬೆಲೆಗೆ ಖರೀದಿಯಾಗಿರುವ ಬಗ್ಗೆ ಮಾತನಾಡಿದ್ದಾರೆ. ಸ್ಟಾರ್ಕ್, ತನ್ನ ಸಾಮರ್ಥ್ಯದಿಂದ ಇದನ್ನ ಸಾಧ್ಯವಾಗಿಸಿಕೊಂಡಿದ್ದಾರೆ. ಇತರ ಕ್ರೀಡೆಗಳೊಂದಿಗೆ ಕ್ರಿಕೆಟ್‌ನಲ್ಲೂ ವಿಶ್ವದ ಅತ್ಯುತ್ತಮ ಆಟಗಾರರಿಗೆ ಹೆಚ್ಚಿನ ಸಂಭಾವನೆ ನೀಡುತ್ತಿರುವುದು ಅದ್ಭುತವಾಗಿದೆ. ಇದು ಸಾಧನೆಯಾದರೂ ಹೆಚ್ಚುವರಿ ಒತ್ತಡ ತರುತ್ತದೆ. ಆದ್ರೆ ಮಿಚೆಲ್ ಸ್ಟಾರ್ಕ್ ಮತ್ತು ಕಮ್ಮಿನ್ಸ್ ಆ ಒತ್ತಡ ನಿಭಾಯಿಸಬಲ್ಲರು. ಅದಕ್ಕಾಗಿಯೇ ಅವರನ್ನು ಹೆಚ್ಚಿನ ಹಣ ನೀಡಿ ಖರೀದಿಸಲಾಗಿದೆ ಎಂದು ಮೋರಿಸ್ ತಿಳಿಸಿದ್ದಾರೆ.

ಆಸೀಸ್ ಎಡಗೈ ವೇಗಿ ಮಿಚೆಲ್ ಸ್ಟಾರ್ಕ್ 2015ರಲ್ಲಿ ಐಪಿಎಲ್‌ನಲ್ಲಿ ಆಡಿದ್ದರು. ಆರ್ ಸಿಬಿ ತಂಡದಲ್ಲಿ ಮಿಂಚಿದ್ದರು. ಆ ನಂತರ ಐಪಿಎಲ್‌ನಿಂದ ದೂರ ಉಳಿದಿದ್ದರು. 2023ರಲ್ಲಿ ಆಶಸ್ ಟೂರ್ನಿಯಿಂದಾಗಿ ಐಪಿಎಲ್‌ನಿಂದ ಹೊರಗುಳಿದ್ದರು.

2024ರ ಐಪಿಎಲ್ ಟೂರ್ನಿಗೆ ಕಳೆದ ಡಿಸೆಂಬರ್ 19ರಂದು ದುಬೈನಲ್ಲಿ ನಡೆದ ಐಪಿಎಲ್ ಮಿನಿ ಹರಾಜಿನಲ್ಲಿ ಆಸ್ಟ್ರೇಲಿಯಾ ತಂಡದ ಸ್ಟಾರ್ ಆಟಗಾರ ಮಿಚೆಲ್ ಸ್ಟಾರ್ಕ್ ಬರೋಬ್ಬರಿ 24.75 ಕೋಟಿ ರೂ.ಗೆ ಬಿಕರಿಯಾಗಿದ್ದಾರೆ. ಈ ಮೂಲಕ ಐಪಿಎಲ್ ಇತಿಹಾಸದಲ್ಲೇ ದುಬಾರಿ ಮೊತ್ತಕ್ಕೆ ಬಿಡ್ ಆದ ಆಟಗಾರ ಎಂಬ ಕೀರ್ತಿಗೆ ಪಾತ್ರರಾಗಿದ್ದಾರೆ.

2023ರ ಐಪಿಎಲ್ ಮಿನಿ ಹರಾಜಿನಲ್ಲಿ ಇಂಗ್ಲೆಂಡ್‌ನ ಸ್ಟಾರ್ ಆಲ್‌ರೌಂಡರ್ ಸ್ಯಾಮ್ ಕರ್ರನ್ 18.50 ಕೋಟಿ ರೂ.ಗೆ ಮಾರಾಟವಾಗಿದ್ದು ಇತಿಹಾಸವಾಗಿತ್ತು. ಆಸೀಸ್ ತಂಡದ ನಾಯಕ ಪ್ಯಾಟ್ ಕಮ್ಮಿನ್ಸ್ 20.50 ಕೋಟಿ ರೂ. ಗೆ ಮಾರಾಟವಾಗಿ ಇತಿಹಾಸ ನಿರ್ಮಿಸಲು ಸಜ್ಜಾಗಿದ್ದರು. ಆದ್ರೆ, 2023ರ ಏಕದಿನ ವಿಶ್ವಕಪ್ ವಿಜೇತ ತಂಡದಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದ ಮಿಚೆಲ್ ಸ್ಟಾರ್ಕ್ 24.75 ಕೋಟಿ ರೂ.ಗೆ ಕೋಲ್ಕತ್ತಾ ನೈಟ್‌ರೈಡರ್ಸ್ (ಕೆಕೆಆರ್) ತಂಡದ ಪಾಲಾಗಿ ದಾಖಲೆ ಬರೆದರು.

# ಐಸಿಯುನಲ್ಲಿ ಮಯಾಂಕ್ ಅಗರ್ವಾಲ್



ವಿಮಾನದಲ್ಲಿ ಸೀಟಿನ ಮುಂಭಾಗ ಇಟ್ಟಿದ್ದ ನೀರನ್ನು ಕುಡಿದು ಅಸ್ವಸ್ಥರಾದ ಕಾರಣ ಕರ್ನಾಟಕದ ರಣಜಿ ಕ್ಯಾಪ್ಟನ್ ಮಯಾಂಕ್ ಅಗರ್ವಾಲ್ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅವರ ಆರೋಗ್ಯಕ್ಕೆ ಸಂಬಂಧಿಸಿದಂತೆ ಮತ್ತೊಂದು ಬಿಗ್ಸ್ ಅಪ್ಡೇಟ್ ಹೊರಬಿದ್ದಿದೆ.

ಅಗರ್ತಲಾ ಐಎಲ್‌ಎಸ್ ಆಸ್ಪತ್ರೆ ಅವರ ಆರೋಗ್ಯಕ್ಕೆ ಸಂಬಂಧಿಸಿದಂತೆ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದೆ. ಮಯಾಂಕ್ ಅಗರ್ವಾಲ್, ಸದ್ಯ ವೈದ್ಯಕೀಯವಾಗಿ ಸ್ಥಿರವಾಗಿದ್ದಾರೆ. ಅವರನ್ನು ನಿರಂತರ ವೈದ್ಯಕೀಯ ಮೇಲ್ವಿಚಾರಣೆಯಲ್ಲಿ ಇರಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

**ಮಯಾಂಕ್‌ಗೆ ಏನಾಗಿತ್ತು :** ಕರ್ನಾಟಕ ರಣಜಿ ತಂಡದೊಂದಿಗೆ ತ್ರಿಪುರಾದ ಅಗರ್ತಲಾದಿಂದ ಸೂರತ್‌ಗೆ ವಿಮಾನದಲ್ಲಿ ಅಗರ್ವಾಲ್ ಪ್ರಯಾಣ ಬೆಳೆಸಿದ್ದರು. ವಿಮಾನದಲ್ಲಿ ಕುಳಿತಿದ್ದ ಮಯಾಂಕ್, ಸೀಟಿನ ಮುಂಭಾಗದಲ್ಲಿ ಇಟ್ಟಿದ್ದ ನೀರನ್ನು ಕುಡಿದು ಅಸ್ವಸ್ಥಗೊಂಡಿದ್ದರು.

ನೀರು ಕುಡಿಯುತ್ತಿದ್ದಂತೆ ಮಯಾಂಕ್ ನಾಲಿಗೆ, ಬಾಯಿಗೆ ಸುಟ್ಟ ಅನುಭವವಾಗಿದೆ. ಪರಿಣಾಮ ಅವರು ಅಸ್ವಸ್ಥಗೊಂಡಿದ್ದಾರೆ. ತಕ್ಷಣ ಅವರನ್ನು ಅಗರ್ತಲಾದ ಐಎಲ್‌ಎಸ್ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿತ್ತು. ತ್ರಿಪುರಾ ವಿರುದ್ಧ ಸೋಮವಾರ ನಡೆದ ರಣಜಿ ಪಂದ್ಯದಲ್ಲಿ ಕರ್ನಾಟಕ ಗೆಲುವು ಸಾಧಿಸಿತ್ತು. ಮುಂದಿನ ಪಂದ್ಯಕ್ಕಾಗಿ ಸೂರತ್‌ಗೆ ಮಯಾಂಕ್ ಪ್ರಯಾಣ ಬೆಳೆಸಿದ್ದರು.

## ಲೋಕಸಭೆಯಲ್ಲಿ ಜನ ಮತ ಹಾಕಿಲ್ಲ ಎಂದರೆ

# ಗ್ಯಾರಂಟಿ ಅವಶ್ಯಕತೆ ಇಲ್ಲಾ ಎಂದರ್ಥ



**ಬೆಂಗಳೂರು:** ನಾವು ಗ್ಯಾರಂಟಿ ಕೊಟ್ಟಿದ್ದು ಚುನಾವಣೆಗಾಗಿಯೇ. ಲೋಕಸಭೆಯಲ್ಲಿ ಜನ ಮತ ಹಾಕಿಲ್ಲ ಎಂದರೆ ಗ್ಯಾರಂಟಿ ಅವಶ್ಯಕತೆ ಇಲ್ಲಾ ಎಂದರ್ಥ ಎಂದು ಮಾಗಡಿ ಶಾಸಕ ಹೆಚ್‌ಸಿ ಬಾಲಕೃಷ್ಣ ಹೇಳಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಸೋತರೆ ಗ್ಯಾರಂಟಿಗಳು ರದ್ದಾಗಬಹುದು ಎಂಬ ಬಾಲಕೃಷ್ಣ ಅವರ ಹೇಳಿಕೆ ಎಲ್ಲೆಡೆ ಚರ್ಚೆಗೆ ಗ್ರಾಸವಾಗಿತ್ತು. ಈ ಕುರಿತು ಮಾಧ್ಯಮದೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಬದಲು ಅಭಿವೃದ್ಧಿಗೆ ಹಣ ಬಳಸಲಿ ಅನ್ನೋದು ನನ್ನ ವೈಯುಕ್ತಿಕ ಅಭಿಪ್ರಾಯ. ನಾವು ಗ್ಯಾರಂಟಿ ಕೊಟ್ಟಿರೋದೇ ಚುನಾವಣೆ ಗೆಲ್ಲೋಕೆ. ಅವರು ದೇವಸ್ಥಾನ ಉದ್ಘಾಟನೆ ಮಾಡಿದ್ದು, ಮಂತ್ರಾಕ್ಷತೆ ಕೊಟ್ಟಿದ್ದು ಚುನಾವಣೆ ಗೆಲ್ಲೋಕೆ. ಬಿಜೆಪಿಯವರು ಲೋಕಸಭೆ ಚುನಾವಣೆ ದೃಷ್ಟಿಯಿಂದ ದೇವಸ್ಥಾನ ಉದ್ಘಾಟನೆ ಮಾಡಿದರು. ನಮ್ಮ ದೀಪ ನಾವೆ ಹಚ್ಚಬೇಕು. ನಮ್ಮ ಕುಂಕುಮ ನಮಗೆ ನಾಮ ಹಾಕಿ ಅವರು ಅಧಿಕಾರಕ್ಕೆ ಬಂದರು ಎಂದು ಕಿಡಿಕಾರಿದರು.

ಪೂರ್ತಿ ಆಗದ ದೇವಸ್ಥಾನವನ್ನು ತರಾತುರಿಯಲ್ಲಿ ಉದ್ಘಾಟನೆ ಮಾಡಿದ್ದು ಚುನಾವಣೆಗಾಗಿ. ಅವರು ಮಾಡಿರುವುದು ಚುನಾವಣೆಗಾಗಿ. ನಾವು ಗ್ಯಾರಂಟಿ ಕೊಟ್ಟಿದ್ದು ಚುನಾವಣೆಗಾಗಿಯೇ. ಸಿಎಂ ಡಿಸಿಎಂ ಇಬ್ಬರ ಹತ್ತಿರವೂ ಈ ವಿಚಾರ ಚರ್ಚೆ ಮಾಡಿದ್ದೇನೆ. ಅವರು ಏನೇ ಹೇಳದಿರಬಹುದು. ನನ್ನ ವೈಯುಕ್ತಿಕ ಅಭಿಪ್ರಾಯ ಲೋಕಸಭೆಯಲ್ಲಿ ಕಾಂಗ್ರೆಸ್‌ಗೆ ಹಿನ್ನಡೆ ಆದರೆ ಜನರಿಗೆ ಗ್ಯಾರಂಟಿ ಬೇಡವಾಗಿದೆ ಎಂದು ತೀರ್ಮಾನ ಮಾಡಬೇಕು ಎಂದರು.

ಗ್ಯಾರಂಟಿಯಿಂದಾಗಿ ಅಭಿವೃದ್ಧಿಗೆ ಹಣ ಕೊರತೆ ಆಗುತ್ತಿದೆ. 60 ಸಾವಿರ ಕೋಟಿ ಹಣ ಗ್ಯಾರಂಟಿಗೆ ಬೇಕು. ಜನ ಈ ಗ್ಯಾರಂಟಿಗೆ ಮತ ಹಾಕಿಲ್ಲ ಎಂದರೆ ಅದೇ ಹಣವನ್ನು ಅಭಿವೃದ್ಧಿಗೆ ಬಳಸೋಣ. ನನ್ನ ಕ್ಷೇತ್ರಕ್ಕೂ 500 ಕೋಟಿ ಅಭಿವೃದ್ಧಿಗೆ ಸಿಗುತ್ತದೆ ಎಂದು ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡರು.

# ಕೆರಗೋಡು ಗ್ರಾಮದ ಮನೆ ಮನೆಗಳ ಮೇಲೆ ಹನುಮ ಧ್ವಜ



**ಮಂಡ್ಯ:** ಕೆರಗೋಡು ಹನುಮಧ್ವಜ ವಿವಾದದ ಈಗ ಅಭಿಯಾನದ ಸ್ವರೂಪ ಪಡೆದುಕೊಂಡಿದೆ. ಕೆರಗೋಡು ಗ್ರಾಮಸ್ಥರು ಹನುಮ ಧ್ವಜ ಅಭಿಯಾನಕ್ಕೆ ಮುಂದಾಗಿದ್ದಾರೆ. ಗ್ರಾಮದ ಹೃದಯ ಭಾಗದಲ್ಲಿ ಹನುಮ ಧ್ವಜ ಹಾರಿಸಲು ಸರ್ಕಾರ ಅನುಮತಿ ನೀಡಿಲ್ಲ. ಈ ಹಿನ್ನೆಲೆ ಗ್ರಾಮಸ್ಥರು ಮನೆಗಳ ಮೇಲೆ ಹನುಮಧ್ವಜ ಹಾಕಲು ಮುಂದಾಗಿದ್ದಾರೆ. ಉದ್ದೇಶ ಪೂರ್ವಕವಾಗಿ ಪೊಲೀಸರು ದೌರ್ಜನ್ಯ ನಡೆಸುತ್ತಿದ್ದಾರೆ ಎಂದು ಲಾಠಿ ಏಟಿನಿಂದಾದ ಗಾಯ ತೋರಿಸಿ ಗ್ರಾಮಸ್ಥರು ಕಣ್ಣೀರು ಹಾಕುತ್ತಿದ್ದಾರೆ. ಈ ನಡುವೆ ಇವತ್ತು ಬೆಳಗ್ಗೆ ಬಿಜೆಪಿ ನಿಯೋಗ ಗ್ರಾಮಕ್ಕೆ ಭೇಟಿ ನೀಡಿದ್ದು, ಗ್ರಾಮಸ್ಥರಿಂದ ಘಟನೆಯ ಬಗ್ಗೆ ಮಾಹಿತಿ ಪಡೆದುಕೊಳ್ಳುತ್ತಿದೆ.

ನಿನ್ನೆ ಕೆರಗೋಡು ಗ್ರಾಮಕ್ಕೆ ಬಿಜೆಪಿ ನಿಯೋಗ ಭೇಟಿ ನೀಡಿತ್ತು. ಈ ವೇಳೆ ಗ್ರಾಮದ ಪಾಪು ಎಂಬವರು ನಮಗೆ ಯಾವ ಬಾವುಟ ಬೇಡ ಎಂದು ಬೇಸರ ವ್ಯಕ್ತಪಡಿಸಿದರು.

ಹನುಮಧ್ವಜ ವಿವಾದದ ಹಿನ್ನೆಲೆ ಪಾಪು ಮತ್ತು ಅವರ ಅಪ್ರಾಪ್ತ ಮಗನನ್ನು ಪೊಲೀಸರು ಠಾಣೆಗೆ ಕರೆದುಕೊಂಡು ಹೋಗಿದ್ದರು ಎಂದು ತಿಳಿದು ಬಂದಿದೆ. ನಿನ್ನೆ ಬೆಳಗ್ಗೆ ಇಬ್ಬರನ್ನೂ ಪೊಲೀಸರು ಕಳುಹಿಸಿದ್ದಾರೆ. ಬಿಜೆಪಿ ನಿಯೋಗದ ಭೇಟಿ ವೇಳೆ ಪಾಪು ಕುಟುಂಬ ತಮ್ಮ ನೋವು ತೋಡಿಕೊಂಡಿದ್ದಾರೆ.

ಕಾಂಗ್ರೆಸ್ ವಿರುದ್ಧ ಆರ್.ಅಶೋಕ್ ವಾಗ್ದಾಳಿ

ಮಂಡ್ಯ ಜಿಲ್ಲೆಯ ಕೆರಗೋಡು ಗ್ರಾಮದಲ್ಲಿ ಹನುಮ ಧ್ವಜ ಇಳಿಸಿದ ಮೇಲೆ ಹಿಂದೂಗಳ ಕೆಂಗಣ್ಣಿಗೆ ಗುರಿಯಾಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಈಗ ಧಿಡೀರನೆ ರಾಷ್ಟ್ರ ಧ್ವಜದ ಮೇಲೆ ಎಲ್ಲಿಲ್ಲದ ಭಕ್ತಿ ಉಕ್ಕಿ ಹರಿಯುತ್ತಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

2011ರಲ್ಲಿ ಗಣರಾಜ್ಯೋತ್ಸವದ ದಿನದಂದು ಜಮ್ಮು ಕಾಶ್ಮೀರದ ಶ್ರೀನಗರದ ಲಾಲ್ ಚೌಕ್ ನಲ್ಲಿ ರಾಷ್ಟ್ರ ಧ್ವಜ ಹಾರಿಸಲು ಬಿಜೆಪಿ ಏಕತಾ ಯಾತ್ರೆ ಕೈಗೊಂಡಿದ್ದಾಗ ರಾಷ್ಟ್ರ ಧ್ವಜ ಹಾರಿಸಲು ಬಿಡದೆ ಬಿಜೆಪಿ ನಾಯಕರನ್ನು ಬಂದಿಸಿದ್ದು ಇದೇ ಕಾಂಗ್ರೆಸ್ ಪಕ್ಷದ ಸರ್ಕಾರ. ಹುಬ್ಬಳ್ಳಿಯ ಈದ್ಗಾ ಮೈದಾನದಲ್ಲಿ ರಾಷ್ಟ್ರಧ್ವಜ ಹಾರಾಡುವುದನ್ನೂ ತಡೆದಿದ್ದು ಕೂಡ ಇದೇ ಕಾಂಗ್ರೆಸ್ ಪಕ್ಷ. ಬೆಂಗಳೂರಿನ ಚಾಮರಾಜಪೇಟೆಯಲ್ಲಿ 75 ವರ್ಷಗಳ ನಂತರ ರಾಷ್ಟ್ರ ಧ್ವಜ ಹಾರಿಸಲು ಅವಕಾಶ ನೀಡಿದ್ದು ಹಿಂದಿನ ಬಿಜೆಪಿ ಸರ್ಕಾರದಲ್ಲಿ ನಾನು ಕಂದಾಯ ಸಚಿವನಾಗಿದ್ದಾಗ.

ಕೇಸರಿ, ಕುಂಕುಮ ಕಂಡರೆ ನನಗೆ ಭಯ ಅಂತ ಮುಚ್ಚುಮರೆಯಿಲ್ಲದೆ ಹೇಳಿಕೊಂಡಿರುವ ತಮಗೆ ಹನುಮ ಧ್ವಜದ ಮೇಲಿನ ನಿಮ್ಮ ದ್ವೇಷವನ್ನ ಮರೆಮಾಚಲು ರಾಷ್ಟ್ರಧ್ವಜದ ಮುಖವಾಡ ಹಾಕಿಕೊಳ್ಳುವ ಅಗತ್ಯ ಏನಿದೆ ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನೆ ಮಾಡಿದ್ದಾರೆ.

ನಮ್ಮ ರಾಷ್ಟ್ರಧ್ವಜದಲ್ಲೇ ಕೇಸರಿ ಬಣ್ಣವಿದೆ. ಕೇಸರಿ ಬಣ್ಣ ಹಿಂದೂ ಧರ್ಮದ ಸಾಧು-ಸಂತರು, ಸನ್ಯಾಸಿಗಳು, ಮಠಾಧಿಪತಿಗಳು ಧರಿಸುವ ಬಣ್ಣ. ಹಿಂದೂಗಳ ಪರಮ ಪವಿತ್ರ ಲಾಂಛನ ಕೇಸರಿ ಬಣ್ಣ. ತ್ಯಾಗದ ಸಂಕೇತವಾದ ಕೇಸರಿ ಬಣ್ಣ ಶಾಶ್ವತವೇ ಹೊರತು ತಮ್ಮ ಅಧಿಕಾರವಲ್ಲ. ತಾವು ಹನುಮ ಧ್ವಜವನ್ನು ಇಳಿಸಿದ ರೀತಿಯಲ್ಲೇ ಹಿಂದೂಗಳು ತಮ್ಮನ್ನು ಕುರ್ಚಿಯಿಂದ ಇಳಿಸುವ ದಿನ ಬಹಳ ದೂರವಿಲ್ಲ ಎಂದು ಆರ್.ಅಶೋಕ್ ಭವಿಷ್ಯ ನುಡಿದಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com